VOLUME: 16 | 13 MAY 2026 | ಬುಧವಾರ | RS: 2 | PAGE: 06 ISSUE: 95 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಗೋಲ್ಡನ್ ಮೂವೀಸ್ ಲಾಂಛನದಲ್ಲಿ ಸದಭಿರುಚಿ ಚಿತ್ರಗಳನ್ನು ನಿರ್ಮಾಣ ಮಾಡುತ್ತಾ ಬರುತ್ತಿರುವ ನಿರ್ಮಾಪಕಿ ಶಿಲ್ಪಾ ಗಣೇಶ್ ಅವರು ಪ್ರಸ್ತುತ ಕನ್ನಡ ಹಾಗೂ ತುಳುವಿನಲ್ಲಿ ನಿರ್ಮಿಸಿರುವ ಚಿತ್ರ "ಪಿಚ್ಚರ್". ಸಂದೀಪ ಬೆದ್ರ ನಿರ್ದೇಶನದ ಈ ಚಿತ್ರದ ನಾಯಕರಾಗಿ ನಿತ್ಯಪ್ರಕಾಶ್ ಬಂಟ್ವಾಳ್ ನಟಿಸಿದ್ದಾರೆ.

BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಜುಲೈ 1 ರಿಂದ ವಿಬಿ ಜಿ ರಾಮ್ ಜಿ ಕಾಯ್ದೆ ಅನುಷ್ಠಾನ ವಿಚಾರವಾಗಿ ಮಾತನಾಡಿ, ಕೇಂದ್ರ ಸರ್ಕಾರದ ಮಹತ್ವದ ನರೇಗಾ ಯೋಜನೆಯನ್ನು ಮನಮೋಹನ್ ಸಿಂಗ್ ಜಾರಿಗೆ ತಂದಿದ್ರು. ಗ್ರಾಮೀಣ ಭಾಗದಲ್ಲಿ ಉದ್ಯೋಗ ಇಲ್ಲದವರಿಗೆ ಉದ್ಯೋಗ ಒದಗಿಸುವ ಯೋಜನೆ ಇದು. ಜನರ ಕೆಲಸಕಾರ್ಯ ಮತ್ತು ಅಭಿವೃದ್ಧಿ ಕೆಲಸ ಈ ಯೋಜನೆಯಡಿ ಆಗುತ್ತಿದ್ದವು. ಆ ಯೋಜನೆಯನ್ನು ಬೆಂಬಲಿಸುತ್ತಲೇ ಕೇಂದ್ರ ಸರ್ಕಾರ ಬಂದಿತ್ತು. ಆದ್ರೆ ಈಗ ಬೆಂಬಲಿಸುತ್ತಿಲ್ಲ ಯಾವ ದುರುದ್ದೇಶ ಇಟ್ಟುಕೊಂಡು ನರೇಗಾ ರದ್ದು ಮಾಡುತ್ತಿದ್ದಾರೋ ಗೊತ್ತಿಲ್ಲ. ರಾಜ್ಯದಲ್ಲಿ ನಾವೇ ಈ ಯೋಜನೆಗೆ ಸಪೋರ್ಟ್ ಮಾಡಬೇಕು ಅಂತ ಚರ್ಚಿಸಿದ್ದೇವೆ.

# ಜಿಲೆಟಿನ್ ಕಡ್ಡಿ ಪ್ರಕರಣ ಎನ್‌ಐಎಗೆ

ಬೆಂಗಳೂರು: ಜಿಲೆಟಿನ್ ಕಡ್ಡಿ ಸಿಕ್ಕ ಜಾಗದಲ್ಲಿ ಟೈಮರ್ ಪತ್ತೆ ಸಂಬಂಧ ತನಿಖೆ ನಡೆಸಲಾಗುತ್ತಿದೆ. ಈ ಪ್ರಕರಣವನ್ನು ಎನ್‌ಐಎಗೆ ತನಿಖೆ ಮಾಡಲು ಕೊಡುತ್ತೇವೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಇಂದು ಮಾತನಾಡಿದ ಅವರು, ಕರೆ ಮಾಡಿ ಬಾಂಬ್ ಬೆದರಿಕೆ ಹಾಕಿದವನನ್ನು ಪೊಲೀಸರು ಬಂಧಿಸಿದ್ದಾರೆ. ಆತನ ತನಿಖೆಯೂ ಆಗುತ್ತಿದೆ. ಹೋಗುವ ದಾರಿಯಲ್ಲಿ ಸಿಕ್ಕ ಜಿಲೆಟಿನ್ ಕಡ್ಡಿ ಸೇರಿದಂತೆ ಏನೆಲ್ಲ ಸಿಕ್ಕಿದೆಯೋ ಅದನ್ನು ತನಿಖೆ ಮಾಡಲಾಗುತ್ತಿದೆ ಎಂದರು.

ಎನ್‌ಐಎ ಕೂಡ ತನಿಖೆ ಮಾಡಲು ಕೇಳಿದ್ದಾರೆ. ಅವರಿಗೂ ತನಿಖೆ ಮಾಡಲು ಕೊಡುತ್ತೇವೆ. ಪ್ರಧಾನಿ ಬರುವ ಕಾರ್ಯಕ್ರಮಕ್ಕೆ ಹೈಲೆವೆಲ್ ಸೆಕ್ಯೂರಿಟಿ ಇರುತ್ತದೆ. ನಾವು ಹಾಗೂ ಕೇಂದ್ರ ಸೆಕ್ಯೂರಿಟಿ ಕೊಡುತ್ತೇವೆ. ರಾಜ್ಯ ಸರ್ಕಾರಕ್ಕೂ ಸೂಚನೆ ಬಂದಿರುತ್ತದೆ. ಭದ್ರತೆ ನೀಡಿರುತ್ತೇವೆ. ಕಾರ್ಯಕ್ರಮಕ್ಕೆ ಬರುವ ಎರಡು ಗಂಟೆ ಮುಂಚೆ ಅಂದರೆ ಬೆಳಗ್ಗೆ 9 ಗಂಟೆಗೆ ಜಿಲೆಟಿನ್ ಕಡ್ಡಿ ಪತ್ತೆ ಹಚ್ಚಿದ್ದಾರೆ. ಇದು ಒಳ್ಳೆಯ ಕೆಲಸ. ಟೆರರಿಸಂಗೆ ಲಿಂಕ್ ಇರುವ ವಿಚಾರ ಈಗಲೇ ಹೇಳೋದಕ್ಕೆ ಬರಲ್ಲ. ತನಿಖೆ ಆಗಲಿ ನೋಡೋಣ ಎಂದು ಪ್ರತಿಕ್ರಿಯೆ ನೀಡಿದರು.

ಶೃಂಗೇರಿಯಲ್ಲಿ ಮತ್ತೆ ರಾಜೇಗೌಡರಿಗೆ ಗೆಲುವು ವಿಚಾರವಾಗಿ ಮಾತನಾಡಿ, ನ್ಯಾಯಾಲಯ ಏನು ತೀರ್ಪು ಕೊಡುತ್ತೋ ಅದನ್ನು ನೋಡಬೇಕು. ಅಲ್ಲಿ ರಿ ಕೌಂಟ್ ಮಾಡಿದಾಗ 250 ಮತ ಹೆಚ್ಚು ಬರುತ್ತೆ ಅಂದರೆ ಏನು ಅರ್ಥ?. ಕೌಂಟಿಂಗ್ ಸರಿಯಾಗಿಲ್ಲ ಎಂದು ಅರ್ಥ ಅಲ್ವಾ?. ಅಧಿಕಾರಿಗಳ ಮೇಲೆ ಕ್ರಮ ಆಗಬೇಕಲ್ವಾ?. ಈ ಹಿಂದೆ ಕೌಂಟ್ ಮಾಡಿದ್ದು ಸರಿ ಎಂದು ಸುಪ್ರೀಂ ಕೋರ್ಟ್ ತಡೆ ನೀಡಿದೆ. ಟ್ಯಾಂಪರಿಂಗ್ ಆಗಿರೋ ದೂರಿನ ಬಗ್ಗೆ ರಾಜ್ಯ ಪೊಲೀಸರು ತನಿಖೆ ಮಾಡ್ತಿದ್ದಾರೆ. ಎಫ್‌ಎಸ್‌ಎಲ್‌ನಲ್ಲೂ ಚೆಕ್ ಮಾಡ್ತಾರೆ ಎಂದರು.



ಜುಲೈ 1 ರಿಂದ ವಿಬಿ ಜಿ ರಾಮ್ ಜಿ ಕಾಯ್ದೆ ಅನುಷ್ಠಾನ ವಿಚಾರವಾಗಿ ಮಾತನಾಡಿ, ಕೇಂದ್ರ ಸರ್ಕಾರದ ಮಹತ್ವದ ನರೇಗಾ ಯೋಜನೆಯನ್ನು ಮನಮೋಹನ್ ಸಿಂಗ್ ಜಾರಿಗೆ ತಂದಿದ್ರು. ಗ್ರಾಮೀಣ ಭಾಗದಲ್ಲಿ ಉದ್ಯೋಗ ಇಲ್ಲದವರಿಗೆ ಉದ್ಯೋಗ ಒದಗಿಸುವ ಯೋಜನೆ ಇದು. ಜನರ ಕೆಲಸಕಾರ್ಯ ಮತ್ತು ಅಭಿವೃದ್ಧಿ ಕೆಲಸ ಈ ಯೋಜನೆಯಡಿ ಆಗುತ್ತಿದ್ದವು. ಆ ಯೋಜನೆಯನ್ನು ಬೆಂಬಲಿಸುತ್ತಲೇ ಕೇಂದ್ರ ಸರ್ಕಾರ ಬಂದಿತ್ತು. ಆದ್ರೆ ಈಗ ಬೆಂಬಲಿಸುತ್ತಿಲ್ಲ ಎಂದರು.

ಯಾವ ದುರುದ್ದೇಶ ಇಟ್ಟುಕೊಂಡು ನರೇಗಾ ರದ್ದು ಮಾಡುತ್ತಿದ್ದಾರೋ ಗೊತ್ತಿಲ್ಲ. ರಾಜ್ಯದಲ್ಲಿ ನಾವೇ ಈ ಯೋಜನೆಗೆ ಸಪೋರ್ಟ್ ಮಾಡಬೇಕು ಅಂತ ಚರ್ಚಿಸಿದ್ದೇವೆ. ಅದಕ್ಕೆ ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಳ್ಳುತ್ತದೆ. ಈ ಯೋಜನೆಯನ್ನು ನಿಲ್ಲಿಸೋಕೆ ಭ್ರಷ್ಟಾಚಾರ ಕಾರಣ ಅಂತ ಹೇಳ್ತಾರೆ. ಇದರ ಜೊತೆಗೆ ದುರುಪಯೋಗ ಸೇರಿ ಹಲವು ಕಾರಣ ನೀಡಿದ್ದಾರೆ. ಆದರೆ ಇದನ್ನು ಆಡಳಿತಾತ್ಮಕವಾಗಿ ಸರಿಪಡಿಸಲು ಆಗೋದಿಲ್ವ?. ಭ್ರಷ್ಟಾಚಾರ ಮಾಡಿದ್ರೆ ಅವರ ಮೇಲೆ ಕ್ರಮ ತೆಗೆದುಕೊಳ್ಳಲು ಆಗಲ್ವಾ?. ಆಡಳಿತಾತ್ಮಕವಾಗಿ ಸರಿಪಡಿಬೇಕೇ ಹೊರತು ಇಡೀ ಕಾರ್ಯಕ್ರಮವನ್ನ ಹತ್ತಿಕ್ಕುವ ಕೆಲಸ ಆಗಬಾರದು ಎಂದು ತಿಳಿಸಿದರು.

ಜಿಬಿಎ ಚುನಾವಣೆಗೆ ಹಿಂದೇಟು ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಆದಷ್ಟು ಬೇಗ ಚುನಾವಣೆ ಆಗಬೇಕು ಎಂದು ನಮ್ಮೆಲ್ಲರ ಅಭಿಲಾಷೆ. ಪ್ರಕ್ರಿಯೆಯಲ್ಲಿ ತಪ್ಪಾದಾಗ ಸರಿಪಡಿಸಬೇಕಲ್ವಾ?. ಜನಗಣತಿ ಪ್ರಾರಂಭವಾಗಿರುವಾಗ ಚುನಾವಣೆ ಮಾಡಬೇಕು ಎಂದಾಗ ಅಧಿಕಾರಿಗಳನ್ನು ಒದಗಿಸಬೇಕು. ಅಷ್ಟೊಂದು ಸಂಖ್ಯೆಯಲ್ಲಿ ಅಧಿಕಾರಿಗಳನ್ನು ಕ್ರೋಢೀಕರಿಸೋದು ಕಷ್ಟ ಅಂತ ಹೇಳಿದ್ದಾರೆ. ಚುನಾವಣೆ ಮಾಡಬೇಕಾದದ್ದು ನಮ್ಮ ಧರ್ಮ. ಊರಿಗೆ ಮುಂಚೆನೇ ಕುಲಾವಿ ಹೊಲಿಸಿದ್ರೆ ಹೇಗೆ ಅಂತಾರೆ. ಇವರು ಚುನಾವಣೆ ಮುಂಚೆನೇ ರಿಸಲ್ಟ್ ಹೇಳಿದ್ರೆ ಹೇಗೆ ಎಂದು ಟೀಕಿಸಿದರು.

# ಆನ್‌ಲೈನ್ ಗೇಮಿಂಗ್ ವೇದಿಕೆಗಳನ್ನು ತಿರುಚಿದ ಪ್ರಕರಣ: ನೋಟೀಸ್

ಬೆಂಗಳೂರು: ಆನ್‌ಲೈನ್ ನೈಜ ಹಣ ಗೇಮಿಂಗ್ ಗೇಮಿಂಗ್ ವೇದಿಕೆಗಳನ್ನು ತಿರುಚಿದ ಆರೋಪದಿಂದ ಸಂಬಂಧಿತ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ಗೇಮ್ಸ್‌ಕ್ರಾಫ್ಟ್ ಕಂಪನಿಯ ನಿರ್ದೇಶಕರಾದ ದೀಪಕ್ ಸಿಂಗ್ ಅಹ್ಲಾವತ್, ಪೃಥ್ವಿರಾಜ್ ಸಿಂಗ್ ಮತ್ತು ವಿಕಾಸ್ ತನೇಜಾ ಸಲ್ಲಿಸಿರುವ ಅರ್ಜಿ ಸಂಬಂಧ ಜಾರಿ ನಿರ್ದೇಶನಾಲಯಕ್ಕೆ ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ.

ತಮ್ಮ ಬಂಧನ ಅಕ್ರಮ ಎಂದು ಘೋಷಿಸುವಂತೆ ಕೋರಿ ದೀಪಕ್ ಸಿಂಗ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂಜಿಎಸ್ ಕಮಲ್ ಅವರ ನೇತೃತ್ವದ ರಜಾಕಾಲೀನ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ದೀಪಕ್ ಸಿಂಗ್ ಪ್ರತಿನಿಧಿಸಿದ್ದ ಹಿರಿಯ ವಕೀಲ ಎಸ್ ಮುರಳೀಧರ್ ಅವರು "ತೆಲಂಗಾಣದಲ್ಲಿ ದಾಖಲಾಗಿರುವ ಎಫ್‌ಐಆರ್ ಆಧರಿಸಿ ಬೆಂಗಳೂರಿನ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಮೇ 7 ಗುರುಗ್ರಾಮ್‌ಗೆ ತೆರಳಿ, ಮೇ 8ರಂದು ದೀಪಕ್ ಮತ್ತು ಪೃಥ್ವಿರಾಜ್ ಅವರನ್ನು ಬಂಧಿಸಿದ್ದಾರೆ. ಮೇ 8ರಂದು ಟ್ರಾನ್ಸಿಟ್ ರಿಮ್ಯಾಂಡ್ ಪಡೆದು ಅವರನ್ನು ಬೆಂಗಳೂರಿಗೆ ಕರೆತರಲಾಗಿದ್ದು, ಬೆಂಗಳೂರಿನಲ್ಲಿ ಬಂಧಿಸಿಡಲಾಗಿದೆ. ಇದು ಸಂಪೂರ್ಣವಾಗಿ ಅಕ್ರಮ ಬಂಧನವಾಗಿದೆ" ಎಂದರು.

"2026ರ ಜನವರಿಯಲ್ಲಿ ಗೇಮ್ಸ್‌ಕ್ರಾಫ್ಟ್ ವಿರುದ್ಧ ಇ ಡಿ ಜಾರಿ ಮಾಡಿದ್ದ ಎಫ್‌ಐಆರ್‌ಗೆ ಹೈಕೋರ್ಟ್‌ನ ಸಮನ್ವಯ ಪೀಠವು ತಡೆ ನೀಡಿದೆ. ಸಂಸತ್ತು ಆನ್‌ಲೈನ್ ಗೇಮಿಂಗ್ ಪ್ರಚಾರ ಮತ್ತು ನಿಯಂತ್ರಣ ಕಾಯಿದೆ 2025 ಜಾರಿಗೊಳಿಸಿದಾಗಿನಿಂದ ಗೇಮ್ಸ್‌ಕ್ರಾಫ್ಟ್ ತನ್ನ ಕಾರ್ಯಚಟುವಟಿಕೆ ನಿಲ್ಲಿಸಿದೆ" ಎಂದರು.

ಪೃಥ್ವಿರಾಜ್ ಸಿಂಗ್ ಮತ್ತು ವಿಕಾಸ್ ತನೇಜಾ ಅವರನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಸಜನ್ ಪೂವಯ್ಯ ಅವರು ತಮ್ಮ ಅರ್ಜಿಗಳಲ್ಲೂ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಬೇಕು ಎಂದು ಕೋರಿದರು.

ಇದನ್ನು ಆಲಿಸಿದ ಪೀಠವು ಮೂರೂ ಅರ್ಜಿಗಳ ಸಂಬಂಧ ಜಾರಿ ನಿರ್ದೇಶನಾಲಯಕ್ಕೆ ನೋಟಿಸ್ ಜಾರಿಗೊಳಿಸಿ, ವಿಚಾರಣೆಯನ್ನು ಮೇ 14ಕ್ಕೆ ಮುಂದೂಡಿತು.

ಉದ್ಯಮದ ವೆಚ್ಚ ಎಂದು ನಕಲಿ ಮತ್ತು ಷೆಲ್ ಕಂಪನಿಗಳಿಗೆ ಹಣ ಕಳುಹಿಸಿ, ಅದನ್ನು ಆನಂತರ ಅಕ್ರಮ ಚಟುವಟಿಕೆ ಮತ್ತು ವೈಯಕ್ತಿಕವಾಗಿ ಬಳಕೆ ಮಾಡಿಕೊಳ್ಳಲಾಗಿದೆ ಎಂದು ಇ ಡಿ ಆರೋಪಿಸಿದೆ.

2026ರಲ್ಲಿ ತೆಲಂಗಾಣದಲ್ಲಿ ಮೂರು ಎಫ್‌ಐಆರ್ ದಾಖಲಾಗಿದ್ದು, ಕಂಪನಿಯು ಆನ್‌ಲೈನ್ ಗೇಮಿಂಗ್ ವೇದಿಕೆಗಳನ್ನು ನಿರ್ವಹಿಸುತ್ತಿದೆ. ಆಟವನ್ನು ತಿರುಚಿ, ಬಳಕೆದಾರರಿಗೆ ವಂಚಿಸಲಾಗಿದೆ. ಆನಂತರ ನಕಲಿ ವೆಚ್ಚ ತೋರಿಸಿ, ಅದನ್ನು ನಗದಿನ ರೂಪದಲ್ಲಿ ವಾಪಸ್ ಪಡೆಯಲಾಗಿದೆ ಎಂದು ಇ ಡಿ ಆರೋಪಿಸಿದೆ.

ಎಲ್ಲಾ ಆರೋಪಿಗಳು ಸದ್ಯ ಜಾರಿ ನಿರ್ದೇಶನಾಲಯದ ಕಸ್ಟಡಿಯಲ್ಲಿದ್ದು, ನಾಳೆ ಕಸ್ಟಡಿ ಅವಧಿ ಮುಗಿಯಲಿದೆ.

# ಚಾಲಕರ ವೇತನ ಹೆಚ್ಚಳ

ಬೆಂಗಳೂರು: ಸಾರಿಗೆ ನೌಕರರಿಗೆ ರಾಜ್ಯ ಸರ್ಕಾರ ಗುಡ್ ನ್ಯೂಸ್ ಕೊಟ್ಟಿದೆ. ಶೇ.12.50 ರಷ್ಟು ವೇತನ ಪರಿಷ್ಕರಿಸಲಾಗಿದ್ದು, ಹೊಸ ವೇತನವು ಜು.1ರ ವೇತನದಲ್ಲೇ ಪಾವತಿಗೆ ಸರ್ಕಾರ ಆದೇಶ ಹೊರಡಿಸಿದೆ.

2025 ಮಾರ್ಚ್ 31ರ ಮೂಲ ವೇತನದ ಮೇಲೆ 12.5% ನಷ್ಟು ವೇತನ ಹೆಚ್ಚಳ ಮಾಡಲಾಗಿದೆ. ಸಾರಿಗೆ ನೌಕರರು ಹಲವು ವರ್ಷಗಳಿಂದ ವೇತನ ಪರಿಷ್ಕರಣೆಗೆ ಬೇಡಿಕೆ ಇಟ್ಟಿದ್ದರು. ಈಗ ಸರ್ಕಾರ ನೌಕರರಿಗೆ ಸಿಹಿ ಸುದ್ದಿ ಕೊಟ್ಟಿದೆ.

ಶೇ.25 ರಷ್ಟು ವೇತನ ಪರಿಷ್ಕರಣೆಗೆ ಸಾರಿಗೆ ಸಂಘಟನೆಗಳು ಒತ್ತಾಯಿಸಿದ್ದವು. ವೇತನ ಪರಿಷ್ಕರಣೆ ಮಾಡದಿದ್ದರೆ ಮುಷ್ಕರ ಮಾಡಲು ನಿರ್ಧರಿಸಿದ್ದವು. ಸದ್ಯ ಸಾರಿಗೆ ಇಲಾಖೆ ಶೇ.12.5 ರಷ್ಟು ವೇತನ ಪರಿಷ್ಕರಿಸಿದೆ. ಆದರೆ, ಇದಕ್ಕೆ ಸಾರಿಗೆ ನೌಕರರ ಸಂಘಟನೆಗಳು ಒಪ್ಪಿಗೆ ಸೂಚಿಸಿಲ್ಲ.

20 ರಂದು ಮುಷ್ಕರ ಮಾಡಲು ನಿರ್ಧಾರಿಸಿವೆ. ನಾಲ್ಕು ನಿಗಮದ ಸಾರಿಗೆ ನೌಕರರು ಮುಷ್ಕರಕ್ಕೆ ಕರೆ ನೀಡಿದ್ದಾರೆ. 2024 ಜನವರಿಯಿಂದ 25% ವೇತನ ಹೆಚ್ಚಳಕ್ಕೆ ನೌಕರರು ಪಟ್ಟು ಹಿಡಿದಿದ್ದಾರೆ. ಆದರೆ, ಸರ್ಕಾರ 2025 ಮಾರ್ಚ್‌ನಿಂದ 12.5% ವೇತನ ಹೆಚ್ಚಳಕ್ಕೆ ನಿರ್ಧಾರ ಕೈಗೊಂಡಿದೆ. ಸರ್ಕಾರದ ನಿರ್ಧಾರಕ್ಕೆ ಸದ್ಯ ಸಾರಿಗೆ ನೌಕರರ ಸಂಘಟನೆಗಳಿಂದ ವಿರೋಧ ವ್ಯಕ್ತವಾಗಿದ್ದು, ಮುಷ್ಕರ ನಡೆಸುವುದಾಗಿ ತಿಳಿಸಿವೆ.

# ನೀಟ್ ಪರೀಕ್ಷೆ ರದ್ದು

ನವದೆಹಲಿ: ದೇಶಾದ್ಯಂತ ವೈದ್ಯಕೀಯ ಶಿಕ್ಷಣ ಪ್ರವೇಶಾತಿಗಾಗಿ ನಡೆದಿದ್ದ ನೀಟ್ ಯುಜಿ ಪರೀಕ್ಷೆಯನ್ನು ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಅಧಿಕೃತವಾಗಿ ರದ್ದುಗೊಳಿಸಿದೆ.

ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದ ಹಿನ್ನೆಲೆಯಲ್ಲಿ, ಪರೀಕ್ಷೆಯ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡಲು ಈ ಕಠಿಣ ಕ್ರಮ ಕೈಗೊಳ್ಳಲಾಗಿದೆ ಎಂದು ಎನ್‌ಟಿಎ ತಿಳಿಸಿದೆ. ಶೀಘ್ರದಲ್ಲೇ ಹೊಸ ದಿನಾಂಕ ಪ್ರಕಟಿಸುವುದಾಗಿ ತಿಳಿಸಿದೆ.

ಭಾರತದ ಅತಿದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಯಾದ ನೀಟ್ ಯುಜಿ 2026 ಅನ್ನು 'ಗೆಸ್ ಪತ್ರಿಕೆ' ಸೋರಿಕೆ ಆರೋಪದ ನಂತರ ರದ್ದುಪಡಿಸಲಾಗಿದೆ. ಮೇ 3 ರಂದು ನಡೆದ ಪರೀಕ್ಷೆಯ ಸಮಗ್ರತೆಯ ಬಗ್ಗೆ ಕೇಂದ್ರೀಯ ಸಂಸ್ಥೆಗಳಿಂದ ಬಂದ ಮಾಹಿತಿಗಳು ಕಳವಳ ವ್ಯಕ್ತಪಡಿಸಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಈ ಪ್ರಶ್ನೆ ಪತ್ರಿಕೆಯಲ್ಲಿದ್ದ ಸುಮಾರು 100ಕ್ಕೂ ಹೆಚ್ಚು ಜೀವಶಾಸ್ತ್ರ ಮತ್ತು ರಸಾಯನಶಾಸ್ತ್ರದ ಪ್ರಶ್ನೆಗಳು ಅಸಲಿ ಪ್ರಶ್ನೆ ಪತ್ರಿಕೆಗೆ ಹೋಲಿಕೆಯಾಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಕಳೆದ ಮೇ 3, 2026 ರಂದು ಭಾನುವಾರ ದೇಶಾದ್ಯಂತ ನೀಟ್ ಪರೀಕ್ಷೆ ನಡೆದಿತ್ತು. ಆದರೆ ರಾಜಸ್ಥಾನದಲ್ಲಿ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ ಎಂಬ ವರದಿಗಳು ಹರಿದಾಡಿದ್ದವು. ಈ ಬಗ್ಗೆ ಮೇ 8 ರಂದು ಎನ್‌ಟಿಎ ಕೇಂದ್ರ ತನಿಖಾ ಸಂಸ್ಥೆಗಳಿಗೆ ಸ್ವತಂತ್ರ ಪರಿಶೀಲನೆ ನಡೆಸುವಂತೆ ಮನವಿ ಮಾಡಿತ್ತು.

ತನಿಖಾ ಸಂಸ್ಥೆಗಳು ಮತ್ತು ಕಾನೂನು ಜಾರಿ ಸಂಸ್ಥೆಗಳು ನೀಡಿದ ವರದಿಯನ್ನಾಧರಿಸಿ, ಕೇಂದ್ರ ಸರ್ಕಾರದ ಅನುಮೋದನೆಯೊಂದಿಗೆ ಪರೀಕ್ಷೆಯನ್ನು ರದ್ದುಗೊಳಿಸಲು ನಿರ್ಧರಿಸಲಾಗಿದೆ. ಹೀಗಾಗಿ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಪರಿಣಾಮ ಬೀರಿದ ಕಾರಣ.

# ಜಿಬಿಎ ಚುನಾವಣೆ ವಿರುದ್ಧ ಸುಪ್ರೀಂಗೆ ಅರ್ಜಿ ಸಲ್ಲಿಕೆ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆಯನ್ನು ನಡೆಸಲು ಹೆಚ್ಚಿನ ಸಮಯಾವಕಾಶ ನೀಡುವಂತೆ ರಾಜ್ಯ ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿರುವುದು ರಾಜ್ಯ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ, ಜನಗಣತಿ 2026 ಹಾಗೂ ಮನೆ ಪಟ್ಟಿ ಸಮೀಕ್ಷೆ ಕಾರ್ಯಗಳಲ್ಲಿ ಸರ್ಕಾರಿ ಸಿಬ್ಬಂದಿ ಸಂಪೂರ್ಣವಾಗಿ ತೊಡಗಿಸಿಕೊಂಡಿರುವ ಹಿನ್ನೆಲೆಯಲ್ಲಿ, ಚುನಾವಣೆಗಳನ್ನು ನಿಗದಿತ ಅವಧಿಯಲ್ಲಿ ನಡೆಸುವುದು ಕಷ್ಟಕರವಾಗಿದೆ ಎಂದು ಆಯೋಗ ತನ್ನ ಅಫಿಡವಿಟ್‌ನಲ್ಲಿ ವಿವರಿಸಿದೆ. ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ, "ನ್ಯಾಯ ಮತ್ತು ಸಮಾನತೆಯ ಹಿತದೃಷ್ಟಿಯಿಂದ" ಜಿಬಿಎ ಅಡಿಯಲ್ಲಿ ಬರುವ ಐದು ನಗರ ಪಾಲಿಕೆಗಳ ಚುನಾವಣೆಗೆ ಹೆಚ್ಚುವರಿ ಸಮಯ ನೀಡಬೇಕು ಎಂದು ರಾಜ್ಯ ಚುನಾವಣಾ ಆಯೋಗ ಮನವಿ ಮಾಡಿದೆ.

ಈ ಮನವಿಯೊಂದಿಗೆ, ಜಿಬಿಎ ಅಧಿಕಾರಿಗಳು ವ್ಯಕ್ತಪಡಿಸಿರುವ ಆಡಳಿತಾತ್ಮಕ ಮತ್ತು ತಾಂತ್ರಿಕ ಕಳವಳಗಳು "ನೈಜ ಮತ್ತು ಮಾನ್ಯ" ಎಂದು ಆಯೋಗ ಹೇಳಿದೆ.

ರಾಜ್ಯ ಚುನಾವಣಾ ಆಯೋಗದ ಪ್ರಕಾರ, ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಕಾರ್ಯ ಈಗಾಗಲೇ ರಾಜ್ಯದಾದ್ಯಂತ ವೇಗವಾಗಿ ನಡೆಯುತ್ತಿದೆ. ಇದರ ಜೊತೆಗೆ, ಜನಗಣತಿ 2026ಕ್ಕೆ ಸಂಬಂಧಿಸಿದ ಪ್ರಾಥಮಿಕ ಸಿದ್ಧತೆಗಳು, ಮನೆ ಪಟ್ಟಿ ಸಮೀಕ್ಷೆಗಳು ಮತ್ತು ಇತರೆ ಸರ್ಕಾರಿ ಕಾರ್ಯಗಳಿಗೆ ಸಾವಿರಾರು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ.

# ಇಂದು ವಿಜಯ್ ವಿಶ್ವಾಸ ಮತಯಾಚನೆ

ಚೆನ್ನೈ: ತಮಿಳುನಾಡಿನ ಮುಖ್ಯಮಂತ್ರಿ ವಿಜಯ್ ನೇತೃತ್ವದ ಟಿವಿಕೆ ಸರ್ಕಾರದ ವಿರುದ್ಧ ಬೆಳಗ್ಗೆ 9.30ಕ್ಕೆ ವಿಶ್ವಾಸಮತ ಯಾಚನೆ ಮಾಡಲಾಗುವುದು. ವಿಧಾನಸಭೆಯಲ್ಲಿ ಮುಖ್ಯಮಂತ್ರಿ ವಿಜಯ್ ಪ್ರಸ್ತಾಪಿಸಿದ ಸರ್ಕಾರಿ ನಿರ್ಣಯದ ಮೇಲೆ ಶಾಸಕರು ಮತ ಚಲಾಯಿಸಲಿದ್ದಾರೆ. ಇಲ್ಲಿಯವರೆಗೆ ಮುಖ್ಯಮಂತ್ರಿ ವಿಜಯ್ ನೇತೃತ್ವದ ಸರ್ಕಾರಕ್ಕೆ ಸಾಕಷ್ಟು ಬೆಂಬಲವಿದೆ. ಹೀಗಾಗಿ, ನಾಳೆ ವಿಜಯ್ ಬಹುಮತ ಸಾಬೀತುಪಡಿಸುವ ಸಾಧ್ಯತೆ ಹೆಚ್ಚಾಗಿದೆ. ಇಲ್ಲದಿದ್ದರೆ ವಿಜಯ್ ಅವರ ನೂತನ ಸರ್ಕಾರ ಪತನವಾಗಲಿದೆ.

ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ 108 ಸ್ಥಾನಗಳನ್ನು ಗೆದ್ದ ನಂತರ, ಯಾರಿಗೂ ಬಹುಮತ ಸಿಗದಿದ್ದಾಗ, ಟಿವಿಕೆ ನಾಯಕ ವಿಜಯ್ ರಾಜ್ಯಪಾಲರನ್ನು ಭೇಟಿಯಾಗಿ ಸರ್ಕಾರ ರಚಿಸುವ ಹಕ್ಕನ್ನು ಪಡೆದುಕೊಂಡಿದ್ದರು. ಆದರೆ, ಸರ್ಕಾರ ರಚಿಸಲು ಬೆಂಬಲದ ಕೊರತೆಯಿಂದಾಗಿ ರಾಜ್ಯಪಾಲರು ಅದರ ವಿನಂತಿಯನ್ನು ಪದೇ ಪದೇ ತಿರಸ್ಕರಿಸಿದ್ದರು.

ದೀರ್ಘ ಹೋರಾಟದ ನಂತರ, ಕಾಂಗ್ರೆಸ್, ವಿಸಿಕೆ, ಕಮ್ಯುನಿಸ್ಟ್ ಪಕ್ಷ ಆಫ್ ಇಂಡಿಯಾ, ಕಮ್ಯುನಿಸ್ಟ್ ಪಕ್ಷ ಆಫ್ ಇಂಡಿಯಾ (ಮಾರ್ಕ್ಸ್‌ವಾದಿ) ಮತ್ತು ಇಂಡಿಯನ್ ಮುಸ್ಲಿಂ ಲೀಗ್‌ನಂತಹ ಪಕ್ಷಗಳ ಬೆಂಬಲದೊಂದಿಗೆ ವಿಜಯ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

# ಪ್ರಧಾನಿ ಹೇಳಿಕೆ ಬಗ್ಗೆ ಕಾಂಗ್ರೆಸ್ ಸಣ್ಣತನ'

ಬೆಂಗಳೂರು: ರಾಷ್ಟ್ರದ ಆರ್ಥಿಕ ಪರಿಸ್ಥಿತಿಯ ಕುರಿತು ಪ್ರಧಾನಿ ನರೇಂದ್ರ ಮೋದಿ ನೀಡಿರುವ ಹೇಳಿಕೆ ಬಗ್ಗೆ ಕಾಂಗ್ರೆಸ್ ಪಕ್ಷ ಸಣ್ಣತನದಿಂದ ಮಾತನಾಡುವುದು ಸರಿಯಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.


ಮಂಗಳವಾರ ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, "ಇತರೆ ಅನೇಕ ದೇಶಗಳಿಗಿಂತ ಭಾರತದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿದೆ. ಅಂದಮಾತ್ರಕ್ಕೆ ನಾವು ನಮ್ಮ ಹಣಕಾಸು ವ್ಯವಸ್ಥೆಯನ್ನು ಹಾಳು ಮಾಡಿಕೊಳ್ಳಬಾರದು. ರಾಷ್ಟ್ರದ ಜನರ ಹಿತದೃಷ್ಟಿಯಿಂದ ಪ್ರಧಾನಿ ಕೆಲವು ಅಗತ್ಯ ಸಲಹೆಗಳನ್ನು ನೀಡಿದ್ದಾರೆ. ಅದರಲ್ಲಿ ತಪ್ಪು ಹುಡುಕುವ ಅಗತ್ಯವೇ ಇಲ್ಲ" ಎಂದು ಹೇಳಿದರು.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಪ್ರಧಾನಿ ಹಲವು ವಿಷಯಗಳ ಬಗ್ಗೆ ಮಾತನಾಡಿದ್ದಾರೆ. ಆದರೆ ಕಾಂಗ್ರೆಸ್ ನಾಯಕರು ಅನಗತ್ಯ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಆರೋಪಿಸಿದರು.

"ತೈಲ ಬಿಕ್ಕಟ್ಟು ಇಡೀ ಜಗತ್ತನ್ನೇ ಬಾಧಿಸುತ್ತಿದೆ. ಭಾರತದಲ್ಲಿ ತೈಲ ಉತ್ಪಾದನೆ ಆಗುವುದಿಲ್ಲ. ನಾವು ವಿದೇಶಗಳಿಂದಲೇ ತೈಲ ಆಮದು ಮಾಡಿಕೊಳ್ಳಬೇಕು ಎಂಬುದು ಕಾಂಗ್ರೆಸ್‌ಗೆ ಗೊತ್ತಿಲ್ಲವೇ?" ಎಂದು ಪ್ರಶ್ನಿಸಿದರು.

"ರಾಷ್ಟ್ರದ ಹಿತದೃಷ್ಟಿಯಿಂದ ಪ್ರಧಾನಿಗಳು ಎಚ್ಚರಿಕೆ ನೀಡಿದ್ದಾರೆ. ಅದರ ಬಗ್ಗೆ ಕಾಂಗ್ರೆಸ್ ನಾಯಕರು ಸಣ್ಣತನದಿಂದ ಮಾತನಾಡುವುದು ಸರಿಯಲ್ಲ," ಎಂದು ಕುಮಾರಸ್ವಾಮಿ ಕಿಡಿಕಾರಿದರು.

ರಾಜ್ಯ ಸರ್ಕಾರದ ವಿರುದ್ಧವೂ ವಾಗ್ದಾಳಿ ನಡೆಸಿದ ಅವರು, "ಮುಖ್ಯಮಂತ್ರಿಗಳು ಪದೇಪದೇ ರಾಜ್ಯದ ಜಿಡಿಪಿಯನ್ನು ಕೇಂದ್ರದ ಜಿಡಿಪಿಗೆ ಹೋಲಿಕೆ ಮಾಡುವುದು ಬಿಟ್ಟು ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಲಿ. ತಲಾ ಆದಾಯದ ಅಂಕಿ-ಅಂಶಗಳಿಂದ ಅಭಿವೃದ್ಧಿ ಅಳೆಯಲು ಸಾಧ್ಯವಿಲ್ಲ. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜನರ ಪರಿಸ್ಥಿತಿ ನೋಡಿದರೆ ವಾಸ್ತವ ಗೊತ್ತಾಗುತ್ತದೆ," ಎಂದರು.



ಜಿಬಿಎ ಚುನಾವಣೆಯ ಕುರಿತು ಮಾತನಾಡಿದ ಅವರು, "ಮುಖ್ಯಮಂತ್ರಿ ಕುರ್ಚಿಗಾಗಿ ನಡೆದ ಕಿತ್ತಾಟದಲ್ಲಿ ಮೂರು ವರ್ಷ ವ್ಯರ್ಥವಾಗಿವೆ. ತೆರಿಗೆಗಳ ಹೆಸರಿನಲ್ಲಿ ಬೆಂಗಳೂರಿನ ಜನರನ್ನು ಕಿತ್ತು ತಿನ್ನುತ್ತಿದ್ದಾರೆ. ಈಗ ಮತ ಕೇಳಲು ಹೋದರೆ ಜನರು ಏನು ಪ್ರತಿಕ್ರಿಯೆ ನೀಡುತ್ತಾರೆ ಎಂಬ ಭಯದಿಂದ ಚುನಾವಣೆ ನಡೆಸಲು ಹೆದರುತ್ತಿದ್ದಾರೆ," ಎಂದು ದೂರಿದರು.

"ಜಿಬಿಎ ಚುನಾವಣೆಯ ವಿಷಯದಲ್ಲಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ನಡುವೆ ಆಂತರಿಕ ಪೈಪೋಟಿ ನಡೆಯುತ್ತಿದೆ. ಚುನಾವಣೆ ನಡೆದರೆ ತಮ್ಮ ಸ್ಥಾನ ಭದ್ರವಾಗುತ್ತದೆ ಎಂದು ಸಿದ್ದರಾಮಯ್ಯ ಯೋಚಿಸುತ್ತಿದ್ದಾರೆ. ಚುನಾವಣೆ ನಡೆಯದೇ ಇದ್ದರೆ ಮುಖ್ಯಮಂತ್ರಿ ಸ್ಥಾನ ಸಿಗಬಹುದು ಎಂದು ಡಿ.ಕೆ. ಶಿವಕುಮಾರ್ ನಿರೀಕ್ಷಿಸುತ್ತಿದ್ದಾರೆ," ಎಂದು ಆರೋಪಿಸಿದರು.

"ಒಬ್ಬರಿಗೆ ತಮ್ಮ ಸ್ಥಾನ ಉಳಿಸಿಕೊಳ್ಳಬೇಕು, ಮತ್ತೊಬ್ಬರಿಗೆ ಮುಖ್ಯಮಂತ್ರಿ ಸ್ಥಾನ ಬೇಕು. ಅದಕ್ಕಾಗಿಯೇ ಜಿಬಿಎ ವಿಚಾರದಲ್ಲಿ ಹಗ್ಗಜಗ್ಗಾಟ ನಡೆಯುತ್ತಿದೆ," ಎಂದು ಕುಮಾರಸ್ವಾಮಿ ಹೇಳಿದರು.

# ಬಾಂಗ್ಲಾದಲ್ಲಿ ಗಡಿಗೆ ಬೇಲಿ ಹಾಕಲು ಅನುಮತಿ: ಕೇಂದ್ರಕ್ಕೆ ಭೂಮಿ ವರ್ಗಾವಣೆ

ಕೋಲ್ಕತ್ತಾ: ಬಾಂಗ್ಲಾದೇಶ ಗಡಿಗೆ ಬೇಲಿ ಹಾಕುವುದಕ್ಕಾಗಿ ಗಡಿ ಭದ್ರತಾ ಪಡೆ(ಬಿಎಸ್‌ಎಫ್)ಗೆ ಭೂಮಿ ವರ್ಗಾವಣೆ ಮಾಡಲು ರಾಜ್ಯ ಸರ್ಕಾರ ಅನುಮತಿ ನೀಡಿದೆ ಎಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ತಿಳಿಸಿದ್ದಾರೆ.


ಈ ಕುರಿತು ಸೋಮವಾರ ಮಾತನಾಡಿದ ಅವರು, ತಮ್ಮ ಸರ್ಕಾರದ ಮೊದಲ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

ಭೂಮಿ ವರ್ಗಾವಣೆ ಪ್ರಕ್ರಿಯೆ ಇಂದಿನಿಂದಲೇ (ಸೋಮವಾರ) ಶುರುವಾಗಿದ್ದು, 45 ದಿನಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದ್ದಾರೆ.

"ಬಾಂಗ್ಲಾದೇಶದ ಗಡಿಯಲ್ಲಿ ಬೇಲಿ ಹಾಕಲು ಬಿಎಸ್‌ಎಫ್‌ಗೆ ಭೂಮಿ ವರ್ಗಾವಣೆ ಮಾಡಲು ಪ.ಬಂಗಾಳ ಸರ್ಕಾರ ಅನುಮೋದನೆ ನೀಡಿದೆ. ಈ ಪ್ರಕ್ರಿಯೆ ಇಂದಿನಿಂದ ಪ್ರಾರಂಭ. ಹಾಗು 45 ದಿನಗಳಲ್ಲಿ ಮುಗಿಯುತ್ತದೆ" ಎಂದು ಅಧಿಕಾರಿ ಮಾಧ್ಯಮದವರಿಗೆ ಮಾಹಿತಿ ನೀಡಿದ್ದಾರೆ.

ಅದಷ್ಟೇ ಅಲ್ಲದೇ, ಕೇಂದ್ರ ಸರ್ಕಾರದ ಪ್ರಮುಖ ಸಾಮಾಜಿಕ ಭದ್ರತಾ ಯೋಜನೆ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆ ಹಾಗು ಹಲವು ಇತರೆ ಯೋಜನೆಗಳನ್ನೂ ರಾಜ್ಯದಲ್ಲಿ ಅನುಷ್ಠಾಗೊಳಿಸುವುದಾಗಿಯೂ ಸಿಎಂ ಘೋಷಿಸಿದ್ದಾರೆ.

ವಿಧಾನಸಭಾ ಚುನಾವಣಾ ಮತಪ್ರಚಾರದ ಸಮಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಾತು ಕೊಟ್ಟಂತೆ ಶಾಲಾ ಉದ್ಯೋಗ ಅರ್ಜಿದಾರರ ವಯಸ್ಸಿನ ಮಿತಿಯನ್ನು 5 ವರ್ಷಗಳ ಕಾಲ ವಿಸ್ತರಿಸುವ ಪ್ರಸ್ತಾವನೆಗೂ ಸಂಪುಟ ಒಪ್ಪಿಗೆ ಸೂಚಿಸಿದೆ ಎಂದು ಅವರು ಹೇಳಿದ್ದಾರೆ.



ಅದಷ್ಟೇ ಅಲ್ಲದೇ, ಕೇಂದ್ರ ಸರ್ಕಾರದ ಪ್ರಮುಖ ಸಾಮಾಜಿಕ ಭದ್ರತಾ ಯೋಜನೆ ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆ ಹಾಗು ಹಲವು ಇತರೆ ಯೋಜನೆಗಳನ್ನೂ ರಾಜ್ಯದಲ್ಲಿ ಅನುಷ್ಠಾಗೊಳಿಸುವುದಾಗಿಯೂ ಸಿಎಂ ಘೋಷಿಸಿದ್ದಾರೆ. ವಿಧಾನಸಭಾ ಚುನಾವಣಾ ಮತಪ್ರಚಾರದ ಸಮಯದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಾತು ಕೊಟ್ಟಂತೆ ಶಾಲಾ ಉದ್ಯೋಗ ಅರ್ಜಿದಾರರ ವಯಸ್ಸಿನ ಮಿತಿಯನ್ನು 5 ವರ್ಷಗಳ ಕಾಲ ವಿಸ್ತರಿಸುವ ಪ್ರಸ್ತಾವನೆಗೂ ಸಂಪುಟ ಒಪ್ಪಿಗೆ ಸೂಚಿಸಿದೆ.

ಇದರ ಜೊತೆಗೆ, ರಾಷ್ಟ್ರೀಯ ಮತ್ತು ರಾಜ್ಯ ಕೇಡರ್‌ಗಳ ಅಡಿಯಲ್ಲಿರುವ ಅಧಿಕಾರಿಗಳಿಗೆ ಕೇಂದ್ರ ಸರ್ಕಾರದ ತರಬೇತಿ ಪ್ರಾರಂಭಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಸಚಿವ ಸಂಪುಟವು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಅಧಿಕಾರ ನೀಡುತ್ತದೆ ಎಂದು ಅಧಿಕಾರಿ ತಿಳಿಸಿದ್ದಾರೆ.

ಈ ಹಿಂದಿನ ಸರ್ಕಾರ ಸಂವಿಧಾನವನ್ನು ಉಲ್ಲಂಘಿಸಿ ಬಿಎನ್‌ಎಸ್ ಜಾರಿಗೆ ತರಲಿಲ್ಲ ಎಂದು ಆರೋಪಿಸಿದ ಅವರು, ರಾಜ್ಯದಲ್ಲಿ ಕ್ರಿಮಿನಲ್ ಕಾನೂನನ್ನು ಜಾರಿಗೆ ತರಲು ಸಂಪುಟ ನಿರ್ಧರಿಸಿದೆ ಎಂದು ಹೇಳಿದರು.

ಅಷ್ಟೇ ಅಲ್ಲದೇ, ಹಿಂದಿನ ಸರ್ಕಾರ ಕೇಂದ್ರ ಗೃಹ ಸಚಿವಾಲಯದ 2025ರ ಜೂನ್‌ನಲ್ಲಿನ ಜನಗಣತಿ ಸುತ್ತೋಲೆಯನ್ನು ನಿರ್ಲಕ್ಷಿಸಿತು. ಇದೀಗ ಸಚಿವ ಸಂಪುಟ ಅದನ್ನು ತಕ್ಷಣವೇ ಜಾರಿಗೆ ತರಲು ಅನುಮತಿ ನೀಡಿದೆ ಎಂದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
13/05/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅಭಿವೃದ್ಧಿ ಹೆಸರಲ್ಲಿ ಶಾಲೆ ಗೇಟ್ ಬಂದ್..!

ಬಂಗಾರಪೇಟೆ

ತಾಲ್ಲೂಕಿನ ತೊಪ್ಪನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಸಂಪೂರ್ಣವಾಗಿ ಬಂದ್ ಮಾಡಲ್ಪಟ್ಟಿರುವ ಘಟನೆ ಗ್ರಾಮದಲ್ಲಿ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಡ್ಡಿಯಾಗಿರುವ ಈ ಬೆಳವಣಿಗೆ ಗ್ರಾಮಸ್ಥರ ಅಸಮಾಧಾನಕ್ಕೆ ಕಾರಣವಾಗಿದೆ.

ತೊಪ್ಪನಹಳ್ಳಿ ಗ್ರಾಮದ ಮುಖ್ಯ ರಸ್ತೆಗೆ ಸಂಪರ್ಕ ಕಲ್ಪಿಸುವ ಸುಮಾರು 10 ಅಡಿ ಅಗಲ ಮತ್ತು 50 ಅಡಿ ಉದ್ದದ ಈ ರಸ್ತೆ ಹಲವು ವರ್ಷಗಳಿಂದ ಸಾರ್ವಜನಿಕ ಬಳಕೆಯಲ್ಲಿದ್ದು, ವಿಶೇಷವಾಗಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರು ಇದೇ ದಾರಿಯನ್ನು ಬಳಸುತ್ತಿದ್ದರು. ಶಾಲೆಗೆ ಹೋಗಿ ಬರಲು ಇದೇ ಏಕೈಕ ರಸ್ತೆ ಎನ್ನಲಾಗುತ್ತಿದೆ.

ಭಾನುವಾರ ಸಂಜೆ ಗ್ರಾಮದ ವ್ಯಕ್ತಿಯೊಬ್ಬರು "ಈ ಜಾಗ ನನ್ನದು" ಎಂದು ಹೇಳಿಕೊಂಡು ಶಾಲೆಯ ಮುಂಭಾಗದಲ್ಲೇ ಮಣ್ಣು ಸುರಿದು



ರಸ್ತೆ ಬಂದ್ ಮಾಡಿರುವುದಾಗಿ ಗ್ರಾಮಸ್ಥರು ಆರೋಪಿಸಿದ್ದಾರೆ. ಈ ಘಟನೆ ಗ್ರಾಮದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ವಿಷಯ ತಿಳಿದ ಕೂಡಲೇ ಶಾಲೆಯ ಮುಖ್ಯ ಶಿಕ್ಷಕ ರವೀಂದ್ರನಾಥ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಬಿಇಒ ಶಶಿಕಲಾ ಹಾಗೂ ಪಿಡಿಒ ವಾಣಿ ಅವರ ಗಮನಕ್ಕೆ ತಂದರು. ಬಳಿಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ವಿವಾದಿತ ರಸ್ತೆ ಶಾಲೆಯಿಂದ ತೊಪ್ಪನಹಳ್ಳಿ ಮುಖ್ಯರಸ್ತೆಗೆ ಸಂಪರ್ಕ ಕಲ್ಪಿಸುವ ಪ್ರಮುಖ ದಾರಿಯಾಗಿದ್ದು, ಪರ್ಯಾಯ ರಸ್ತೆ ಇಲ್ಲದ ಕಾರಣ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಇದೇ ದಾರಿಯನ್ನು ಅವಲಂಬಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಪಿಡಿಒ ಅವರು ಕಾಮಸಮುದ್ರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಸ್ಥಳಕ್ಕೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು ಸೇರಿದಂತೆ ಹಲವು ಮುಖಂಡರು ಭೇಟಿ ನೀಡಿ ರಸ್ತೆ ಬಂದ್ ಮಾಡಿದ ವ್ಯಕ್ತಿಯನ್ನು ಮನವೊಲಿಸಲು ಪ್ರಯತ್ನಿಸಿದರು. ಆದರೆ ಯಾವುದೇ ಸಮಾಧಾನಕ್ಕೆ ಬರದ ಹಿನ್ನೆಲೆಯಲ್ಲಿ ಸಮಸ್ಯೆ ಮತ್ತಷ್ಟು ಗಂಭೀರಗೊಂಡಿದೆ. ಪ್ರಸ್ತುತ ಶಾಲೆಗೆ ರಜೆ ಇರುವುದರಿಂದ ವಿದ್ಯಾರ್ಥಿಗಳ ಸಂಚಾರ ಇಲ್ಲದಿದ್ದರೂ, ರಜೆ ಮುಗಿಯುವ ಮೊದಲು ಸಮಸ್ಯೆ ಬಗೆಹರಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಶಾಲೆಗೆ ಸಂಪರ್ಕ ರಸ್ತೆ ಬಂದ್ ಮಾಡಿರುವ ಘಟನೆ ಇದೀಗ ಸಾರ್ವಜನಿಕ ಹಕ್ಕು, ವಿದ್ಯಾರ್ಥಿಗಳ ಭದ್ರತೆ ಹಾಗೂ ಸರ್ಕಾರಿ ಶಾಲೆಗಳ ಮೂಲಸೌಕರ್ಯದ ಬಗ್ಗೆ ಹಲವು ಪ್ರಶ್ನೆಗಳನ್ನು ಎಬ್ಬಿಸಿದೆ. ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಮುಖಂಡರು ತಕ್ಷಣ ಮಧ್ಯಪ್ರವೇಶಿಸಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮಸ್ಯೆ ಬಗೆಹರಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.


ಕಳೆದ ವರ್ಷವೂ ಇದೇ ರೀತಿ ರಜೆ ದಿನಗಳಲ್ಲಿ ಶಾಲೆಗೆ ಹೋಗುವ ರಸ್ತೆ ಬಂದ್ ಮಾಡಲಾಗಿತ್ತು. ಆಗ ಗ್ರಾಮಸ್ಥರು ಹಾಗೂ ಮುಖಂಡರ ಮಧ್ಯಸ್ಥಿಕೆಯಿಂದ ಸಮಸ್ಯೆ ಪರಿಹಾರಗೊಂಡಿತ್ತು. ಆದರೆ ಈ ಬಾರಿಯೂ ರಸ್ತೆ ಬಂದ್ ಮಾಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ.

ಹಲವು ವರ್ಷಗಳ ಹಿಂದೆಯೇ ತೊಪ್ಪನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ವಿವಾದಿತ ಜಾಗಕ್ಕೆ ಇ–ಖಾತೆ ತೆರೆಯಲಾಗಿದೆ ಎನ್ನಲಾಗಿದ್ದು, ಪದೇ ಪದೇ ರಸ್ತೆ ವಿವಾದ ಸೃಷ್ಟಿಯಾಗುತ್ತಿರುವ ಹಿನ್ನೆಲೆ ಏನು ಎಂಬುದು ಇದೀಗ ಕುತೂಹಲಕ್ಕೆ ಕಾರಣವಾಗಿದೆ.

# 'ಪ್ರಧಾನಿ ಮೋದಿಯವರ ಇಂಧನ ಭದ್ರತಾ ಕರೆಗೆ ಬೆಂಬಲ'

ಬೆಂಗಳೂರು

ರಾಷ್ಟ್ರದ ಇಂಧನ ಭದ್ರತೆ ಹಾಗೂ ಇಂಧನ ಸ್ವಾವಲಂಬನೆ ಕುರಿತು ಪ್ರಧಾನಿ ನರೇಂದ್ರ ಮೋದಿ ನೀಡಿರುವ ಮಹತ್ವದ ಸಂದೇಶವನ್ನು ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಸ್ವಾಗತಿಸಿ ಬೆಂಬಲ ವ್ಯಕ್ತಪಡಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಾಗತಿಕ ಮಾರುಕಟ್ಟೆಯಲ್ಲಿ ಉಂಟಾಗಿರುವ ಅನಿಶ್ಚಿತತೆ ಹಾಗೂ ಇಂಧನ ಬಿಕ್ಕಟ್ಟಿನ ನಡುವೆಯೂ ಭಾರತದ ಹಿತಾಸಕ್ತಿಯನ್ನು ಕಾಪಾಡುವಲ್ಲಿ ಪ್ರಧಾನಿಯವರ ದಿಕ್ಸೂಚಿ ಭಾಷಣ ದೇಶಕ್ಕೆ ಹೊಸ ಆಶಾದಾಯಕ ದಾರಿಯನ್ನು ತೋರಿಸಿದೆ ಎಂದು ಹೇಳಿದ್ದಾರೆ.

ಇಂಧನ ಕ್ಷೇತ್ರದಲ್ಲಿ ಭಾರತ ಸ್ವಾವಲಂಬಿಯಾಗುವುದು ಇಂದಿನ ತುರ್ತು ಅಗತ್ಯವಾಗಿದ್ದು, ಜಾಗತಿಕ ಪೂರೈಕೆ ಸರಪಳಿಯ ಅಡೆತಡೆಗಳ ನಡುವೆಯೂ ದೇಶದ ಆರ್ಥಿಕ ಬೆಳವಣಿಗೆಯನ್ನು ಕಾಪಾಡಲು ಕೇಂದ್ರ ಸರ್ಕಾರ ಕೈಗೊಂಡಿರುವ ಕ್ರಮಗಳು ದೂರದೃಷ್ಟಿಯ ನಡೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಇಂಧನ ಉಳಿತಾಯ ಮತ್ತು ಜಾಗೃತಿ ಕುರಿತು ಮಾತನಾಡಿದ ಅವರು, ಪ್ರತಿಯೊಬ್ಬ ನಾಗರಿಕರೂ ಇಂಧನ ಬಳಕೆಯಲ್ಲಿ ಮಿತವ್ಯಯ ಹಾಗೂ ಶಿಸ್ತು ಪಾಲಿಸಬೇಕು. ಸೌರಶಕ್ತಿ, ಎಲೆಕ್ಟ್ರಿಕ್ ವಾಹನಗಳು ಹಾಗೂ ನವೀಕರಿಸಬಹುದಾದ ಇಂಧನ ಮೂಲಗಳ ಬಳಕೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ 'ಆತ್ಮನಿರ್ಭರ ಇಂಧನ ಭಾರತ' ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದ್ದಾರೆ.

ಭಾರತವು ಗ್ರೀನ್ ಹೈಡ್ರೋಜನ್ ಮತ್ತು ಸೌರಶಕ್ತಿ ಕ್ಷೇತ್ರದಲ್ಲಿ ಜಾಗತಿಕ ನಾಯಕತ್ವ ಸಾಧಿಸುವತ್ತ ಸಾಗುತ್ತಿರುವುದು ದೇಶದ ಆಮದು ವೆಚ್ಚವನ್ನು ಕಡಿಮೆ ಮಾಡಲಿದ್ದು, ಪರಿಸರ ಸ್ನೇಹಿ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

ಇದೇ ವೇಳೆ ಕರ್ನಾಟಕ ಸರ್ಕಾರಕ್ಕೂ ಸಲಹೆ ನೀಡಿರುವ ಎನ್. ರವಿಕುಮಾರ್, ಪ್ರಧಾನಿಯವರ ಇಂಧನ ಭದ್ರತಾ ಅಭಿಯಾನಕ್ಕೆ ರಾಜ್ಯ ಸರ್ಕಾರ ಸಂಪೂರ್ಣ ಬೆಂಬಲ ನೀಡಬೇಕು. ರಾಜ್ಯದಲ್ಲಿ ಇಂಧನ ಪೋಲಾಗುವುದನ್ನು ತಡೆದು ಪರ್ಯಾಯ ಇಂಧನ ಮೂಲಗಳ ಬಳಕೆಯನ್ನು ಉತ್ತೇಜಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಯಾವುದೇ ಸವಾಲನ್ನು ಅವಕಾಶವನ್ನಾಗಿ ಪರಿವರ್ತಿಸುವ ಶಕ್ತಿ ಪ್ರಧಾನಿ ಮೋದಿಯವರಿಗಿದ್ದು, ಅವರ ಮಾರ್ಗದರ್ಶನದಲ್ಲಿ ಭಾರತವು ಇಂಧನ ಬಿಕ್ಕಟ್ಟನ್ನು ಯಶಸ್ವಿಯಾಗಿ ಎದುರಿಸಿ ಇಂಧನ ಕ್ಷೇತ್ರದಲ್ಲಿ ಜಾಗತಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂಬ ವಿಶ್ವಾಸವಿದೆ ಎಂದು ಎನ್. ರವಿಕುಮಾರ್ ತಿಳಿಸಿದ್ದಾರೆ.

# ಭಾರತ ಉಪಖಂಡದ ಪ್ರತಿನಿಧಿಯಾಗಿ ಬೆಂಗಳೂರಿನ ಮೋಹನ್.ಎನ್.ಎಸ್. ಭಾಗಿ

ಬೆಂಗಳೂರು

ಡಾವಿಂಚಿ ಗೌರ್ಮೆಟ್ ಸಂಸ್ಥೆ ಆಯೋಜಿಸಿದ್ದ ಬರಿಸ್ತಾ ಕ್ರಾಫ್ಟ್ ಚಾಂಪಿಯನ್‌ಶಿಪ್ 2025–26ರ ಮಧ್ಯಪ್ರಾಚ್ಯ, ಭಾರತೀಯ ಉಪಖಂಡ ಮತ್ತು ಆಫ್ರಿಕಾ ಪ್ರಾದೇಶಿಕ ಸುತ್ತು ಯಶಸ್ವಿಯಾಗಿ ನಡೆದಿದ್ದು, ಫೈನಲ್‌ನಲ್ಲಿ ಟರ್ಕಿಯ ಸೆಟಿನ್ ಅಲ್ಪೇ ಬಾಸ್ಕನ್ ವಿಜೇತರಾಗಿ ಹೊರಹೊಮ್ಮಿದ್ದಾರೆ.

ಈ ಸ್ಪರ್ಧೆಯಲ್ಲಿ ಬೆಂಗಳೂರಿನ ಮೋಹನ್ ಎನ್.ಎಸ್. ಅವರು ಭಾರತೀಯ ಉಪಖಂಡವನ್ನು ಪ್ರತಿನಿಧಿಸಿದ್ದು ವಿಶೇಷ ಗಮನಸೆಳೆದಿದೆ.

ಪೂರ್ವ ಆಫ್ರಿಕಾದ ಕೀನ್ಯಾದಲ್ಲಿ ಏಪ್ರಿಲ್ 11, 2026ರಂದು ನಡೆದ ಪ್ರಾದೇಶಿಕ ಸುತ್ತಿನ ಫೈನಲ್‌ನಲ್ಲಿ ಬಾಸ್ಕನ್ ಅವರು ಜಯಗಳಿಸಿದ್ದು, ಇದೀಗ ಮೇ 9, 2026ರಂದು ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ನಡೆಯಲಿರುವ "ವರ್ಲ್ಡ್ ಆಫ್ ಕಾಫಿ" ಜಾಗತಿಕ ಫೈನಲ್‌ಗೆ ಅರ್ಹತೆ ಪಡೆದಿದ್ದಾರೆ.



ಬ್ಯಾಂಕಾಕ್‌ನಲ್ಲಿ ಅವರು ಏಷ್ಯಾ ಪೆಸಿಫಿಕ್ ಹಾಗೂ ಲ್ಯಾಟಿನ್ ಅಮೇರಿಕಾ ವಲಯದ ಚಾಂಪಿಯನ್‌ಗಳ ವಿರುದ್ಧ ಡಾವಿಂಚಿ ಗೌರ್ಮೆಟ್ ಬರಿಸ್ತಾ ಕ್ರಾಫ್ಟ್ ಚಾಂಪಿಯನ್ 2025–26 ಪ್ರಶಸ್ತಿಗಾಗಿ ಸ್ಪರ್ಧಿಸಲಿದ್ದಾರೆ.

ಭಾರತೀಯ ಪ್ರತಿನಿಧಿಯಾಗಿದ್ದ ಮೋಹನ್ ಎನ್.ಎಸ್. ಅವರು ತಮ್ಮ ಕೃಷಿ ಹಿನ್ನೆಲೆಯನ್ನು ಕಾಫಿ ತಯಾರಿಕೆಯಲ್ಲಿ ಸೃಜನಾತ್ಮಕವಾಗಿ ಬಳಸಿಕೊಂಡರು. "ಫಾರ್ಮ್ ಟು ಕಪ್" ಪರಿಕಲ್ಪನೆಯಡಿ ಅವರು ಸಿದ್ಧಪಡಿಸಿದ ಪಾನೀಯಗಳು ತೀರ್ಪುಗಾರರ ಮೆಚ್ಚುಗೆಗೆ ಪಾತ್ರವಾದವು.

ಎಸ್‌ಪ್ರೆಸ್ಸೊ, ಓಟ್ ಮಿಲ್ಕ್, ಎಲ್ಡರ್‌ಫ್ಲವರ್ ಸಿರಪ್ ಹಾಗೂ ತೆಂಗಿನ ನೀರಿನ ಐಸ್ ಕ್ಯೂಬ್‌ಗಳನ್ನು ಬಳಸಿ ಅವರು ತಯಾರಿಸಿದ ವಿಶೇಷ ಪಾನೀಯ ಹಾಗೂ ಅರ್ಲ್ ಗ್ರೇ ಟೀ ಮತ್ತು ಲ್ಯಾವೆಂಡರ್ ಸಿರಪ್ ಮಿಶ್ರಿತ ಮತ್ತೊಂದು ಪಾನೀಯವು ಅವರ ಆಧುನಿಕ ಕಾಫಿ ಕಲೆಯ ನೈಪುಣ್ಯವನ್ನು ತೋರಿಸಿತು.

ಈ ವರ್ಷದ ಚಾಂಪಿಯನ್‌ಶಿಪ್ ಅನ್ನು "ಎಸ್‌ಪ್ರೆಸ್ಸೊ ಯುವರ್ ಫ್ಲೇವರ್" ಎಂಬ ವಿಷಯದಡಿ ಆಯೋಜಿಸಲಾಗಿತ್ತು. 2024ರ ಮೊದಲ ಆವೃತ್ತಿಯ ಯಶಸ್ಸಿನ ಬಳಿಕ ಡಾವಿಂಚಿ ಗೌರ್ಮೆಟ್ ಈ ಸ್ಪರ್ಧೆಯನ್ನು ಮತ್ತಷ್ಟು ವಿಸ್ತರಿಸಿದ್ದು, ಬರಿಸ್ತಾಗಳಿಗೆ ತಮ್ಮ ರುಚಿ, ಕಥೆ ಹೇಳುವ ಕಲೆ ಮತ್ತು ತಾಂತ್ರಿಕತೆಯನ್ನು ಪ್ರದರ್ಶಿಸಲು ವಿಶೇಷ ವೇದಿಕೆಯನ್ನು ಕಲ್ಪಿಸಿದೆ.

# ಮಾದಪ್ಪನ ಭಕ್ತರಿಗೆ ಭದ್ರತೆ ಒದಗಿಸಲು ಆಗ್ರಹ

ಬೆಂಗಳೂರು

ಮಲೈಮಹದೇಶ್ವರ ಬೆಟ್ಟದಲ್ಲಿ ಚಿರತೆ ದಾಳಿ, ಅಮಾಯಕ ಭಕ್ತರ ಸಾವು ರಾಜ್ಯಸರ್ಕಾರದ ಆಡಳಿತ ವೈಫಲ್ಯ, ನಿರ್ಲಕ್ಷ್ಯಕ್ಕೆ ಕನ್ನಡಿ ಹಿಡಿದಿದ್ದು, ಮಾದಪ್ಪನ ಭಕ್ತರಿಗೆ ಭದ್ರತೆ ಒದಗಿಸಲು ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ದೂರಿದ್ದಾರೆ



ಈ ಬಗ್ಗೆ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಭಕ್ತರು ದೇವರ ದರ್ಶನಕ್ಕೆ ತಮ್ಮ ಜೀವವನ್ನು ಪಣ ಇಟ್ಟು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರು ಇನ್ನಾದರು ಎಚ್ಚೆತ್ತುಕೊಳ್ಳಬೇಕು. ಭಕ್ತರ ಸುರಕ್ಷತೆಗೆ ಶಾಶ್ವತ ಮತ್ತು ಕಠಿಣ ಕ್ರಮಗಳನ್ನು ಜಾರಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ದೇವಸ್ಥಾನದ ಹೆಸರಿನಲ್ಲಿ ಕೋಟಿ ಕೋಟಿ ಹಣ ಸಂಗ್ರಹ ಮಾಡುವ ಸರ್ಕಾರಕ್ಕೆ ಭಕ್ತರ ಸುರಕ್ಷತೆ ಬಗ್ಗೆ ಕನಿಷ್ಠ ಕಾಳಜಿಯೂ ಇಲ್ಲದಿರುವುದು ಅತ್ಯಂತ ದುಃಖಕರ ಮತ್ತು ಖಂಡನೀಯ. ಪ್ರತಿ ವಾಹನದಿಂದ ನೂರಾರು ರೂಪಾಯಿ ಪ್ರವೇಶ ಶುಲ್ಕ ವಸೂಲಿ ಮಾಡುವ ಸರ್ಕಾರಕ್ಕೆ ಭಕ್ತರಿಗೆ ಸೂಕ್ತ ಭದ್ರತೆ ಒದಗಿಸಲು ಆಗದಿರುವುದು ವಿಪರ್ಯಾಸ ಎಂದಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು ಏನು ಮಾಡುತ್ತಿದ್ದಾರೆ, ಶ್ರೀ ಮಲೈಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಏನು ಮಾಡುತ್ತಿದೆ ಭಕ್ತರ ಜೀವಕ್ಕಿಂತ ಹಣದ ಸಂಗ್ರಹವೇ ಮುಖ್ಯವಾಗಿದೆಯೇ ಎಂದು ಅವರು ಪ್ರಶ್ನಿಸಿ, ಕಾಡು ಪ್ರಾಣಿಗಳ ದಾಳಿ ಹೆಚ್ಚಾಗುತ್ತಿದ್ದರೂ ಭದ್ರತಾ ಕ್ರಮ ಇಲ್ಲ. ನಿಯಂತ್ರಣ ಇಲ್ಲ. ತುರ್ತು ವೈದ್ಯಕೀಯ ಸೌಲಭ್ಯಗಳಿಲ್ಲ. ಜನರ ಸುರಕ್ಷೆತೆ, ಕಾಳಜಿ ಮರಿಚಿಕೆಯಾಗಿದೆ ಎಂದು ಆರೋಪಿಸಿದ್ದಾರೆ.

# ಪಲ್ಸರ್ 150 ಮತ್ತು 125 ಬೈಕ್‌ಗಳ ಮೇಲೆ ರಿಯಾಯಿತಿ

ಬೆಂಗಳೂರು: ವಿಶ್ವದ ಪ್ರಮುಖ ದ್ವಿಚಕ್ರ ಮತ್ತು ತ್ರಿಚಕ್ರ ವಾಹನ ತಯಾರಕ ಸಂಸ್ಥೆಯಾದ ಬಜಾಜ್ ಆಟೋ ಲಿಮಿಟೆಡ್, ಭಾರತದ ಜನಪ್ರಿಯ ಪರ್ಫಾರ್ಮೆನ್ಸ್ ಮೋಟಾರ್‌ಸೈಕಲ್‌ಗಳಾದ ಪಲ್ಸರ್ 150 ಮತ್ತು ಪಲ್ಸರ್ 125 ಮಾದರಿಗಳ ಮೇಲೆ ಸೀಮಿತ ಅವಧಿಯ ವಿಶೇಷ ಆಫರ್ ಘೋಷಿಸಿದೆ.

ಕ್ರಮವಾಗಿ ರೂ.1,10,896 ಮತ್ತು ರೂ.87,255 (ಎಕ್ಸ್ ಶೋರೂಂ, ದೆಹಲಿ) ದರದಿಂದ ಆರಂಭವಾಗುವ ಪಲ್ಸರ್ 150 ಮತ್ತು ಪಲ್ಸರ್ 125 ಬೈಕ್‌ಗಳು ಇದೀಗ ರೂ.3,000 ರಿಯಾಯಿತಿಯೊಂದಿಗೆ ಲಭ್ಯವಿವೆ.

ಕಾರ್ಯಕ್ಷಮತೆ, ವಿಶ್ವಾಸಾರ್ಹತೆ ಮತ್ತು ಕೈಗೆಟುಕುವ ಬೆಲೆಯನ್ನು ಬಯಸುವ ಸವಾರರಿಗೆ ಈ ಆಫರ್ ಉತ್ತಮ ಅವಕಾಶವಾಗಲಿದೆ ಎಂದು



ಕಂಪನಿ ತಿಳಿಸಿದೆ.

ನವೀಕರಿಸಿದ ಪಲ್ಸರ್ ಶ್ರೇಣಿಯ ಬೈಕ್‌ಗಳು ಹೊಸ ಯುವಜನತೆಯನ್ನು ಆಕರ್ಷಿಸುವ ಬಣ್ಣಗಳ ಆಯ್ಕೆಗಳು ಮತ್ತು ಅಪ್‌ಡೇಟ್ ಮಾಡಲಾದ ಗ್ರಾಫಿಕ್ಸ್‌ನೊಂದಿಗೆ ಮಾರುಕಟ್ಟೆಗೆ ಬಂದಿದೆ. ಹೊಸ ವಿನ್ಯಾಸವು ಬೈಕ್‌ಗಳಿಗೆ ಹೆಚ್ಚು ಸಮಕಾಲೀನ ಹಾಗೂ ಆಕರ್ಷಕ ಲುಕ್ ನೀಡಿದೆ.

# ಪಂಚಭೂತಗಳಲ್ಲಿ ಸುಧಾಕರ್ ಲೀನ



ಬೆಂಗಳೂರು

ಹಿರಿಯೂರು ಶಾಸಕರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವ ಡಿ. ಸುಧಾಕರ್ ಪಂಚಭೂತಗಳಲ್ಲಿ ಲೀನವಾಗಿದ್ದಾರೆ.

ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಸಚಿವ ಡಿ ಸುಧಾಕರ್ ಅವರು ಚಿಕಿತ್ಸೆ ಫಲಿಸದೇ ನಿಧನರಾಗಿದ್ದರು. ಇಂದು ಪಾವಗಡ ರಸ್ತೆಯ ಜೈನ ಮುಕ್ತಿಧಾಮದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯ ಸಂಸ್ಕಾರ ನಡೆಯಿತು. ಪುತ್ರ ಸುಹಾಸ್ ಅಂತಿಮ ಕ್ರಿಯೆಗಳನ್ನು ನಡೆಸಿದರು. ಜೈನ ಸಂಪ್ರದಾಯದಂತೆ ಅಂತಿಮ ಸಂಸ್ಕಾರ ನಡೆಸಲಾಗಿದ್ದು ಸುಧಾಕರ್ ಅವರ ಪಾರ್ಥಿವ ಶರೀರಕ್ಕೆ ಪುತ್ರ ಸುಹಾಸ್ ಅಗ್ನಿ ಸ್ಪರ್ಶ ಮಾಡಿದರು.

ಸಚಿವ ಡಿ.ಸುಧಾಕರ್ ಅವರು ಪಂಚಭೂತಗಳಲ್ಲಿ ಲೀನವಾದರು. ಅಂತ್ಯ ಸಂಸ್ಕಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸ್ಪೀಕರ್ ಯುಟಿ ಖಾದರ್, ಡಿಸಿಎಂ ಡಿಕೆ ಶಿವಕುಮಾರ್ ಸೇರಿದಂತೆ ಹಲವು ಶಾಸಕರು ಭಾಗಿಯಾಗಿದ್ದರು.

# ಬೇಡಿಕೆ ಈಡೇರದಿದ್ದರೆ ಪ್ರತಿಭಟನೆ ಎಚ್ಚರಿಕೆ

ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ–ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ವಿವಿಧ ಸಮಸ್ಯೆಗಳು ಹಾಗೂ ಬೇಡಿಕೆಗಳ ಕುರಿತು ನಗರದ ನೌಕರರ ಭವನದಲ್ಲಿರುವ ಜಿಬಿಎ ಕೇಂದ್ರ ಕಚೇರಿಯಲ್ಲಿ ತುರ್ತು ಸಭೆ ನಡೆಯಿತು.

ಸಂಘದ ಅಧ್ಯಕ್ಷ ಎ.ಅಮೃತ್ ರಾಜ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಐದು ಪಾಲಿಕೆಗಳ ಆರೋಗ್ಯ, ಕಂದಾಯ, ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳು ಹಾಗೂ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

ಸಭೆಯಲ್ಲಿ ಮಾತನಾಡಿದ ಎ.ಅಮೃತ್‌ರಾಜ್, ಆಯುಕ್ತರ ಕಚೇರಿಯಲ್ಲಿ ವಿವಿಧ ಸೌಲಭ್ಯಗಳಿಗೆ ಸಂಬಂಧಿಸಿದ ಕಡತಗಳ ವಿಲೇವಾರಿಯಲ್ಲಿ ಅನಗತ್ಯ ವಿಳಂಬವಾಗುತ್ತಿದೆ ಎಂದು ಆರೋಪಿಸಿದರು. ಮೃತಪಟ್ಟ ಅಧಿಕಾರಿ ಹಾಗೂ ನೌಕರರ ಕುಟುಂಬಗಳಿಗೆ ನಿವೃತ್ತಿ ವೇತನ, ಉಪದಾನ ಮತ್ತು ಇತರ ಆರ್ಥಿಕ ಸೌಲಭ್ಯಗಳ ಮಂಜೂರಾತಿ ತಡವಾಗುತ್ತಿರುವುದರಿಂದ ಕುಟುಂಬಗಳು ಸಂಕಷ್ಟ ಎದುರಿಸುತ್ತಿವೆ ಎಂದು ಹೇಳಿದರು.

ನೌಕರರಿಗೆ ನಿವೃತ್ತಿ ಸೌಲಭ್ಯ, ಉಪದಾನ ಮತ್ತು ವೇತನವನ್ನು ನಿಗದಿತ ಸಮಯಕ್ಕೆ ಪಾವತಿಸಲು ಕ್ರಮ ಕೈಗೊಳ್ಳಬೇಕು. ರಜೆ, ವಾರ್ಷಿಕ ವೇತನ, ಬಡ್ತಿ, ವೇತನ ಶ್ರೇಣಿ, ಟೈಮ್ ಬಾಂಡ್ ಸೇರಿದಂತೆ ವಿವಿಧ ಆರ್ಥಿಕ ಸೌಲಭ್ಯಗಳ ಮಂಜೂರಾತಿಯಲ್ಲಿಯೂ ವಿಳಂಬವಾಗುತ್ತಿರುವುದರಿಂದ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಅಧಿಕಾರಿ ಮತ್ತು ನೌಕರರು ಹಾಗೂ ಅವರ ಅವಲಂಬಿತ ಕುಟುಂಬಗಳಿಗೆ ಆರೋಗ್ಯ ಚಿಕಿತ್ಸೆ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಆಸ್ಪತ್ರೆಗಳೊಂದಿಗೆ ಒಪ್ಪಂದ ಮಾಡಿಕೊಂಡು ವೈದ್ಯಕೀಯ ಬಿಲ್ಲುಗಳ ಪಾವತಿಯನ್ನು ಶೀಘ್ರಗೊಳಿಸಬೇಕು ಎಂದು ಹೇಳಿದರು.

ಜಿಬಿಎ ಜಾರಿಯಾದ ಬಳಿಕ ಅರ್ಹ ಅಧಿಕಾರಿಗಳು ಮತ್ತು ನೌಕರರಿಗೆ ವಸತಿ ಗೃಹ ಹಂಚಿಕೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಅಗತ್ಯವಿಲ್ಲದ ಉನ್ನತ ಹುದ್ದೆಗಳಿಗೆ ಕಡಿವಾಣ ಹಾಕಬೇಕು ಎಂದು ಅವರು ಅಭಿಪ್ರಾಯಪಟ್ಟರು.

ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ಕಾರಣದಿಂದ ಅಧಿಕಾರಿಗಳು ಮತ್ತು ನೌಕರರಿಗೆ ಬಡ್ತಿ ದೊರಕುವಲ್ಲಿ ವಿಳಂಬವಾಗುತ್ತಿದೆ. ಈ ಸಮಸ್ಯೆಯನ್ನು ಬಗೆಹರಿಸಿ ಸೂಕ್ತ ಸಮಯಕ್ಕೆ ಮುಂಬಡ್ತಿ ನೀಡಬೇಕು. 2026ರ ಸೇವಾ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಬೇಕು ಎಂದು ಒತ್ತಾಯಿಸಿದರು.

ನಾಡಪ್ರಭು ಕೆಂಪೇಗೌಡ ದಿನಾಚರಣೆ ಅಂಗವಾಗಿ ಅಧಿಕಾರಿ ಮತ್ತು ನೌಕರರಿಗಾಗಿ ಕ್ರೀಡಾಕೂಟ ಆಯೋಜಿಸಬೇಕೆಂದು ಮನವಿ ಮಾಡಿದರು. ಪಂಚ ಪಾಲಿಕೆಗಳಲ್ಲಿ ಆಡಳಿತ, ಆರೋಗ್ಯ ಮತ್ತು ಹಣಕಾಸು ವಿಭಾಗಗಳಲ್ಲಿ ಅಗತ್ಯ ಸಿಬ್ಬಂದಿಗಳ ಕೊರತೆಯಿಂದ ಕಡತಗಳ ವಿಲೇವಾರಿ ಹಾಗೂ ಆಡಳಿತ ಕಾರ್ಯಗಳಲ್ಲಿ ವಿಳಂಬವಾಗುತ್ತಿದೆ ಎಂದು ಸಭೆಯಲ್ಲಿ ಚರ್ಚಿಸಲಾಯಿತು.

ಸಮಸ್ಯೆ ಹಾಗೂ ಬೇಡಿಕೆಗಳ ಈಡೇರಿಕೆಗೆ ಉಪಮುಖ್ಯಮಂತ್ರಿಗಳ ಗಮನ ಸೆಳೆಯಲು ಪೋಸ್ಟ್ ಕಾರ್ಡ್ ಚಳುವಳಿ ಹಮ್ಮಿಕೊಳ್ಳಲಾಗುವುದು. ಜೊತೆಗೆ ಆಡಳಿತಾಧಿಕಾರಿ ಮತ್ತು ಮುಖ್ಯ ಆಯುಕ್ತರಿಗೆ ಮನವಿ ಸಲ್ಲಿಸಲಾಗುವುದು. ಸಮಸ್ಯೆಗಳು ಬಗೆಹರಿಯದಿದ್ದರೆ ಮುಂದಿನ ದಿನಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘ ಎಚ್ಚರಿಕೆ ನೀಡಿದೆ.

# ಇಬ್ಬರು ಮಕ್ಕಳ ಸಜೀವ ದಹನ

ಬೆಂಗಳೂರು

ನಾರಾಯಣಪುರದಲ್ಲಿ ಸಂಭವಿಸಿದ ಆಕಸ್ಮಿಕ ಅಗ್ನಿ ಅವಘಡದಲ್ಲಿ ಇಬ್ಬರು ಮಕ್ಕಳು ಜೀವನ ದಹನವಾಗಿರುವ ಘಟನೆ ನಡೆದಿದೆ. ಕೂಲಿ ಕೆಲಸಕ್ಕಾಗಿ ನಗರಕ್ಕೆ ಬಂದಿದ್ದ ಕುಟುಂಬವೊಂದು ನಾರಾಯಣಪುರದಲ್ಲಿ ಶೆಡ್ ಹಾಕಿಕೊಂಡು ವಾಸವಿತ್ತು. ಅಗ್ನಿ ಅವಘಡದಲ್ಲಿ ಮಕ್ಕಳಾದ 5 ವರ್ಷದ ಅರ್ಜುನ ಹಾಗೂ 3 ವರ್ಷದ ಆಶಾ ಮೃತಪಟ್ಟಿವೆ.

ಕೆಲಸಕ್ಕಾಗಿ ಪೋಷಕರು ಮಕ್ಕಳನ್ನು ಅಜ್ಜಿಯ ಬಳಿ ಬಿಟ್ಟು ಹೋಗಿದ್ದರು. ಇನ್ನು ಅಜ್ಜಿ ಮಕ್ಕಳನ್ನು ಶೆಡ್‌ನಲ್ಲಿ ಬಿಟ್ಟು ಸ್ವಲ್ಪ ದೂರ ಹೊರಗಡೆ ಹೋಗಿದ್ದರು. ಈ ವೇಳೆ ಅನಿರೀಕ್ಷಿತವಾಗಿ ಶೆಡ್‌ಗೆ ಬೆಂಕಿ ಹೊತ್ತಿಕೊಂಡಿದೆ. ಮಕ್ಕಳ ಕಿರುಚಾಟ ಕೇಳಿ ಸ್ಥಳೀಯರು ಓಡಿ ಬಂದು ಬೆಂಕಿ ನಂದಿಸಲು ಪ್ರಯತ್ನಿಸಿದರೂ ಆದರೆ ದುರಾದೃಷ್ಟವಶಾತ್ ಮಕ್ಕಳು ಮೃತಪಟ್ಟಿದ್ದವು.

# ಚಿನ್ನದ ದರ ಇಳಿಕೆ

ಮುಂಬೈ

ದೇಶದ ಆರ್ಥಿಕ ಹಿತದೃಷ್ಟಿಯಿಂದ "ಭಾರತೀಯರು ಒಂದು ವರ್ಷದವರೆಗೆ ಮದುವೆ ಸಮಾರಂಭಗಳಿಗೆ ಚಿನ್ನ ಖರೀದಿಸಬೇಡಿ" ಎಂದು ಪ್ರಧಾನಿ ನರೇಂದ್ರ ಮೋದಿ ಅವರು ನೀಡಿದ ಕರೆ ಮಾರುಕಟ್ಟೆಯ ಮೇಲೆ ತಕ್ಷಣದ ಪರಿಣಾಮ ಬೀರಿದೆ. ಪ್ರಧಾನಿಯವರ ಈ ಮಹತ್ವದ ಮನವಿಯ ಬೆನ್ನಲ್ಲೇ ಮಲ್ಟಿ ಕಮಾಡಿಟಿ ಎಕ್ಸ್‌ಚೇಂಜ್‌ನಲ್ಲಿ ಚಿನ್ನದ ದರದಲ್ಲಿ ಗಣನೀಯ ಕುಸಿತ ಕಂಡುಬಂದಿದೆ.

ಬೆಳಗ್ಗೆ 9:40ರ ವೇಳೆಗೆ ಜೂನ್ ತಿಂಗಳ ಚಿನ್ನದ ಫ್ಯೂಚರ್ ಕಾಂಟ್ರಾಕ್ಟ್ 574 ರೂ. (.38%) ರೂ. ಇಳಿಕೆಯಾಗಿದೆ 1,53,669 ರೂ.ನಲ್ಲಿ ವ್ಯವಹಾರ ನಡೆಸುತ್ತಿದೆ. ಆದರೆ ಬೆಳ್ಳಿಯ ದರ ಏರಿಕೆಯಾಗಿದೆ. ಜೂನ್ ಫ್ಯೂಚರ್ 698 ರೂ. (.26%) ಏರಿಕೆಯಾಗಿದ್ದು 2,65,957 ರೂ.ನಲ್ಲಿ ವ್ಯವಹಾರ ನಡೆಸುತ್ತಿದೆ.

# 'ಚಿನ್ನ ಖರೀದಿ ಬೇಡ, ತೈಲ ಬಳಕೆ ತಗ್ಗಿಸಿ ಎನ್ನುವುದು ಯಾವ ಅಭಿವೃದ್ಧಿಯ ಲಕ್ಷಣ'

ಬೆಂಗಳೂರು

ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಮತ್ತು ಖಾದ್ಯ ಎಣ್ಣೆ ಕಡಿಮೆ ಬಳಸಿ, ವಿದೇಶ ಪ್ರವಾಸ ಮಾಡಬೇಡಿ ಮತ್ತು ಗೊಬ್ಬರ ಬಳಕೆ ತಗ್ಗಿಸಿ ಎಂದು ಬೇಡಿಕೊಳ್ಳುತ್ತಿರುವುದು ಯಾವ ಅಭಿವೃದ್ಧಿಯ ಲಕ್ಷಣ ಎನ್ನುವುದನ್ನು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟಪಡಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರು ಭಾನುವಾರ ಬೆಂಗಳೂರಿನಲ್ಲಿ ಮಾತನಾಡಿದ್ದು ದೇಶದ ಪ್ರಧಾನಿಯಾಗಿಯೋ? ಇಲ್ಲವೇ ರಾಜ್ಯ ಬಿಜೆಪಿ ಅಧ್ಯಕ್ಷರೋ? ಇಲ್ಲವೇ ರಾಜ್ಯದ ವಿರೋಧ ಪಕ್ಷದ ನಾಯಕರಾಗಿಯೋ? ಎನ್ನುವುದನ್ನು ಅವರೇ ಸ್ಪಷ್ಟಪಡಿಸಿ ಸಾರ್ವಜನಿಕರಲ್ಲಿ ಮೂಡಿರುವ ಗೊಂದಲವನ್ನು ಬಗೆಹರಿಸಬೇಕು.

2024–25ರಲ್ಲಿಯೇ ಭಾರತವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯ ದೇಶ ಮಾಡುವೆ ಎಂದು ಕೊಚ್ಚಿಕೊಂಡಿದ್ದ, ಭಾರತದ ಅಭಿವೃದ್ಧಿ ರಥ ನಾಗಾಲೋಟದಿಂದ ಮುಂದೋಡುತ್ತಿದೆ ಎಂದು ಬೀಗಿದ್ದ ಮತ್ತು ದೇಶದ ಬಡತನವನ್ನು ನಿರ್ಮೂಲನೆ ಮಾಡಿ ಆಗಿದೆ ಎಂದು ತನ್ನ ಬೆನ್ನನ್ನು ತಾನೇ ಚಪ್ಪರಿಸಿಕೊಂಡಿದ್ದ ಪ್ರಧಾನಿಯವರು ಈಗ ಉಪದೇಶ ಮಾಡುತ್ತಿರುವ ಗೂಢಾರ್ಥವೇನು ಎಂದು ಕೆಣಕಿದ್ದಾರೆ.



ಪ್ರಧಾನಮಂತ್ರಿಯವರು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಉದ್ದೇಶಿಸಿ ಮಾತನಾಡಿದ್ದರೂ ಅವರ ಮಾತಿನಲ್ಲಿ ಕೇಂದ್ರದಲ್ಲಿರುವ ಅವರದ್ದೇ ಸರ್ಕಾರದ ವೈಫಲ್ಯ ಮತ್ತು ರಾಜ್ಯದಲ್ಲಿರುವ ಅವರ ಪಕ್ಷದ ದುಸ್ಥಿತಿಯಯನ್ನು ಸರಿಪಡಿಸಲಾಗದ ಅಸಹಾಯಕತೆ ಇತ್ತು. ತನ್ನ ಎಲೆ ಮೇಲೆ ಆನೆ ಸತ್ತು ಬಿದ್ದಿದ್ದರೂ ಎದುರಿನವರ ಎಲೆ ಮೇಲೆ ಸತ್ತುಬಿದ್ದ ನೊಣವನ್ನು ಹುಡುಕಾಡುವ ಢೋಂಗಿ ಬುದ್ಧಿಯೂ ಅವರ ಭಾಷಣದಲ್ಲಿ ಇತ್ತು.

ಪಂಡಿತ್ ಜವಾಹರಲಾಲ್ ನೆಹರೂ, ಇಂದಿರಾಗಾಂಧಿ, ಅಟಲ್ ಬಿಹಾರಿ ವಾಜಪೇಯಿಯವರೂ ಸೇರಿದಂತೆ ದೇಶದ ಪ್ರಧಾನಮಂತ್ರಿಯಾದವರು ಎಂದೂ ಕೆಟ್ಟ ರಾಜಕಾರಣಿಗಳ ರೀತಿ ಬೀದಿ ಭಾಷಣ ಮಾಡಿ ವಿರೋಧಪಕ್ಷಗಳನ್ನು ಹಳಿಯಲು ಹೋಗಿಲ್ಲ. ಅವರೆಲ್ಲರೂ ಕಾಪಾಡಿಕೊಂಡು ಬಂದಿದ್ದ ಪ್ರಧಾನಿ ಕುರ್ಚಿಯ ಘನತೆ, ಗಾಂಭೀರ್ಯ ಮತ್ತು ಔಚಿತ್ಯವನ್ನು ಮೋದಿ ಅವರು ತಮ್ಮ ಸುಳ್ಳು, ಕೀಳು ಅಭಿರುಚಿ ಮತ್ತು ದ್ವೇಷಾಸೂಯೆಗಳನ್ನು ವ್ಯಕ್ತಪಡಿಸುವ ಭಾಷಣಗಳ ಮೂಲಕ ಮಣ್ಣುಪಾಲು ಮಾಡುತ್ತಿದ್ದಾರೆ. ಬೆಂಗಳೂರಿಗೆ ಬಂದಿದ್ದ ಮೋದಿಯವರು ಇನ್ನೂ ಪಂಚ ರಾಜ್ಯಗಳ ಚುನಾವಣಾ ಸಮಾವೇಶಗಳ ಗುಂಗಿನಲ್ಲಿಯೇ ಇದ್ದಂತೆ ಕಂಡರು.

ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ, ಖಾದ್ಯತೈಲ ಎಲ್ಲವೂ ದುಬಾರಿಯಾಗಿ ದೇಶದ ಜನರ ನಿತ್ಯದ ಜೀವನ ನಿರ್ವಹಣೆಗಾಗಿ ಪರದಾಡುವಂತಹ ಪರಿಸ್ಥಿತಿ ನಿರ್ಮಾಣಕ್ಕೆ ದೇಶದ ಎಡಬಿಡಂಗಿ ವಿದೇಶಾಂಗ ನೀತಿ ಕಾರಣ ಎನ್ನುವುದನ್ನು ಅರಿತುಕೊಳ್ಳುವಷ್ಟು ಜನತೆ ಪ್ರಬುದ್ಧರಾಗಿದ್ದಾರೆ. ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ಜಂಟಿಯಾಗಿ ನಡೆಸುತ್ತಿರುವ ಯುದ್ಧದ ನಡುವೆ ಭಾರತ ಸಿಕ್ಕಿಹಾಕಿಕೊಂಡು ಒದ್ದಾಡುತ್ತಿದೆ. ಇಂತಹ ಸಂದರ್ಭದಲ್ಲಿ ನ್ಯಾಯ ಮತ್ತು ನೀತಿಯ ಪರವಾಗಿ ಗಟ್ಟಿಯಾದ ನಿಲುವು ತೆಗೆದುಕೊಂಡಿದ್ದರೆ ಭಾರತ ಇಂದಿನ ದುಸ್ಥಿತಿಯನ್ನು ಎದುರಿಸುತ್ತಿರಲಿಲ್ಲ. ಮೋದಿಯವರೇ, ಈ ವೈಫಲ್ಯಕ್ಕೆ ಯಾರನ್ನು ದೂರುತ್ತೀರಿ? ಜವಾಹರಲಾಲ್ ನೆಹರೂ ಅವರನ್ನೇ? ಕಾಂಗ್ರೆಸ್ ಪಕ್ಷವನ್ನೇ? ಉತ್ತರಿಸಿ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಕಾಂಗ್ರೆಸ್ ಆಡಳಿತದಲ್ಲಿ ಕರ್ನಾಟಕದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ. ದೇಶದ ತಲಾವಾರು ಆದಾಯ ರೂ.2.11 ಲಕ್ಷ ರೂ.ಗಳಾಗಿದ್ದರೆ ಕರ್ನಾಟಕದ್ದು 4.33 ಲಕ್ಷ ರೂಪಾಯಿಗಳು. ದೇಶದ ಜಿಡಿಪಿ ಬೆಳವಣಿಗೆಯ ದರ ಶೇಕಡಾ 7.4 ಆಗಿದ್ದರೆ, ಕರ್ನಾಟಕದ್ದು ಶೇಕಡಾ 8.1 ಆಗಿದೆ. ದೇಶದ ಜಿಡಿಪಿಯಲ್ಲಿ ಕರ್ನಾಟಕದ ಪಾಲು ಶೇಕಡಾ 9.19 ಆಗಿದೆ. ಜಿಎಸ್‌ಟಿ ಸಂಗ್ರಹದಲ್ಲಿ ಮಹಾರಾಷ್ಟ್ರದ ನಂತರ ಕರ್ನಾಟಕದ್ದೇ ಅತ್ಯಧಿಕ ಪಾಲು. ಕರ್ನಾಟಕ ಅಭಿವೃದ್ಧಿಯ ಪಥದಲ್ಲಿ ವೇಗದಲ್ಲಿ ಸಾಗುತ್ತಿರುವುದಕ್ಕೆ ಇನ್ನೇನು ಪುರಾವೆ ಬೇಕು? ಮುಂದಿನ ಬಾರಿ ನಮ್ಮ ಸರ್ಕಾರದ ವಿರುದ್ಧ ಆರೋಪ ಮಾಡುವಾಗ ಸ್ವಲ್ಪ ಪೂರ್ವ ತಯಾರಿ ಮಾಡಿಕೊಂಡು ಬನ್ನಿ. ದೇಶದ ಪ್ರಧಾನಿಯವರ ಬಾಯಲ್ಲಿ ಸುಳ್ಳು ಹೇಳಿಕೆಗಳು ಶೋಭೆಯಲ್ಲ.

ಪ್ರಧಾನಿ ಮೋದಿಯವರು ತಮ್ಮ ಪಕ್ಷದ ವಿಶ್ವಾಸದ್ರೋಹದ ಚರಿತ್ರೆಯನ್ನು ಒಮ್ಮೆ ನೆನಪುಮಾಡಿಕೊಂಡಿದ್ದರೆ ಅವರು ಖಂಡಿತ ಕಾಂಗ್ರೆಸ್ ಪಕ್ಷದ ಮೇಲೆ ವಿಶ್ವಾಸದ್ರೋಹದ ಆರೋಪವನ್ನು ಮಾಡುತ್ತಿರಲಿಲ್ಲ. ಬಿಎಸ್‌ಪಿ, ಟಿಎಂಸಿ, ಡಿಎಂಕೆ, ಎಐಡಿಎಂಕೆ, ಪಿಡಿಪಿ, ಶಿವಸೇನೆ, ಅಕಾಲಿದಳ, ನ್ಯಾಷನಲ್ ಕಾನ್ಫರೆನ್ಸ್ ಸೇರಿದಂತೆ ಬಿಜೆಪಿ ಜೊತೆ ಮೈತ್ರಿಮಾಡಿಕೊಂಡು ವಿಶ್ವಾಸದ್ರೋಹಕ್ಕೊಳಗಾದ ಪ್ರಾದೇಶಿಕ ಪಕ್ಷಗಳ ಪಟ್ಟಿ ಬೆಳೆಯುತ್ತಲೇ ಇದೆ. ಇನ್ನೊಂದೆಡೆ ಕಾಂಗ್ರೆಸ್ ಮತ್ತು ಇತರ ಪಕ್ಷಗಳ ನಾಯಕರನ್ನು ಬ್ಲಾಕ್ ಮೇಲ್ ಮಾಡಿ ಅವರು ತಮ್ಮ ಪಕ್ಷಗಳಿಗೆ ವಿಶ್ವಾಸದ್ರೋಹ ಎಸಗುವಂತೆ ಮಾಡಿ, ಜೊತೆಯಲ್ಲಿ ಸೇರಿಸಿಕೊಂಡ ವಿರೋಧ ಪಕ್ಷದ ನಾಯಕರ ಪಟ್ಟಿಯೂ ಬೆಳೆಯುತ್ತಿದೆ.

ಇಂತಹ ವಿಶ್ವಾಸದ್ರೋಹಿ ಪಕ್ಷದ ನಾಯಕರಾದ ಮೋದಿ, ಕಾಂಗ್ರೆಸ್ ಪಕ್ಷದ ವಿರುದ್ಧ ವಿಶ್ವಾಸದ್ರೋಹದ ಆರೋಪ ಮಾಡುತ್ತಿರುವುದನ್ನು ನೋಡಿ ದೇಶದ ಜನರೇ ಅಪಹಾಸ್ಯ ಮಾಡುತ್ತಿದ್ದಾರೆ.

# ನೀರಿನ ಕ್ಯಾನ್ ವಿತರಣೆ



ಕೆಜಿಎಫ್

ನಗರದ 16ನೇ ವಾರ್ಡಿನ ಜೆಡಿಎಸ್ ಪಕ್ಷದ ನಗರಸಭೆ ಆಕಾಂಕ್ಷಿ ಅಭ್ಯರ್ಥಿ ಪ್ರಕಾಶ್ ಅವರಿಂದ ವಾರ್ಡಿನ ನಿವಾಸಿಗಳಿಗೆ ಹೊಸ ನೀರಿನ ಕ್ಯಾನ್ ಹಾಗೂ ನೀರಿನ ವಿತರಣೆ ಕಾರ್ಯಕ್ರಮ ನಡೆಯಿತು.

ಸಮಾಜ ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಪ್ರಕಾಶ್ ಅವರು, ವಾರ್ಡಿನ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಇರುವುದನ್ನು ಗಮನಿಸಿ ಈ ಸೇವಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಅವರು, ಜೆಡಿಎಸ್ ಪಕ್ಷ ತನ್ನದೇ ಆದ ಇತಿಹಾಸ ಹೊಂದಿದ್ದು, ಪಕ್ಷದ ನಾಯಕ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಲವಾರು ಜನಪರ ಕಾರ್ಯಕ್ರಮಗಳನ್ನು ನೀಡಿದ್ದಾರೆ ಎಂದರು. ಇಂತಹ ಪಕ್ಷದಲ್ಲಿ ಕೆಲಸ ಮಾಡುವ ಅವಕಾಶ ಸಿಕ್ಕಿದ್ದು ಸಂತೋಷದ ಸಂಗತಿ. ವಾರ್ಡಿನ ಜನರಿಗೆ ನಗರಸಭೆ ಸದಸ್ಯನಾಗಿ ಹೆಚ್ಚಿನ ಸೇವೆ ಮಾಡುವ ಉದ್ದೇಶದಿಂದ ಈ ಕಾರ್ಯ ಆರಂಭಿಸಲಾಗಿದೆ ಎಂದು ಹೇಳಿದರು.

ಜನರು ಆಶೀರ್ವಾದ ಮಾಡಿದರೆ ವಾರ್ಡಿನಲ್ಲಿ ಕಸದ ಸಮಸ್ಯೆ ಹಾಗೂ ನೀರಿನ ಸಮಸ್ಯೆ ನಿವಾರಣೆಗೆ ಆದ್ಯತೆ ನೀಡಲಾಗುವುದು. ನಗರಸಭೆ ಕಚೇರಿಯ ಯಾವುದೇ ಕೆಲಸಗಳಿಗಾಗಿ ಸಾರ್ವಜನಿಕರು ಅಲೆದಾಡಬೇಕಾಗಿಲ್ಲ. ನಾನು ಸ್ವತಃ ನಿಂತು ಮನೆಮನೆಗೆ ತೆರಳಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುತ್ತೇನೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೆಜಿಎಫ್ ತಾಲೂಕು ಜೆಡಿಎಸ್ ಅಧ್ಯಕ್ಷ ಲಿಯೋ ಜೋಸೆಫ್ ಮಾತನಾಡಿ, ನಗರಸಭೆಯಲ್ಲಿ ಹಲವಾರು ಭ್ರಷ್ಟಾಚಾರಗಳು ನಡೆಯುತ್ತಿದ್ದು ಅವುಗಳನ್ನು ಪ್ರಶ್ನಿಸುವವರು ಇಲ್ಲ. ಜೆಡಿಎಸ್ ಪಕ್ಷಕ್ಕೆ ಮತ ನೀಡಿದರೆ ನಗರಸಭೆಯಲ್ಲಿ ನಡೆಯುವ ಎಲ್ಲಾ ಭ್ರಷ್ಟಾಚಾರಗಳನ್ನು ಬಯಲಿಗೆಳೆಯಲಾಗುವುದು. ಜೊತೆಗೆ 35 ವಾರ್ಡುಗಳನ್ನು ಮಾದರಿ ವಾರ್ಡುಗಳನ್ನಾಗಿ ಅಭಿವೃದ್ಧಿಪಡಿಸುವ ಗುರಿ ಹೊಂದಿದ್ದೇವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಾರ್ಡಿನ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಪುರಸಭೆ ಸದಸ್ಯ ಬಿ.ರಾಮಚಂದ್ರಯ್ಯ ನಿಧನ

ರಾಮನಗರ

ಜಿಪಂ ಮಾಜಿ ಸದಸ್ಯರು ಹಾಗೂ ಹಾಲಿ ಬಿಡದಿ ಪುರಸಭೆ 21ನೇ ವಾರ್ಡಿನ ಸದಸ್ಯ ಬಿ.ರಾಮಚಂದ್ರಯ್ಯ(74) ಭಾನುವಾರ ಸಂಜೆ ನಿಧನರಾದರು.

ಇತ್ತೀಚೆಗೆ ಪಾರ್ಶ್ವವಾಯು ಖಾಯಿಲೆಗೆ ಒಳಗಾಗಿದ್ದ ಬಿ.ರಾಮಚಂದ್ರಯ್ಯ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿ ಸಾವು ಬದುಕಿನ ನಡುವೆ ಹೋರಾಟ ನಡೆಸಿದ್ದರು. ಭಾನುವಾರ ಚಿಕಿತ್ಸೆ ಫಲಕಾರಿಯಾಗದೆ ಮೃತರಾದರು. ಪತ್ನಿ ಕಮಲಾಕ್ಷಮ್ಮ, ಇಬ್ಬರು ಪುತ್ರರು ಮತ್ತು ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧುಬಳಗವನ್ನು ಅವರು ಅಗಲಿದ್ದಾರೆ. ಮೃತರ ಅಂತಿಮ ಸಂಸ್ಕಾರ ಇಟ್ಟಮಡು ಗ್ರಾಮದಲ್ಲಿ ಸೋಮವಾರ ಸಕಲ ವಿಧಿವಿಧಾನಗಳೊಂದಿಗೆ ನೆರವೇರಿತು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ರವರು ಇಟ್ಟಮಡು ಗ್ರಾಮಕ್ಕೆ ಆಗಮಿಸಿ ಮೃತ ಬಿ.ರಾಮಚಂದ್ರಯ್ಯನವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಕುಟುಂಬದ ಸದಸ್ಯರಿಗೆ ಸಾಂತ್ವಾನ ಹೇಳಿದರು. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ರಾಮಚಂದ್ರಯ್ಯನವರ ನಿಧನದಿಂದ ಬಹಳ ನೋವಾಗಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ, ಕುಟುಂಬದವರಿಗೆ ಈ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡುವಂತೆ ಪ್ರಾರ್ಥಿಸುವುದಾಗಿ ತಿಳಿಸಿದರು.

ಇದೇ ವೇಳೆ ಸ್ಥಳದಲ್ಲಿ ಹಾಜರಿದ್ದ ಮಾಜಿ ಶಾಸಕ ಸಿ.ಎಂ.ಲಿಂಗಪ್ಪನವರ ಯೋಗಕ್ಷೇಮವನ್ನು ವಿಚಾರಿಸಿದ ಡಿ.ಕೆ.ಶಿವಕುಮಾರ್, ಕೆಲಹೊತ್ತು ಕುಳಿತು ರಾಮಚಂದ್ರಯ್ಯನವರ ಅಕಾಲಿಕ ನಿಧನಸ ಬಗ್ಗೆ ಲಿಂಗಪ್ಪನವರ ಬಳಿ ಸಮಾಲೋಚಿಸಿ ಅಲ್ಲಿಂದ ನಿರ್ಗಮಿಸಿದರು.

# ಅಗ್ನಿಕುಂಡೋತ್ಸವ ಜಾತ್ರಾ ಮಹೋತ್ಸವ ಯಶಸ್ವಿ



ಕನಕಪುರ

ನಗರದ ಹೌಸಿಂಗ್ ಬೋರ್ಡ್ ಬಳಿಯ ಅಭಯ ಆಂಜನೇಯ ಸ್ವಾಮಿ ಮತ್ತು ಕಬ್ಬಾಳಮ್ಮ ದೇವಾಲಯದಲ್ಲಿ ಸೋಮವಾರ ಅಗ್ನಿಕುಂಡೋತ್ಸವ ಹಾಗೂ ಜಾತ್ರಾ ಮಹೋತ್ಸವ ಭಕ್ತಿಭಾವದಿಂದ ಮತ್ತು ವಿಜೃಂಭಣೆಯಿಂದ ನಡೆಯಿತು.

ಕಳೆದ ವರ್ಷ ಆರಂಭಗೊಂಡಿದ್ದ ಜಾತ್ರಾ ಮಹೋತ್ಸವವು ಈ ಬಾರಿ ಎರಡನೇ ವರ್ಷದ ಆಚರಣೆಯಾಗಿ ನೆರವೇರಿತು. ಬಡಾವಣೆಯ ನಿವಾಸಿಗಳು ಭಾನುವಾರ ಹಾಗೂ ಸೋಮವಾರ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳೊಂದಿಗೆ ಉತ್ಸವವನ್ನು ಸಂಭ್ರಮದಿಂದ ಆಚರಿಸಿದರು. ಭಾನುವಾರ ರಾತ್ರಿ ಎಳವಾರ ಕಾರ್ಯಕ್ರಮ ನಡೆದಿದ್ದು, ಸೋಮವಾರ ಬೆಳಿಗ್ಗೆ ಗಂಗಾಪೂಜೆಯೊಂದಿಗೆ ದೇವರ ಮೆರವಣಿಗೆ ಆರಂಭಿಸಲಾಯಿತು. ಕಾನಕಾನಹಳ್ಳಿ ಪಾರ್ಕ್‌ನಿಂದ ಮುಖ್ಯರಸ್ತೆ ಮೂಲಕ ದೇವಾಲಯದವರೆಗೆ ದೇವರ ಮೆರವಣಿಗೆ ನಡೆಸಲಾಯಿತು. ಬಡಾವಣೆಯ ಮಹಿಳೆಯರು ತಂಬಿಟ್ಟಿನ ಆರತಿಯನ್ನು ಬಗೆಬಗೆಯ ಪುಷ್ಪಗಳಿಂದ ಅಲಂಕರಿಸಿ ಮೆರವಣಿಗೆಯಲ್ಲಿ ಭಾಗವಹಿಸುವ ಮೂಲಕ ವಿಶೇಷ ಮೆರಗು ತಂದರು.

ಮೆರವಣಿಗೆಯಲ್ಲಿ ಸಾಗಿದ ಕಬ್ಬಾಳಮ್ಮ ದೇವಿಯ ಗಿಂಡಿಯನ್ನು ಹೊತ್ತ ಅರ್ಚಕ ಪ್ರಕಾಶ್ ದೇವಾಲಯದ ಸುತ್ತ ಮೂರು ಪ್ರದಕ್ಷಿಣೆ ಹಾಕಿ ಅಗ್ನಿಕುಂಡ ಪ್ರವೇಶಿಸಿದರು. ಈ ದೃಶ್ಯ ವೀಕ್ಷಿಸಲು ಸಾವಿರಾರು ಭಕ್ತರು ಸೇರಿದ್ದು, ದೇವರು ಅಗ್ನಿಕುಂಡ ಪ್ರವೇಶಿಸುತ್ತಿದ್ದಂತೆ ಜಯಘೋಷ ಮೊಳಗಿತು. ಭಕ್ತರು ಅಗ್ನಿಕುಂಡೋತ್ಸವದ ದೃಶ್ಯವನ್ನು ಕಣ್ತುಂಬಿಕೊಂಡರು.

ತಂಬಿಟ್ಟಿನ ಆರತಿ ತಂದಿದ್ದ ಮಹಿಳೆಯರು ಕಬ್ಬಾಳಮ್ಮ ದೇವಿಗೆ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ದೇವಾಲಯ ಸಮಿತಿಯ ವತಿಯಿಂದ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಯಿತು. ಜಾತ್ರಾ ಮಹೋತ್ಸವ ಅಂಗವಾಗಿ ಬಡಾವಣೆಯ ಪ್ರಮುಖ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

# ‘ಕನ್ನಡ ಭಾಷೆಯನ್ನು ಸರ್ಕಾರಿ ಇಲಾಖೆಗಳಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸಿ’

ಕೋಲಾರ

ಸರ್ಕಾರಿ ಇಲಾಖೆಗಳು, ಸರ್ಕಾರದ ಸೌಮ್ಯದ ಪ್ರಾಧಿಕಾರಗಳು ಹಾಗೂ ಇತರೆಡೆ ಕನ್ನಡ ಭಾಷೆಯನ್ನು ಆಡಳಿತದಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿಗಳಾದ ಡಾ. ಎಂ.ಆರ್. ರವಿ ಅವರು ತಿಳಿಸಿದರು.



ಅವರು ಇಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ತಮ್ಮ ಕಛೇರಿಯಲ್ಲಿ ಹಮ್ಮಿಕೊಳ್ಳಲಾದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ವಿಷಯ ತಿಳಿಸಿದರು.

ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ: ಜಿಲ್ಲೆಯ ಎಲ್ಲಾ ವ್ಯಾಪಾರ ಮಳಿಗೆಗಳು ಕೈಗಾರಿಕೆಗಳು, ಕಛೇರಿಗಳಲ್ಲಿ ನಾಮಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯಲ್ಲೇ ಇರುವಂತೆ ಸಂಬಂಧಪಟ್ಟ ಇಲಾಖೆಗಳು ಕ್ರಮ ವಹಿಸಬೇಕು. ಕನ್ನಡ ನಮ್ಮ ಮಾತೃಭಾಷೆ ತಾಯಿಗೆ ಸಮಾನ, ಅದಕ್ಕೆ ಪ್ರಾಶಸ್ತ್ಯ ಕೊಡದಿದ್ದರೆ ಹೆತ್ತ ತಾಯಿಗೆ ಅವಮಾನ ಮಾಡಿದಂತೆ. ಅದ್ದರಿಂದ ಎಲ್ಲರೂ ಈ ಕುರಿತು ಗಮನ ಹರಿಸಿ ಎಂದರಲ್ಲದೆ, ಎಲ್ಲಾ ಇಲಾಖೆಗಳ ವೆಬ್‌ಸೈಟ್‌ಗಳು, ಟೆಂಡರ್ ಪ್ರಕ್ರಿಯೆಗಳು ಮತ್ತು ಅರ್ಜಿ ನಮೂನೆಗಳು ಕಡ್ಡಾಯವಾಗಿ ಕನ್ನಡದಲ್ಲಿರಬೇಕು ಎಂದರು.

ಸಭೆಯಲ್ಲಿ ಕನ್ನಡ ಅನುಷ್ಠಾನದ ಸಮಿತಿ ಸದಸ್ಯರಾದ ಉಪನ್ಯಾಸಕ ಜೆ.ಜಿ. ನಾಗರಾಜ ಅವರು ಕನ್ನಡ ಶಾಲಗಳು ಮುಚ್ಚುತ್ತಿರುವ ಬಗ್ಗೆ ಪ್ರಸ್ತಾಪಿಸಿದರು. ಅದಕ್ಕೆ ಉತ್ತರಿಸಿದ ಜಿಲ್ಲಾಧಿಕಾರಿಗಳು ಶಿಕ್ಷಣ, ಮುಂತಾದ ಪೂರಕ ಇಲಾಖೆಯೊಂದಿಗೆ ಸಭೆ ಕರೆದು ಈ ಕುರಿತು ವಿಸ್ತೃತವಾಗಿ ಚರ್ಚಿಸಲಾಗಿವುದೆಂದರು.

ಜಿಲ್ಲಾ ಕನ್ನಡ ಅನುಷ್ಠಾನ ಸಮಿತಿ ಸದಸ್ಯರು ಬೆಮೆಲ್ ಹಾಗೂ ಕೆಲವು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಕನ್ನಡ ವ್ಯವಹಾರದ ಭಾಷೆಯಾಗಿಲ್ಲ, ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು. ಜಿಲ್ಲಾಧಿಕಾರಿಗಳು ಕನ್ನಡ ಭಾಷೆಯನ್ನು ಇತರೆ ಭಾಷಿಗರೂ ಪ್ರೀತಿಯಿಂದ ಸ್ವೀಕರಿಸಿ ಕಲಿತದ್ದೇ ಆದರೆ ಸಮಸ್ಯೆ ಪರಿಹಾರಗೊಳ್ಳುವುದು ಎಂದರು.

ಸಭೆಯಲ್ಲಿ ಅಪರ ಪೋಲಿಸ್ ವರಿಷ್ಠಾಧಿಕಾರಿಗಳಾದ ಜಗದೀಶ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ವಿಜಯಲಕ್ಷ್ಮೀ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಿತಿ ಸದಸ್ಯರು ಉಪಸ್ಥಿತರಿದ್ದರು.



ಕನಕಪುರದ ಶ್ರೀ ವೀರಭದ್ರಸ್ವಾಮಿ ದೇವಾಲಯದ ಜೀರ್ಣೋದ್ಧಾರಕ್ಕಾಗಿ ಬೆಂಗಳೂರಿನ ಬಾಲಾಜಿ ಎಂಟರ್ ಪ್ರೈಸಸ್ ಮಾಲೀಕರಾದ ವಿವೇಕ್ ಎಂ ಹಾಗೂ ಕುಟುಂಬ ದವರಿಂದ ದೇಣಿಗೆ ಯಾಗಿ 100000.00 (ಒಂದು ಲಕ್ಷ ) ರೂಪಾಯಿ ಗಳನ್ನು ನೀಡಿದ್ದಾರೆ ದೇವರು ಅವರಿಗೆ ಆಯುರ್ ಅರೋಗ್ಯ ಐಶ್ವರ್ಯ ನೀಡಿ ಕೃಪಾ ಆಶೀರ್ವಾದ ನೀಡಲೆಂದು ಶ್ರೀ ವೀರಭದ್ರಸ್ವಾಮಿ ದೇವಸ್ಥಾನದ ಅಭಿವೃದ್ಧಿ ಮತ್ತು ನಿರ್ವಹಣಾ ಸಂಸ್ಥ ವತಿಯಿಂದ ಹಾರೈಸಿದರು.

## ಕೆಪಿಎಸ್ಸಿ ಕಲ್ಪವೃಕ್ಷವಲ್ಲ, ಪಾಪಸ್ ಕಳ್ಳಿ: ಬಿ.ವೈ.ವಿಜಯೇಂದ್ರ

ಬೆಂಗಳೂರು

ಇತ್ತೀಚಿನ ವರ್ಷಗಳಲ್ಲಿ ಕರ್ನಾಟಕ ಲೋಕ ಸೇವಾ ಆಯೋಗ (ಕೆಪಿಎಸ್‌ಸಿ) ಅರ್ಹ ಪ್ರತಿಭಾವಂತ ನಿರುದ್ಯೋಗಿಗಳ ಪಾಲಿಗೆ ಕಲ್ಪವೃಕ್ಷವಾಗುವ ಬದಲು ಪಾಪಾಸುಕಳ್ಳಿಯಾಗಿ ಲಕ್ಷಾಂತರ ನಿರುದ್ಯೋಗಿಗಳ ಭವ್ಯ ಭವಿಷ್ಯವನ್ನು ಅತಂತ್ರ ಸ್ಥಿತಿಗೆ ಸಿಲುಕಿಸಿದ ಕರಾಳ ಇತಿಹಾಸವನ್ನು ಅಂಟಿಸಿಕೊಂಡಿದೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಅಸಮಾಧಾನ ಹೊರಹಾಕಿದ್ದಾರೆ.



ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸರ್ಕಾರ ಈ ನಿಟ್ಟಿನಲ್ಲಿ ತನ್ನ ಬದ್ಧತೆಯನ್ನು ಪ್ರದರ್ಶಿಸಿ 56,432 ಹುದ್ದೆಗಳ ಭರ್ತಿಗೆ ಮೀನಾಮೇಷ ಎಣಿಸದೇ ಅಧಿಸೂಚನೆ ಹೊರಡಿಸಿ ಅತೀ ಶೀಘ್ರದಲ್ಲಿ ನ್ಯಾಯೋಚಿತವಾಗಿ ಅಭ್ಯರ್ಥಿಗಳ ಆಯ್ಕೆ ಆಗುವಂತೆ ಕಾಳಜಿ ಪ್ರದರ್ಶಿಸಲಿ. ಇಲ್ಲವಾದರೆ ಸದ್ಯ ಈಗಾಗಲೇ ಹತಾಶೆಯ ಅಂಚಿನಲ್ಲಿರುವ ಲಕ್ಷಾಂತರ ನಿರುದ್ಯೋಗಿಗಳ ಆಕ್ರೋಶ ಆಸ್ಫೋಟವಾಗಲಿದೆ ಎಂಬ ಎಚ್ಚರಿಕೆ ನೀಡಿದ್ದಾರೆ.

ನಿರುದ್ಯೋಗಿ ಯುವಜನರ ಬೃಹತ್ ಪ್ರತಿಭಟನೆಗೆ ಮಣಿದು 56,432 ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಆರಂಭಿಸುವುದಾಗಿ ಸರ್ಕಾರ ಪ್ರಕಟಿಸಿದೆ. ಆದರೆ ಈ ಸಂಬಂಧ ಇನ್ನೂ ಅಧಿಸೂಚನೆ ಹೊರಡಿಸಿಲ್ಲ. ಸರ್ಕಾರಿ ಯಂತ್ರವನ್ನು ಸಮರ್ಥವಾಗಿ ನಿಭಾಯಿಸಲು ಅರ್ಹ ಅಧಿಕಾರಿಗಳನ್ನು ನೇಮಿಸುವ ಸಾಂವಿಧಾನಿಕ ಹೊಣೆ ಹೊತ್ತಿರುವ ಲೋಕಸೇವಾ ಆಯೋಗ ಅಭ್ಯರ್ಥಿಗಳ ಆಯ್ಕೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವುದರಲ್ಲಿ ವಿಫಲವಾಗಿ ಬ್ರಹ್ಮಾಂಡ ಭ್ರಷ್ಟಾಚಾರ, ಅಕ್ರಮ ಹಾಗೂ ದೋಷಪೂರಿತ ಪ್ರಕ್ರಿಯೆಗಳಿಂದ ಕುಖ್ಯಾತಿ ಪಡೆದಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಆಯೋಗದ ಈ ದುರವಸ್ಥೆಗೆ ಅಂಕುಶ ಹಾಕಲು ಆಯೋಗದ ವಿರುದ್ಧದ ನ್ಯಾಯಾಲಯದ ಅನೇಕ ತೀರ್ಪುಗಳು ಭ್ರಷ್ಟ ವ್ಯವಸ್ಥೆಯನ್ನು ಬಯಲು ಮಾಡಿದೆ. ಕೆಲ ತಪ್ಪಿತಸ್ಥರ ಮುಖವಾಡಗಳು ಕೂಡ ಕಳಚಿ ಬಿದ್ದಿವೆ. ಇಷ್ಟಾಗಿಯೂ ಆಯೋಗದ ವ್ಯವಸ್ಥೆಗೆ ಕಾಯಕಲ್ಪ ನೀಡುವ ಪ್ರಯತ್ನ ಈವರೆವಿಗೂ ಸಾಧ್ಯವಾಗಿಲ್ಲ, ಸದ್ಯ ನೂತನ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಅಭ್ಯರ್ಥಿಗಳ ಆಯ್ಕೆಗೆ ಸುಧಾರಣೆಗಳನ್ನು ತರುವುದಾಗಿ ಆಯೋಗದ ಮೂಲಗಳು ತಿಳಿಸಿವೆ.

ಈ ನಿಟ್ಟಿನಲ್ಲಿ ಕರ್ನಾಟಕ ಲೋಕ ಸೇವಾ ಆಯೋಗ ಇನ್ನಾದರೂ ಪಾರದರ್ಶಕತೆ ಕಾಯ್ದುಕೊಂಡು ಕಟ್ಟುನಿಟ್ಟಿನ ನಿಯಮಗಳನ್ನು ಅಳವಡಿಸಿಕೊಂಡು ಅರ್ಹ ಅಭ್ಯರ್ಥಿಗಳ ಆಯ್ಕೆಗೆ ಸುಭದ್ರ ವ್ಯವಸ್ಥೆ ರೂಪಿಸಿಕೊಳ್ಳದೇ ಹೋದರೆ ಮುಂದಿನ ದಿನಗಳಲ್ಲಿ ಆಯೋಗದ ಅಸ್ತಿತ್ವವನ್ನು ಪ್ರಶ್ನಿಸುವ ಪರಿಸ್ಥಿತಿ ಉದ್ಭವವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

# ಭೂಸ್ವಾಧೀನ ಕೈಬಿಡುವಂತೆ ಪ್ರತಿಭಟನೆ

ರಾಮನಗರ

ಸಮಗ್ರ ಉಪನಗರ ಯೋಜನೆ ಅಂತಿಮ ಅಧಿಸೂಚನೆಗೆ ಸಚಿವ ಸಂಪುಟ ಅನುಮೋದನೆ ನೀಡಿರುವುದನ್ನು ಹಿಂಪಡೆಯುವಂತೆ ಹಾಗೂ ಭೂಸ್ವಾಧೀನ ಕೈಬಿಡುವಂತೆ ಒತ್ತಾಯಿಸಿ ರೈತರು ಜಾನುವಾರುಗಳೊಂದಿಗೆ ಭೈರಮಂಗಲ ಗ್ರಾಮದಲ್ಲಿ ಭಾನುವಾರ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದರು.



ಬಿಡದಿ ಹೋಬಳಿ ಭೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಪಂ ವ್ಯಾಪ್ತಿಯ ಹಲವು ಗ್ರಾಮಗಳಿಂದ ನೂರಾರು ಸಂಖ್ಯೆಯಲ್ಲಿ ರೈತರು ಜಾನುವಾರುಗಳು, ಎತ್ತಿನಗಾಡಿ ಹಾಗೂ ಟ್ರ್ಯಾಕ್ಟರ್‌ಗಳ ಸಮೇತ ಭೈರಮಂಗಲ ಗ್ರಾಮದ ವೃತ್ತದಲ್ಲಿ ಜಮಾಯಿಸಿ ಅನಿರ್ದಿಷ್ಟಾವಧಿ ಧರಣಿಯಲ್ಲಿ ಪಾಲ್ಗೊಂಡು ಬೆಂಬಲ ವ್ಯಕ್ತಪಡಿಸಿದರು.

ಭೈರಮಂಗಲ ಗ್ರಾಮದಲ್ಲಿ ಹಾದುಹೋಗುವ ಬಿಡದಿ–ಹಾರೋಹಳ್ಳಿ ಮುಖ್ಯರಸ್ತೆಯನ್ನು ಬಂದ್ ಮಾಡಿ ವೃತ್ತದ ಮಧ್ಯಭಾಗಲ್ಲಿಯೇ ಶಾಮಿಯಾನ ಅಳವಡಿಸಿ ರೈತರು ಅನಿರ್ದಿಷ್ಟಾವಧಿ ಧರಣಿ ಪ್ರಾರಂಭಿಸಿದರು. ಪ್ರತಿಭಟನೆಯಿಂದಾಗಿ ಬಿಡದಿ–ಹಾರೋಹಳ್ಳಿ ಮಾರ್ಗದ ವಾಹನ ಸಂಚಾರ ಅಸ್ತವ್ಯಸ್ಥವಾದ ಹಿನ್ನೆಲೆಯಲ್ಲಿ ಪೊಲೀಸರು ವಾಹನಗಳನ್ನು ಇಟ್ಟಮಡು, ಕೊಳ್ಳಗಾನಹಳ್ಳಿ ಮತ್ತು ಕನಕಪುರ ಮಾರ್ಗಗಳಲ್ಲಿ ಸಂಚರಿಸಲು ಅನುವು ಮಾಡಿಕೊಟ್ಟರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಜಯಕರ್ನಾಟಕ ಜನಪರ ವೇದಿಕೆ ರಾಜ್ಯ ಸಲಹೆಗಾರ ಕುಮಾರಸ್ವಾಮಿ ಮಾತನಾಡಿ, ಈಗಿರುವ ಜಿಲ್ಲಾಧಿಕಾರಿಗಳು ಉಪಮುಖ್ಯಮಂತ್ರಿಗಳಿಗೆ ರೈತರ ಭೂಮಿ ಕಸಿದುಕೊಂಡು ಟೌನ್‌ಶಿಪ್ ಯೋಜನೆ ಕಾರ್ಯಗತ ಮಾಡುವುದಾಗಿ ತೀರ್ಮಾನಿಸಿದ್ದಾರೆ. ಹಾಗಾಗಿಯೇ ಜಿಲ್ಲಾಧಿಕಾರಿಗಳು ಬಡ್ತಿ ಸಿಕ್ಕಿದರೂ ಇಲ್ಲಿಂದ ವರ್ಗಾವಣೆಯಾಗಿಲ್ಲ. ಅವರೆಲ್ಲರು ರೈತರ ಹೋರಾಟವನ್ನು ಹತ್ತಿಕ್ಕಲು ಹುನ್ನಾರ ನಡೆಸುತ್ತಿದ್ದಾರೆ ಎಂದು ದೂರಿದರು.

ರಾಜ್ಯ ಸರಕಾರ ತರಾತುರಿಯಲ್ಲಿ ಯೋಜನೆಗೆ ಅನುಮೋದನೆ ನೀಡಿದೆ. ಕೃಷಿ ಭೂಮಿಯನ್ನು ಅಡವಿಟ್ಟು ಹಣ ದೋಚುವುದು ಅವರ ಉದ್ದೇಶವಾಗಿದೆ. ರೈತರು ಆತ್ಮಸ್ಥೈರ್ಯ ಮತ್ತು ಒಗ್ಗಟ್ಟು ಕಾಪಾಡಿಕೊಂಡರೆ ಒಂದಿಂಚು ಭೂಮಿ ಕಸಿದುಕೊಳ್ಳಲು ಯಾರಿಂದಲೂ ಸಾಧ್ಯವಾಗುವುದಿಲ್ಲ ಎಂದು ಕುಮಾರಸ್ವಾಮಿ ರೈತರಲ್ಲಿ ಧೈರ್ಯ ತುಂಬಿದರು.

ರೈತಸಂಘದ ರಾಜ್ಯ ಸಂಚಾಲಕ ಚೀಲೂರು ಮುನಿರಾಜು ಮಾತನಾಡಿ, ಅನ್ನ ಕೊಡುವ ಭೂಮಿಯನ್ನು ಕಸಿದು ಅಲ್ಲಿ ಕಟ್ಟಡಗಳನ್ನು ಕಟ್ಟಿದರೆ ಏನು ಪ್ರಯೋಜನ? ಸರಕಾರ ನಡೆಸಲು ಹಣ ಬೇಕಿರುವ ಕಾರಣ ರೈತರನ್ನು ಬಲಿ ಕೊಡಲು ಮುಂದಾಗಿದ್ದಾರೆ. ರಾಜಕಾರಣಿಗಳು ಹಣದಾಸೆಗೆ ಬಿದ್ದು ರೈತರ ಹಿತಾಸಕ್ತಿ ಮರೆಯುತ್ತಿದ್ದಾರೆ. ಇನ್ನುಮುಂದೆ ರಾಜಕಾರಣಿಗಳು ಹಳ್ಳಿಗಳಿಗೆ ಬಂದರೆ ರೈತರು ಕಲ್ಲಿನಲ್ಲಿ ಹೊಡೆದು ಓಡಿಸಬೇಕು ಎಂದು ಕಿಡಿಕಾರಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸೇರಿದ 300 ಎಕರೆ ಜಮೀನು ಈ ಭಾಗದಲ್ಲಿದೆ. ಅದನ್ನು ಮಾರಾಟ ಮಾಡಿದರೆ ಕೋಟ್ಯಾಂತರ ರುಪಾಯಿ ಹಣ ಮಾಡಿಕೊಳ್ಳುವ ಕಾರಣಕ್ಕಾಗಿ ಅವರು ಟೌನ್‌ಶಿಪ್ ಯೋಜನೆ ಜಾರಿಗೊಳಿಸಲು ಹಠಕ್ಕೆ ಬಿದ್ದಿದ್ದಾರೆ. ಅನ್ನ ಕೊಡುವ ಭೂಮಿಯನ್ನು ನಾಶಪಡಿಸಿದರೆ ಅದನ್ನೆ ನಂಬಿರುವ ರೈತಕುಟುಂಬಗಳ ಶಾಪಕ್ಕೆ ರಾಜ್ಯ ಸರಕಾರ ಉಳಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಧಮ್ಮದೀವಿಗೆ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ್ ಮಾತನಾಡಿ, ಒಳ್ಳೆಯ ಆಡಳಿತ ನೀಡಲಿ ಎನ್ನುವ ಉದ್ದೇಶದಿಂದ ಜನರು ಸರಕಾರವನ್ನು ಆಯ್ಕೆ ಮಾಡುತ್ತಾರೆ. ಆ ಆಡಳಿತ ನಡೆಸುವವರು ರೈತರು, ಬಡವರು, ದೀನದಲಿತರು, ಶೋಷಿತರು ಸೇರಿದಂತೆ ಎಲ್ಲಾ ವರ್ಗಗಳ ಪರವಾಗಿ ಇರಬೇಕು. ಆದರೆ, ಈಗಿನ ಕಾಂಗ್ರೆಸ್ ಸರಕಾರ ದಲ್ಲಾಳಿಗಳು ಮತ್ತು ಬಂಡವಾಳ ಶಾಹಿಗಳ ಪರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಧರಣಿಯಲ್ಲಿ ಬೈರಮಂಗಲ–ಕಂಚುಗಾರನಹಳ್ಳಿ ಗ್ರಾಪಂಗಳ ರೈತರ ಭೂಹಿತರಕ್ಷಣಾ ಸಂಘದ ಅಧ್ಯಕ್ಷ ಕೆ.ರಾಮಯ್ಯ, ಕರ್ನಾಟಕ ಪ್ರಾಂತ ರೈತಸಂಘ ರಾಜ್ಯ ಸಮಿತಿ ಪ್ರಧಾನ ಕಾರ್ಯದರ್ಶಿ ಟಿ.ಯಶವಂತ್, ತಾಪಂ ಮಾಜಿ ಸದಸ್ಯ ಪ್ರಕಾಶ್, ರೈತಮುಖಂಡರಾದ ಮಂಡಲಹಳ್ಳಿ ನಾಗರಾಜು, ಅಶ್ವತ್ಥ್, ರಾಧಾಕೃಷ್ಣ, ಭೈರಪ್ಪ, ಹನುಮಂತು, ಶ್ರೀನಿವಾಸ್‌ರೆಡ್ಡಿ, ಮಂಜುನಾಥ್, ರೇವಣ್ಣ, ಭೈರೇಗೌಡ, ರಾಘವೇಂದ್ರ, ಸುಮಿತ್ರಮ್ಮ, ಶ್ವೇತಾ, ಸುಮಾ, ಜಯಮ್ಮ, ಭಾಗ್ಯ, ಚೈತ್ರಾ ಮತ್ತಿತರರು ಭಾಗವಹಿಸಿದ್ದರು.

# ತಾಯಿಯ ಪ್ರೀತಿ ಅಮೂಲ್ಯ: ರಾಜಯೋಗಿನಿ ಬಿಕೆ ಲಲಿತಾ

ಚಿಕ್ಕಬಳ್ಳಾಪುರ

ತಾಯಂದಿರು ಮಕ್ಕಳಿಗಾಗಿ ತೋರಿದ ಪ್ರೀತಿ, ಮಮತೆ ಮತ್ತು ವಾತ್ಸಲ್ಯಕ್ಕೆ ಎಂದಿಗೂ ಬೆಲೆ ಕಟ್ಟಲಾಗದು ಎಂದು ಪ್ರಜಾಪಿತಾ ಬ್ರಹ್ಮಾಕುಮಾರಿಸ್ ಈಶ್ವರಿಯ ವಿಶ್ವವಿದ್ಯಾಲಯದ ಚಿಕ್ಕಬಳ್ಳಾಪುರ ಸ್ಥಾನಿಕ ಸಂಚಾಲಕಿ ರಾಜಯೋಗಿನಿ ಬಿಕೆ ಲಲಿತಾ ಹೇಳಿದರು.

ತಾಲ್ಲೂಕಿನ ರಂಗಸ್ಥಳದಲ್ಲಿರುವ ಮಾನಸ ಆಶ್ರಯ ವೃದ್ಧಾಶ್ರಮದಲ್ಲಿ ಬ್ರಹ್ಮಾಕುಮಾರಿಸ್ ಸಂಸ್ಥೆ ವತಿಯಿಂದ ಆಯೋಜಿಸಿದ್ದ “ತಾಯಂದಿರ ದಿನಾಚರಣೆ” ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಾಯಿ ನಿಜವಾಗಿಯೂ ಬಯಸುವುದು ಮಕ್ಕಳ ಪ್ರೀತಿ, ಸಮಯ ಮತ್ತು ಕಾಳಜಿಯೇ ಹೊರತು ದುಬಾರಿ ಉಡುಗೊರೆಗಳಲ್ಲ ಎಂದರು.

ಮಕ್ಕಳು ತಮ್ಮ ಕಾರ್ಯನಿರತ ಜೀವನದಿಂದ ಸ್ವಲ್ಪ ಸಮಯ ಮೀಸಲಿಟ್ಟು ತಾಯಿಯೊಂದಿಗೆ ದಿನ ಕಳೆಯುವುದು ಯಾವುದೇ ಉಡುಗೊರೆಯಿಗಿಂತ ಮೌಲ್ಯವಾದದ್ದು. ತಾಯಂದಿರು ತಮ್ಮ ಮಕ್ಕಳು ಹತ್ತಿರದಲ್ಲೇ ಇರಬೇಕೆಂದು ಬಯಸುತ್ತಾರೆ. ಮಕ್ಕಳಾದವರು ತಾಯಿಯನ್ನು ಜಾಗೃತಿಯಿಂದ ನೋಡಿಕೊಳ್ಳುವುದು ತಮ್ಮ ಕರ್ತವ್ಯ ಎಂಬ ಅರಿವು ಪ್ರತಿಯೊಬ್ಬರಲ್ಲೂ ಇರಬೇಕು ಎಂದು ಹೇಳಿದರು.

ಯಾವುದೇ ಕಾರಣಕ್ಕೆ ವೃದ್ಧಾಶ್ರಮದಲ್ಲಿ ಇರುವ ತಾಯಂದಿರು ನಿರಾಶರಾಗಬಾರದು. ತಮ್ಮನ್ನು ಅಕ್ಕರೆಯಿಂದ ನೋಡಿಕೊಳ್ಳುವವರನ್ನೇ ಮಕ್ಕಳಂತೆ ಭಾವಿಸಿ ಸಂತೋಷದಿಂದ ಬದುಕಬೇಕು ಎಂದು ವೃದ್ಧಾಶ್ರಮದಲ್ಲಿದ್ದ ತಾಯಂದಿರಿಗೆ ಧೈರ್ಯ ತುಂಬಿದರು.



ಮುಪ್ಪು ಎಲ್ಲರಿಗೂ ಬರುತ್ತದೆ ಎಂಬ ಅರಿವು ಇದ್ದರೆ ಯಾರೂ ತಮ್ಮ ತಾಯಿಯನ್ನು ನಿರ್ಲಕ್ಷಿಸುವುದಿಲ್ಲ. ತಾಯಿಯ ಪ್ರೀತಿ ಮತ್ತು ವಾತ್ಸಲ್ಯದಲ್ಲಿ ಬೆಳೆದ ಮಕ್ಕಳು, ಜೀವನಪೂರ್ತಿ ತಾಯಿಯನ್ನು ಮಮತೆಯಿಂದ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಈ ವೇಳೆ ಬ್ರಹ್ಮಾಕುಮಾರಿಸ್ ಸಂಸ್ಥೆಯ ಸಹೋದರಿ ಬಿಕೆ ಸುಜಾತ ಅಕ್ಕ ಮಾತನಾಡಿ, ವಯಸ್ಸಾದವರು ತಮ್ಮ ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು. ದಿನನಿತ್ಯ ಧ್ಯಾನ ಮತ್ತು ಯೋಗಾಭ್ಯಾಸ ಮಾಡುವುದರಿಂದ ಮನಶಾಂತಿ ಹಾಗೂ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಸಲಹೆ ನೀಡಿದರು. ಜೊತೆಗೆ ಬ್ರಹ್ಮಾಕುಮಾರಿಸ್ ಸಂಸ್ಥೆಯಿಂದ ಉಚಿತ ಯೋಗ ಶಿಕ್ಷಣ ನೀಡಲಾಗುತ್ತಿದೆ ಎಂಬ ಮಾಹಿತಿಯನ್ನೂ ಹಂಚಿಕೊಂಡರು.

ಮತ್ತೊಬ್ಬ ಸಹೋದರಿ ಬಿ.ಕೆ. ಚಿನ್ನಮ್ಮ ಅಕ್ಕ ಮಾತನಾಡಿ, ತಾಯಿಗೆ ಮಕ್ಕಳು ಎಂದೆಂದಿಗೂ ಕೃತಜ್ಞರಾಗಿರಬೇಕು. ತಾಯಿಯ ಪ್ರೀತಿ, ಮಮತೆ ಮತ್ತು ಕಾಳಜಿಯೇ ಕುಟುಂಬದ ಆಧಾರ ಸ್ತಂಭವಾಗಿದೆ.

ತಾಯಿಯ ನಗು ಮತ್ತು ಸಂತೋಷವೇ ಮಕ್ಕಳ ಜೀವನದ ದೊಡ್ಡ ಯಶಸ್ಸು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾನಸ ಆಶ್ರಯ ವೃದ್ಧಾಶ್ರಮದ ವ್ಯವಸ್ಥಾಪಕ ಕ್ರಾಂತಿಕುಮಾರ್ ಉಪಸ್ಥಿತರಿದ್ದರು.

# ಅಂಬೇಡ್ಕರ್, ಜಗಜೀವನ್‌ರಾಮ್ ಜಯಂತಿ ಆಚರಣೆ

ಪಾವಗಡ

ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ದೇಶದ ಶೋಷಿತ ಮತ್ತು ದಲಿತ ವರ್ಗಗಳ ಪರಿವರ್ತನೆಯ ಎರಡು ಕಣ್ಣುಗಳಂತೆ ಇದ್ದು, ಅವರನ್ನು ಯಾವುದೇ ಪೀಳಿಗೆ ಮರೆಯಲು ಸಾಧ್ಯವಿಲ್ಲ ಎಂದು ಶಾಸಕ ಹಾಗೂ ತುಮುಲ್ ಅಧ್ಯಕ್ಷ ಹೆಚ್.ವಿ. ವೆಂಕಟೇಶ್ ಹೇಳಿದರು.

ನಿಡಗಲ್ಲು ಹೋಬಳಿಯ ಮಂಗಳವಾಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರೆಕ್ಯಾತನಹಳ್ಳಿ ಗ್ರಾಮದಲ್ಲಿ ಜೈ ಭೀಮ್ ಬಳಗ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಬಾಬು ಜಗಜೀವನ್ ರಾಮ್ ಅವರ 119ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಭಾರತೀಯ ಸಂವಿಧಾನ ಶಿಲ್ಪಿ, ದೇಶದ ಮೊದಲ ಕಾನೂನು ಸಚಿವ, ಅರ್ಥಶಾಸ್ತ್ರಜ್ಞ ಹಾಗೂ ಶೋಷಿತ ವರ್ಗಗಳ ಸಮಾಜ ಸುಧಾರಕರಾದ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಮಾನವಕುಲ ಎಂದಿಗೂ ಮರೆಯಬಾರದು. ದೇಶದ ಪ್ರತಿಯೊಬ್ಬ ನಾಗರಿಕರಿಗೂ ಸಂವಿಧಾನ ಪವಿತ್ರ ಗ್ರಂಥವಾಗಿದೆ. ಶ್ರೀಮಂತರಿಂದ ಹಿಡಿದು ಬಡವರವರೆಗೂ ಸಮಾನತೆ, ಸ್ವಾತಂತ್ರ್ಯ ಮತ್ತು ಶಿಕ್ಷಣದ ಹಕ್ಕು ದೊರಕುವಂತೆ ಅಂಬೇಡ್ಕರ್ ಸಂವಿಧಾನದಲ್ಲಿ ಅಚ್ಚಳಿಯದ ಕಾನೂನುಗಳನ್ನು ರೂಪಿಸಿದ್ದಾರೆ ಎಂದು ಹೇಳಿದರು.

ತಾಲೂಕಿನ ಪ್ರತಿಯೊಂದು ಕುಟುಂಬವೂ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಗ್ರಾಮೀಣ ಭಾಗಗಳಲ್ಲಿ ಕೆಲವು ಆಚಾರ–ವಿಚಾರಗಳಿಂದ ಗೊಂದಲಕ್ಕೆ ಒಳಗಾಗದೆ ಉತ್ತಮ ನಡವಳಿಕೆ ರೂಪಿಸಿಕೊಳ್ಳಬೇಕು. ಎಲ್ಲರೂ ಮಾನವ ಜಾತಿಯಲ್ಲಿ ಹುಟ್ಟಿದವರು ಎಂಬ ಮನೋಭಾವದಿಂದ ಬದುಕಬೇಕು. ದಲಿತರು ಎಂಬ ಕಾರಣಕ್ಕೆ ಯಾರೂ ಭೇದಭಾವ ತೋರಬಾರದು ಎಂದು ಅಭಿಪ್ರಾಯಪಟ್ಟರು.

ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ತಿಮ್ಮರಾಯಪ್ಪ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಇಬ್ಬರೂ ಸಾಮಾಜಿಕ ನ್ಯಾಯ ಮತ್ತು ಅಸ್ಪೃಶ್ಯತೆ ನಿರ್ಮೂಲನೆಗಾಗಿ ಹೋರಾಡಿದ ಮಹಾನ್ ನಾಯಕರು ಎಂದರು. ಅಂಬೇಡ್ಕರ್ ರಚಿಸಿದ ಸಂವಿಧಾನವು ದೇಶದ ಜನರ ಬದುಕಿನ ಕನ್ನಡಿಯಾಗಿದೆ. ದಲಿತರು ಸಂವಿಧಾನದಲ್ಲಿರುವ ಕಾನೂನುಗಳ ಅರಿವು ಪಡೆದು ಕುಟುಂಬದ ಅಭಿವೃದ್ಧಿ ಹಾಗೂ ಮಕ್ಕಳ ಶಿಕ್ಷಣದತ್ತ ಗಮನಹರಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ 2025–26ನೇ ಸಾಲಿನ ಹತ್ತನೇ ತರಗತಿಯಲ್ಲಿ ಅತ್ಯಧಿಕ ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಕೆಲ ವಿದ್ಯಾರ್ಥಿಗಳಿಗೆ ವೈಯಕ್ತಿಕವಾಗಿ ರೂ.15 ಸಾವಿರ ಗೌರವಧನ ನೀಡಿ ಮುಂದಿನ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಪ್ರಧಾನ ಭಾಷಣಕಾರ ಕೊಟ್ಟಾ ಶಂಕರ್, ಮಾಜಿ ಎಪಿಎಂಸಿ ನಿರ್ದೇಶಕ ಮಂಜುನಾಥ್, ಮಾಜಿ ಗ್ರಾಪಂ ಸದಸ್ಯ ಸ್ವಾರಣ್ಣ, ಸಿ. ಶಿವಣ್ಣ, ಶಿವಕುಮಾರ್, ಶಿವಣ್ಣ ಎಸ್‌ಎಫ್‌ಐ, ಮುರಳಿಧರ, ಪ್ರಕಾಶ್, ಸಿ.ಕೆ. ತಿಪ್ಪೇಸ್ವಾಮಿ, ಹನುಮಂತರಾಯ್ ಬಿಎಸ್‌ಪಿ, ವೆಂಕಟರಮಣ, ಮೂರ್ತಿ ಸೇರಿದಂತೆ ಗ್ರಾಮದ ಅನೇಕ ಮುಖಂಡರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಭಾರತ ಸಾರಥಿ
13/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 12ರಂದು ವಿದ್ಯುತ್ ವ್ಯತ್ಯಯ

ರಾಮನಗರ

66 ಕೆವಿ ಚನ್ನಪಟ್ಟಣ–ಬೇವೂರು ಮಾರ್ಗದಲ್ಲಿ ವಿದ್ಯುತ್ ತಂತಿ ಎಳೆಯುವ ಕಾಮಗಾರಿಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಹಮ್ಮಿಕೊಳ್ಳಲಾಗಿದೆ. ಸಂಕಲಗೆರೆ, ಕೂರಣಗೆರೆ, ಗೋವಿಂದಹಳ್ಳಿ, ದೊಡ್ಡಮಳ್ಳೂರು, ಬೈರಾಪಟ್ಟಣ, ದಶವಾರ, ಮಾಕಳಿ, ನಾಯಿದೊಳ್ಳೆ ಗ್ರಾಮ, ಕೃಷ್ಣಪುರದೊಡ್ಡಿ, ಬೇವೂರು, ಸಂಕಲಗೆರೆ ಸೋಲಾರ್ ಪವರ್ ಪ್ಲಾಂಟ್, ಜಾನಪದಲೋಕ, ಚನ್ನಮಾನಹಳ್ಳಿ, ಚಿಕ್ಕೇನಹಳ್ಳಿ, ಕುಂಬಾಪುರ, ಬಿ.ಜಿ.ಎಸ್ ಶಾಲೆ, ರಾಜೀವ್‌ಗಾಂಧಿಪುರ, ಚೌಡೇಶ್ವರಿಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಮೇ 12 ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ವಿ, ಯಲ್ಲಪ್ಪ, ಸಿದ್ದು, ಅಭಿ, ಮನೋಜ್ ಮುಂತಾದವರು ಇದ್ದರು.

## 60ನೇ ಘಟಿಕೋತ್ಸವ ಮುಂದೂಡಿಕೆ

ಬೆಂಗಳೂರು

ಕೃಷಿ ವಿಶ್ವವಿದ್ಯಾನಿಲಯ ಬೆಂಗಳೂರಿನ 60ನೇ ಘಟಿಕೋತ್ಸವ ಸಮಾರಂಭವನ್ನು ಮೇ 12 ರಂದು ಆಯೋಜಿಸಲಾಗಿದ್ದು. ಯೋಜನೆ ಮತ್ತು ಸಾಂಖ್ಯಿಕ ಸಚಿವರಾದ ಡಿ.ಸುಧಾಕರ್ ಅವರ ನಿಧನದ ಪ್ರಯುಕ್ತ ರಾಜ್ಯಾದ್ಯಂತ ಮೂರು ದಿನಗಳ ಶೋಕಾಚರಣೆ ಘೋಷಿರುವ ಹಿನ್ನೆಲೆಯಲ್ಲಿ ಸಮಾರಂಭವನ್ನು ಮೇ 14 ರಂದು ಆಯೋಜಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ರಾಜಸ್ಥಾನದ ವಿದ್ಯಾರ್ಥಿಗಳೊಂದಿಗೆ ರಾಜ್ಯಪಾಲರ ಸಂವಾದ



ಬೆಂಗಳೂರು

ಯುವ ಸಂಗಮ ಕಾರ್ಯಕ್ರಮದ ಅಂಗವಾಗಿ ಕರ್ನಾಟಕಕ್ಕೆ ಭೇಟಿ ನೀಡಿದ ರಾಜಸ್ಥಾನದ ವಿದ್ಯಾರ್ಥಿಗಳೊಂದಿಗೆ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಲೋಕಭವನದಲ್ಲಿ ಸಂವಾದ ನಡೆಸಿದರು. ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಿದ ರಾಜ್ಯಪಾಲರು, ಇಂತಹ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮಗಳು ದೇಶದ ವಿವಿಧ ರಾಜ್ಯಗಳ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಅಭಿವೃದ್ಧಿಯ ವೈಶಿಷ್ಟ್ಯಗಳ ಬಗ್ಗೆ ಅರಿವು ಮೂಡಿಸುವ ಮೂಲಕ ರಾಷ್ಟ್ರೀಯ ಏಕತೆಯನ್ನು ಬಲಪಡಿಸುತ್ತವೆ ಎಂದು ಹೇಳಿದರು.

ಯುವ ಸಂಗಮ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಭಾರತದ ವೈವಿಧ್ಯತೆಯನ್ನು ಅರ್ಥಮಾಡಿಕೊಳ್ಳಲು ಮತ್ತು ವಿವಿಧ ರಾಜ್ಯಗಳ ಅಭಿವೃದ್ಧಿ ಹಾಗೂ ಅನುಭವಗಳಿಂದ ಕಲಿಯಲು ಉತ್ತಮ ವೇದಿಕೆಯಾಗಿದ್ದು, ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವಂತೆ ಕರೆ ನೀಡಿದರು.

ಭಾರತವು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದ್ದು, ದೇಶವನ್ನು ಇನ್ನಷ್ಟು ಉನ್ನತ ಮಟ್ಟಕ್ಕೆ ಕೊಂಡೊಯ್ಯಲು ಯುವಕರು ಶ್ರಮ ಮತ್ತು ಸಮರ್ಪಣೆಯಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನ ಪಡೆದು ರಾಷ್ಟ್ರ ನಿರ್ಮಾಣದಲ್ಲಿ ಪಾಲುದಾರರಾಗುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಐಐಐಟಿ ಧಾರವಾಡದ ಡಾ.ಎಸ್.ಆರ್.ಮಹದೇವ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

## ಬಯೋಮೆಟ್ರಿಕ್ ಅಪ್‌ಡೇಟ್ ಕಡ್ಡಾಯ

ಕೋಲಾರ

ಜಿಲ್ಲೆಯಲ್ಲಿ 5 ರಿಂದ 17 ವರ್ಷದ ಒಟ್ಟು 62246 ಮಕ್ಕಳ ಕಡ್ಡಾಯ ಬಯೋಮೆಟ್ರಿಕ್ ಅಪಡೇಟ್‌ಗೆ ಬಾಕಿಯಿದ್ದು, ಜಿಲ್ಲೆಯ ಎಲ್ಲಾ ಆಧಾರ್ ಕೇಂದ್ರಗಳಲ್ಲಿ ಸೆಪ್ಟೆಂಬರ್ 30, 2026ರ ವರೆಗೆ ಉಚಿತವಾಗಿ ಅವಕಾಶ ಕಲ್ಪಿಸಲಾಗಿರುತ್ತದೆ.

ಪೋಷಕರು ತಮ್ಮ ಮಕ್ಕಳ ಆಧಾರ್ ಕಾರ್ಡ್ ಹಾಗೂ ಸಂಬಂಧಿಸಿದ ದಾಖಲೆಗಳೊಂದಿಗೆ ತಮ್ಮ ಹತ್ತಿರದ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ ನವೀಕರಿಸಿಕೊಳ್ಳಬಹುದು. ಮಕ್ಕಳ ಶಾಲೆಯ ದಾಖಲಾತಿ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳು, ಸರ್ಕಾರದ ವಿವಿಧ ಯೋಜನೆಗಳು, ವಿದ್ಯಾರ್ಥಿವೇತನ, ತರಬೇತಿಗಳು ಸೇರಿದಂತೆ ಇತ್ಯಾದಿ ಯೋಜನೆಗಳ ಲಾಭ ಪಡೆಯಲು ಅನುಕೂಲವಾಗಲಿದೆ.

ಜಿಲ್ಲೆಯ ಎಲ್ಲಾ ಪೋಷಕರು 5 ರಿಂದ 17 ವಯೋಮಿತಿಯ ಮಕ್ಕಳ ಆಧಾರ್ ಸಂಖ್ಯೆಗೆ ಕಡ್ಡಾಯ ಬಯೋಮೆಟ್ರಿಕ್ ಅಪ್‌ಡೇಟ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಿಟ್ನಹಳ್ಳಿಯಲ್ಲಿ ಜನಮನ ಸೆಳೆದ ಒನಕೆ ಕರಗ ನೃತ್ಯ



ಕೋಲಾರ

ತಾಲ್ಲೂಕಿನ ಚಿಟ್ನಹಳ್ಳಿಯ ಶ್ರೀ ಧರ್ಮರಾಯಸ್ವಾಮಿ ಹೂವಿನ ಕರಗಮಹೋತ್ಸವದ ಅಂಗವಾಗಿ ಕಳೆದ ರಾತ್ರಿ ನಡೆದ ವಸಂತೋತ್ಸವ ಹಾಗೂ ಒನಕೆ ಕರಗ ನೃತ್ಯವನ್ನು ಸಹಸ್ರಾರು ಮಂದಿ ವೀಕ್ಷಿಸಿದರು.

ಕಳೆದ ಐದು ವರ್ಷಗಳಿಂದ ಆರಂಭಿಸಿರುವ ಕರಗಮಹೋತ್ಸವದಲ್ಲಿ ಕರಗದ ಪೂಜಾರಿ ಕಾಕಿನತ್ತ ಬಾಲರಾಜ್ ಐದನೇ ಬಾರಿ ಒನಕೆ ಕರಗ ನೃತ್ಯದ ಮೂಲಕ ದೇವಾಲಯದ ಮುಂಭಾಗದ ಆವರಣದಲ್ಲಿ ಮಂಗಳ ವಾದ್ಯ, ಹಲಗೆಗಳ ಲಯಬದ್ದ ತಾಳಕ್ಕೆ ತಕ್ಕಂತೆ ನರ್ತಿಸುವ ಮೂಲಕ ಸೇರಿದ್ದ ಬೃಹತ್ ಜನಸ್ತೋಮ ಹರ್ಷದಲ್ಲಿ ತಲ್ಲೀನರಾಗುವಂತೆ ಮಾಡಿದರು.

ಸುಮಾರು 5 ಅಡಿ ಉದ್ದದ ಒನಕೆ ಮೇಲೆ ನೀರು ತುಂಬಿದ ತಾಮ್ರದ ಪಾತ್ರೆಯನ್ನಿಟ್ಟು ಒನಕೆಯನ್ನು ತಲೆಯ ಮೇಲಿಟ್ಟುಕೊಂಡು ಅದರಲ್ಲಿನ ವಸಂತದ ನೀರನ್ನು ನೃತ್ಯ ಪ್ರದರ್ಶನದ ಮೂಲಕ ಹೊರಚೆಲ್ಲುವ ಕರಗದ ಪೂಜಾರಿ ಬಾಲರಾಜ್ ಕಲಾ ಪ್ರೌಢಿಮೆಯ ಸಾಹಸಕ್ಕೆ ಜನ ತಲೆದೂಗಿದರು.

ಒನಕೆಯನ್ನು ಕೈಯಿಂದ ಹಿಡಿಯದೇ ಒಂದು ತುದಿಯ ಮೇಲೆ ನೀರು ತುಂಬಿದ ಪಾತ್ರೆಯಿಟ್ಟು, ಮತ್ತೊಂದು ತುದಿಯನ್ನು ತಲೆ ಮೇಲಿಟ್ಟುಕೊಂಡು ನರ್ತಿಸುವ ಮೂಲಕ ಜನತೆ ನಿಬ್ಬೆರಗಾಗುವಂತೆ ಮಾಡಿದರು.

ಒನಕೆಯ ಮೇಲಿನ ತಾಮ್ರದ ಪಾತ್ರೆಯಲ್ಲಿರುವ ವಸಂತದ ನೀರು ನಮ್ಮ ಮೇಲೆ ಬಿದ್ದರೆ ಒಳಿತಾಗುತ್ತದೆ ಎಂಬ ನಂಬಿಕೆಯಿಂದ ನಾಗರೀಕರು ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದು, ಸುಮಾರು 1 ಗಂಟೆಗೂ ಹೆಚ್ಚು ಕಾಲ ಸಾವಿರಾರು ಜನ ಒನಕೆ ಕರಗ ವೀಕ್ಷಿಸಿದರು.

ಗ್ರಾಮದ ಕಗರದ ಗೌಡ ಸಿ.ಎಂ.ನಾಗರಾಜ್,ಸಿ. ಎಲ್. ಪುರುಷೋತ್ತಮ್, ಸಿ.ಚಂದ್ರು, ಸಿ.ಎನ್.ಮುನಿಯಪ್ಪ, ಸಿ.ಎನ್.ಸುಬ್ರಮಣಿ, ಚೌಡರೆಡ್ಡಿ, ಸಿ.ಎನ್. ಮುನಿವೆಂಕಟರೆಡ್ಡಿ, ಆಂಜಿನಪ್ಪ, ಸಿ.ಇ.ನಾರಾಯಣಸ್ವಾಮಿ, ಯಜಮಾನ್ ಮುರುಗೇಶ್, ಸಿಎಲ್.ನರೇಂದ್ರ ಕುಮಾರ್, ಆನಂದ್ ಕೃಷ್ಣಪ್ಪ, ಚಂದ್ರು, ಮಂಜುನಾಥ್, ನಾರಾಯಣ ಸ್ವಾಮಿ, ಕೋಲ್ಕಾರ್ ಬಾಬು, ಸಿ.ವಿ.ಸೋಮೇಶ್, ಸುರೇಶ್, ರಾಮಚಂದ್ರ, ರಾಧಾಕೃಷ್ಣ, ಸಿ.ವಿ.ಸೋಮೇಶ್, ಪುರುಷೋತ್ತಮ್ ಮತ್ತಿತರರಿದ್ದರು.

# ಗುಣಮಟ್ಟದ ಹಣ್ಣು ಮಾರಾಟ ಅಂಗಡಿಗೆ ಚಾಲನೆ



ಮುಳಬಾಗಿಲು

ನಂಗಲಿ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರ ಅನುಕೂಲಕ್ಕಾಗಿ ಗುಣಮಟ್ಟದ ಮತ್ತು ರಿಯಾಯಿತಿ ದರದಲ್ಲಿ ಎಲ್ಲಾ ವಿಧದ ಹಣ್ಣುಗಳನ್ನು ಮಾರಾಟ ಮಾಡುವ "ಎನ್.ಆರ್.ಎಸ್. ಫ್ರೂಟ್ಸ್ ಮಾರ್ಟ್" ಅಂಗಡಿಯನ್ನು ಆರಂಭಿಸಲಾಗಿದೆ ಎಂದು ವಡ್ಡಹಳ್ಳಿ ಟಮೋಟ ಮಂಡಿ ಮಾಲೀಕರ ಸಂಘದ ಅಧ್ಯಕ್ಷ ಎನ್.ಆರ್ ಸತ್ಯಣ್ಣ ತಿಳಿಸಿದರು.

ತಾಲೂಕಿನ ನಂಗಲಿ ಗ್ರಾಮದಲ್ಲಿ ನಗವಾರ ಸತ್ಯಣ್ಣ ಅವರ ಸಹೋದರರ ಮಾಲೀಕತ್ವದ ಎನ್.ಆರ್.ಎಸ್. ಫ್ರೂಟ್ಸ್ ಮಾರ್ಟ್ ಅಂಗಡಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಂಗಲಿ ಮತ್ತು ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರ ಬೇಡಿಕೆಯಂತೆ ದೊಡ್ಡ ಪ್ರಮಾಣದ ಹಣ್ಣುಗಳ ಮಾರಾಟ ಮಳಿಗೆಯನ್ನು ಆರಂಭಿಸಲಾಗಿದೆ ಎಂದರು.

ಈ ಅಂಗಡಿಯ ಮೂಲಕ ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರೈತರು ಬೆಳೆದ ಬಾಳೆಹಣ್ಣು ಸೇರಿದಂತೆ ವಿವಿಧ ಹಣ್ಣುಗಳನ್ನು ನೇರವಾಗಿ ಖರೀದಿ ಮಾಡಲಾಗುತ್ತದೆ. ಬೆಂಗಳೂರು ಹಾಗೂ ಚೆನ್ನೈ ಮಾರುಕಟ್ಟೆಗಳಲ್ಲಿ ದೊರೆಯುವ ದರಕ್ಕೇ ರೈತರಿಂದ ಹಣ್ಣುಗಳನ್ನು ಖರೀದಿ ಮಾಡಿ, ಸಾರ್ವಜನಿಕರಿಗೆ ಗುಣಮಟ್ಟದ ಹಣ್ಣುಗಳನ್ನು ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ರೈತರು ಬೆಳೆದ ಬಾಳೆಹಣ್ಣು ಹಾಗೂ ಇತರ ಹಣ್ಣುಗಳಿಗೆ ಸರಿಯಾದ ಬೆಲೆ ಸಿಗದೆ ಸಂಕಷ್ಟ ಅನುಭವಿಸುತ್ತಿರುವ ಪರಿಸ್ಥಿತಿಯನ್ನು ಕಣ್ಣಾರೆ ಕಂಡಿದ್ದೇವೆ. ಆದ್ದರಿಂದ ರೈತರಿಗೆ ಸೂಕ್ತ ಬೆಲೆ ನೀಡುವ ಜೊತೆಗೆ ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಉತ್ತಮ ಹಣ್ಣುಗಳನ್ನು ಒದಗಿಸುವ ಉದ್ದೇಶದಿಂದ ಈ ಅಂಗಡಿಯನ್ನು ಆರಂಭಿಸಲಾಗಿದೆ. ರೈತರು ಹಾಗೂ ಸಾರ್ವಜನಿಕರು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಎನ್.ಆರ್.ಎಸ್. ಫ್ರೂಟ್ಸ್ ಮಾರ್ಟ್ ಉದ್ಘಾಟನಾ ಕಾರ್ಯಕ್ರಮಕ್ಕೆ ಮುಳಬಾಗಿಲು ಶಾಸಕರಾದ ಸಮೃದ್ಧಿ ವಿ. ಮಂಜುನಾಥ್, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಜಿ. ಆನಂದ್ ರೆಡ್ಡಿ ಸೇರಿದಂತೆ ಹಲವು ಗಣ್ಯರು, ರೈತರು ಹಾಗೂ ಸಾರ್ವಜನಿಕರು ಭಾಗವಹಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ನಲ್ಲೂರು ರಘುಪತಿ ರೆಡ್ಡಿ, ಮಾಜಿ ನಗರಸಭೆ ಅಧ್ಯಕ್ಷ ಎಂ.ಆರ್. ಮುರಳಿ, ಯುವ ಮುಖಂಡ ಹೆಚ್. ಗೊಲ್ಲಹಳ್ಳಿ ಜಗದೀಶ್, ಬಂಡಹಳ್ಳಿ ಲಕ್ಷ್ಮೀನಾರಾಯಣ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಂಗಲಿಯ ಶ್ರೀಧರ್, ಲಕ್ಷ್ಮಿಪತಿ, ಗ್ರಾಮ ಪಂಚಾಯಿತಿ ಸದಸ್ಯರಾದ ಮೋಹನ್, ಬೂಡಿದೇರು ವಿನಯ್ ಕುಮಾರ್, ಕೇಶವ ರೆಡ್ಡಿ, ಮುಖಂಡರಾದ ರೆಡ್ಡಪ್ಪ, ಸುಬ್ಬಣ್ಣ, ಮುನಿರೆಡ್ಡಿ, ಸೋಮಣ್ಣ, ಎನ್.ಆರ್. ಎಸ್. ಫ್ರೂಟ್ಸ್ ಮಾರ್ಟ್ ಮಾಲೀಕರಾದ ಎನ್.ಆರ್. ಶ್ರೀನಿವಾಸ್, ಎನ್.ಆರ್. ಚಲಪತಿ, ಎನ್.ಆರ್. ಮಂಜುನಾಥ್, ಟೊಮೋಟೊ ಮಂಡಿ ಮಾಲೀಕರಾದ ಎಂ.ಜಿ. ರಾಮಚಂದ್ರಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಪಾಠಶಾಲೆ: ಜೂ.1ರಿಂದ ಪ್ರವೇಶಾತಿ ಪ್ರಾರಂಭ

ತುಮಕೂರು

ಜಿಲ್ಲೆಯ ಕುಣಿಗಲ್ ತಾಲ್ಲೂಕು ಎಡೆಯೂರು ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಕ್ಷೇತ್ರದ ವತಿಯಿಂದ ನಡೆಯುತ್ತಿರುವ ಶ್ರೀ ಸಿದ್ಧಲಿಂಗೇಶ್ವರಸ್ವಾಮಿ ಸಂಸ್ಕೃತ, ವೇದ, ಜ್ಯೋತಿಷ್ಯ ಮತ್ತು ವೀರಶೈವಾಗಮ ಪಾಠಶಾಲೆಗೆ 2026–27ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರವೇಶಾತಿಯು ಜೂನ್ 1 ರಿಂದ ಪ್ರಾರಂಭವಾಗಲಿದೆ ಎಂದು ಕಾರ್ಯನಿರ್ವಾಹಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಾಠಶಾಲೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಉಚಿತ ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ಪಾಠಶಾಲೆಯಲ್ಲಿ ಸಂಸ್ಕೃತ ಪ್ರಥಮ 1, 2, 3ನೇ ತರಗತಿ; ಸಂಸ್ಕೃತ ಕಾವ್ಯ 1, 2ನೇ ತರಗತಿ; ವೀರಶೈವ ವೇದ ಪ್ರಥಮ, ಪ್ರವೇಶ ಮೂಲ ತರಗತಿ; ವೀರಶೈವಾಗಮ ಪ್ರವರ, ಪ್ರವೀಣ ತರಗತಿ ಹಾಗೂ ಜ್ಯೋತಿಷ್ಯ ತರಗತಿಯನ್ನು ನಡೆಸಲಾಗುವುದು. ತರಗತಿಯಲ್ಲಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಬೋಧಿಸಲಾಗುವುದು. ಆಸಕ್ತರು ಪಾಠಶಾಲೆಯ ಮುಖ್ಯೋಪಾಧ್ಯಾಯ(ಮೊ.ಸಂ.9731110045) ರನ್ನು ಸಂಪರ್ಕಿಸಬಹುದಾಗಿದೆ.

## ಮರಗಳ ಕೊಂಬೆ ತೆರವುಗೊಳಿಸಲು ಒತ್ತಾಯ



ವಿಜಯಪುರ

ಪಟ್ಟಣದ ಚಿಕ್ಕಬಳ್ಳಾಪುರ ಮುಖ್ಯರಸ್ತೆಯಲ್ಲಿ, ರಸ್ತೆ ಅಗಲೀಕರಣ ಕಾಮಗಾರಿ ನಡೆಸುವುದಕ್ಕಾಗಿ ಮರಗಳು ಕಟಾವು ಮಾಡಿದ್ದಾರೆ. ಆದರೆ, ಕಟಾವು ಮಾಡಿರುವ ಮರಗಳ ಕೊಂಬೆಗಳನ್ನು ತೆರವುಗೊಳಿಸದೇ ರಸ್ತೆಯಲ್ಲೆ ಬಿಟ್ಟಿದ್ದಾರೆ. ಇದರಿಂದ ಸಾರ್ವಜನಿಕರ ಓಡಾಟಕ್ಕೆ ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ.

ಕೋಲಾರ–ಚಿಕ್ಕಬಳ್ಳಾಪುರ ಮುಖ್ಯರಸ್ತೆಯಲ್ಲಿ, ರಸ್ತೆ ಅಗಲೀಕರಣ ಕಾಮಗಾರಿ ಮಾಡಲು, ರಸ್ತೆ ಅಳತೆ ಮಾಡಿ, ಗುರುತು ಮಾಡಿದ್ದಾರೆ. ರಸ್ತೆಯ ಪರಿಮಿತಿಯಲ್ಲಿರುವ ವಿವಿಧ ಜಾತಿಯ ಬೃಹತ್ ಮರಗಳನ್ನು ಹರಾಜು ಮಾಡಿದ್ದು, ಹರಾಜಿನಲ್ಲಿ ಮರಗಳನ್ನು ತೆಗೆದುಕೊಂಡಿರುವವರು, ಮರಗಳ ಕೊಂಬೆಗಳು ಹಾಗೂ ಮರಗಳನ್ನು ಕಟಾವು ಮಾಡಿ, ನಾಲ್ಕೈದು ದಿನಗಳು ಕಳೆದರೂ ರಸ್ತೆಗೆ ಅಡ್ಡಲಾಗಿ ಬಿದ್ದಿರುವ ಕೊಂಬೆಗಳು ಮತ್ತು ರೆಂಬೆಗಳನ್ನು ತೆರವುಗೊಳಿಸಿಲ್ಲ.

ಶಾಲಾ ಕಾಲೇಜುಗಳಿಗೆ ಹೋಗುವ ವಿದ್ಯಾರ್ಥಿಗಳು, ಈ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಾರೆ. ದ್ವಿಚಕ್ರ ವಾಹನ ಸವಾರರೂ ಸೇರಿದಂತೆ ಸಾವಿರಾರು ವಾಹನಗಳು ಸಂಚರಿಸುವ ರಸ್ತೆಯಾಗಿದ್ದು, ಕಿರಿದಾದ ರಸ್ತೆಯಲ್ಲೆ ಸಂಚರಿಸಬೇಕಾಗಿದೆ. ಆದ್ದರಿಂದ ತ್ವರಿತವಾಗಿ ಕೊಂಬೆಗಳನ್ನು ತೆರವುಗೊಳಿಸಿ, ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕಿದೆ.

ಮರಗಳು ಕಟಾವು ಮಾಡುವಾಗ ಮುಂಜಾಗ್ರತೆ ವಹಿಸಲು ಆಗ್ರಹ: ರಸ್ತೆಯುದ್ಧಕ್ಕೂ, ಬೆಸ್ಕಾಂ ಕಚೇರಿಯ ಮುಂಭಾಗದ ರಸ್ತೆಯ ಇಕ್ಕೆಲುಗಳಲ್ಲಿ ಮರಗಳ ಕೊಂಬೆಗಳನ್ನು ತೆರವುಗೊಳಿಸುವಾಗ ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು.ಕೊಂಬೆಗಳು ಕಟಾವು ಮಾಡುವಾಗ, ವಾಹನಗಳ ಸಂಚಾರವನ್ನು ಸಂಪೂರ್ಣವಾಗಿ ನಿರ್ಬಂಧಿಸಬೇಕು, ಪರ್ಯಾಯ ರಸ್ತೆಯ ಮೂಲಕ ಸಂಚರಿಸಲು ಅವಕಾಶ ಮಾಡಿಕೊಡುವಂತೆ ಸ್ಥಳೀಯರು ಒತ್ತಾಯಿಸಿದ್ದಾರೆ.

# ಅದ್ದೂರಿಯಾಗಿ ನಡೆದ ಜಲಗಂಗೆ ಮೆರವಣಿಗೆ



ವಿಜಯಪುರ

ಪಟ್ಟಣದ ಗ್ರಾಮದೇವತೆ ಗಂಗಾತಾಯಿ ಜಾತ್ರಾ ಮಹೋತ್ಸವದ ಅಂಗವಾಗಿ, ಸೋಮವಾರ, ಸಂಪ್ರದಾಯದಂತೆ ಜಲಗಂಗೆಯನ್ನು ತರುವಂತಹ ಪೂಜಾ ಮೆರವಣಿಗೆ ನೆರವೇರಿತು.

ಚಂದೇನಹಳ್ಳಿ ಗೇಟ್ ನಲ್ಲಿರುವ ಬಸವಕಲ್ಯಾಣ ಮಠದ ಬಳಿಯಿಂದ ಜಲಗಂಗೆಯನ್ನು ತಮಟೆ ವಾದನಗಳೊಂದಿಗೆ ಗ್ರಾಮದ ಹಿರಿಯರು, ಮಹಿಳೆಯರು, ಯುವಕರು, ಸೇರಿದಂತೆ ನೂರಾರು ಮಂದಿ, ಮೆರವಣಿಗೆಯ ಮೂಲಕ ತೆರಳಿ, ಗಂಗಾಪೂಜೆ ನೆರವೇರಿಸಿದ ನಂತರ, ಹೂವಿನ ಕರಗದ ಮಾದರಿಯಲ್ಲಿ, ಜಲಗಂಗೆಯನ್ನು ಹೊತ್ತುಕೊಂಡು ಬಂದು, ಗಂಗಾದೇವಿಗೆ ಜಲಾಭಿಷೇಕ ಮಾಡಿ, ವಿಶೇಷ ಪೂಜೆ ನೆರವೇರಿಸಿದರು.

ನಂತರ, ದೇವಿಗೆ ಬಳೆ ತೊಡಿಸುವ ಶಾಸ್ತ್ರದ ಅಂಗವಾಗಿ, ತಮಟೆ ವಾದನಗಳು, ಸಾಂಸ್ಕೃತಿಕ ಕಲಾತಂಡಗಳೊಂದಿಗೆ ಮೆರವಣಿಗೆಯ ಮೂಲಕ ತೆರಳಿದ ಜಾತ್ರಾ ಕಮಿಟಿಯ ಸದಸ್ಯರು, ಹಾಗೂ ಹಿರಿಯರು, ಬಲಿಜ ಸಮುದಾಯದವರ ಮನೆಗೆ ತೆರಳಿ, ಗೌರವದಿಂದ ಮಲ್ಲಾರವನ್ನು ಮೆರವಣಿಗೆಯ ಮೂಲಕ ಕರೆದುಕೊಂಡು ಬಂದು, ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡುವ ಮೂಲಕ, ದೇವರಿಗೆ ಬಳೆ ತೊಡಿಸುವ ಶಾಸ್ತ್ರ ನೆರವೇರಿಸಿದರು. ಯುವಕರು, ಮಹಿಳೆಯರು, ಹೆಣ್ಣು ಮಕ್ಕಳು, ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಊರಿನಿಂದ ಹೊರಗೆ ಹೋಗದ ಹೆಣ್ಣು ಮಕ್ಕಳು: ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ, ಒಂದು ವಾರದ ಮೊದಲೇ ಸಾಟಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ನಂತರ, ತವರಿಗೆ ಬಂದಿರುವ ಹೆಣ್ಣು ಮಕ್ಕಳು, ಜಾತ್ರೆ ಮುಗಿಯುವ ತನಕ ಊರಿನಿಂದ ಹೊರಗೆ ಹೋಗುವಂತಿಲ್ಲ ಎನ್ನುವ ಸಂಪ್ರದಾಯವನ್ನು ಹಿಂದಿನಿಂದಲೂ ಪಾಲಿಸಿಕೊಂಡು ಬರಲಾಗುತ್ತಿದ್ದು, ಒಂದು ವೇಳೆ ಹೆಣ್ಣು ಮಕ್ಕಳು ತುರ್ತಾಗಿ ಹೊರಗೆ ಹೋಗಲೇ ಬೇಕಾದಂತಹ ಸಂದರ್ಭ ಒದಗಿ ಬಂದರೆ, ಬೆಳಿಗ್ಗೆ ಹೋಗಿ ಸಂಜೆಯಷ್ಟರೊಳಗೆ ವಾಪಸ್ಸು ಮನೆಗೆ ಬರಬೇಕು ಎಂದು ಹಿರಿಯರು ಹೇಳುತ್ತಾರೆ. ಈ ಕಾರಣದಿಂದ ಬಹಳಷ್ಟು ಮಂದಿ ಹೆಣ್ಣು ಮಕ್ಕಳು, ತಮ್ಮ ತವರು ಮನೆಗಳಲ್ಲೆ ಉಳಿದುಕೊಂಡಿದ್ದು, ಜಾತ್ರೆಗಾಗಿ ಕಾಯುತ್ತಿದ್ದಾರೆ.

ಜಾತ್ರಾ ಕಮಿಟಿಯ ಅಧ್ಯಕ್ಷ ನಾಗರಾಜ್, ಮುಖಂಡರಾದ ಕೆ.ಮುನಿರಾಜು, ಗಂಗಾ ಮತಸ್ಥರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಮುನಿರಾಜು, ಆಂಜಿನಪ್ಪ, ವೆಂಕಟೇಶ್ ಮುಂತಾದವರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

## ಮೋದಿ ಮನವಿಯನ್ನು ಸ್ವಾಗತಿಸೋಣ: ಎಚ್.ಡಿ.ದೇವೇಗೌಡ

ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರ ಮಿತ ಬಳಕೆ ಮನವಿಯನ್ನು ಎಲ್ಲರೂ ಸ್ವಾಗತ ಮಾಡಬೇಕು ಎಂದು ಮಾಜಿ ಪ್ರಧಾನಿ ದೇವೇಗೌಡ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ತೆಲಂಗಾಣದಲ್ಲಿ ಮೋದಿ ಕೆಲವು ಸಲಹೆ ಕೊಟ್ಟಿದ್ದಾರೆ. ದೇಶದ 150 ಕೋಟಿ ಜನರಿಗೆ ಮೋದಿ ಮನವಿ ಮಾಡಿದ್ದಾರೆ.

ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಗಿರುವ ಸಂಘರ್ಷದಿಂದ ಆಗಿರುವ ಕೆಟ್ಟ ದುಷ್ಪರಿಣಾಮವಿದು. ಹೀಗಾಗಿ ಮೋದಿ ಅವರ ಮನವಿಯನ್ನ ಸ್ವಾಗತ ಮಾಡಬೇಕು ಎಂದಿದ್ದಾರೆ.

ಅಮೆರಿಕಾ–ಇಸ್ರೇಲ್–ಇರಾನ್ ನಡುವೆ ಕದನ ಆಗ್ತಿದೆ. ಅದರಿಂದ ದುಷ್ಪರಿಣಾಮ ಆಗಿದೆ. ಈ ಹಿನ್ನಲೆ ಮೋದಿ ಅವರು ಬಳಕೆ ಮಾಡೋವಾಗ ನಿಧಾನವಾಗಿ, ಎಚ್ಚರಿಕೆಯಿಂದ ಮಾಡಿ ಅಂತ ಹೇಳಿದ್ದಾರೆ ಎಂದು ಮೋದಿ ಹೇಳಿಕೆ ಸಮರ್ಥಿಸಿಕೊಂಡಿದ್ದಾರೆ.

# ಎಲ್ಲಾ ಫಲಾನುಭವಿಗೂ 20ರಂದು ಹಕ್ಕುಪತ್ರ ವಿತರಣೆ




ತುಮಕೂರು

ತುಮಕೂರಿನಲ್ಲಿ ಮೇ 20ರಂದು ನಡೆಯಲಿರುವ ಬೃಹತ್ ಸಮಾವೇಶದಲ್ಲಿ ಭಾಗವಹಿಸುವ ಎಲ್ಲಾ ಫಲಾನುಭವಿಗಳಿಗೂ ಅಂದೇ ಸವಲತ್ತುಗಳನ್ನು ವಿತರಿಸಬೇಕು ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ಜಿಲ್ಲಾಡಳಿತಕ್ಕೆ ಸೂಚಿಸಿದ್ದಾರೆ.

ಮೇ 20ರಂದು ತುಮಕೂರಿನಲ್ಲಿ ನಡೆಯಲಿರುವ ಕರ್ನಾಟಕ ಸರ್ಕಾರದ 3 ವರ್ಷಗಳ ಸಾಧನೆ ಸಂಭ್ರಮ ಬೃಹತ್ ಸಮಾವೇಶ ಕಾರ್ಯಕ್ರಮ ಹಾಗೂ ತುಮಕೂರು ಜಿಲ್ಲೆಯ ಕಂದಾಯ ಇಲಾಖೆ ಹಾಗೂ ಇತರೆ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸುವ ಕಾರ್ಯಕ್ರಮ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಭಾಗವಹಿಸುವ ಈ ಬೃಹತ್ ಸಮಾವೇಶದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ವೇದಿಕೆಯಲ್ಲಿ ಸಾಂಕೇತಿಕವಾಗಿ ಸವಲತ್ತುಗಳನ್ನು ವಿತರಣೆ ಮಾಡಿದರೂ ಇನ್ನಿತರೆ ಫಲಾನುಭವಿಗಳಿಗೆ ಅಂದೇ ಆ ಕ್ಷಣದಲ್ಲೇ ಸವಲತ್ತುಗಳನ್ನು ಹಾಗೂ ಹಕ್ಕುಪತ್ರಗಳನ್ನು ವಿತರಿಸಲು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಚಿವರು ತಿಳಿಸಿದರು.

ಈ ಹಿಂದೆ ಕೆಲವೊಮ್ಮೆ ವೇದಿಕೆಯಲ್ಲಿ ಸಾಂಕೇತಿಕವಾಗಿ ಹಕ್ಕುಪತ್ರಗಳನ್ನು ನೀಡಿ ಆನಂತರ ಇತರೆ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲು ತೀರ ವಿಳಂಬವಾಗುವ ಸಾಧ್ಯತೆಗಳ ಬಗ್ಗೆ ಕೇಳಿದ್ದೇನೆ. ಈ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲಾಡಳಿತ ಅಂತಹ ತಪ್ಪುಗಳನ್ನು ಮಾಡಬಾರದು. ಫಲಾನುಭವಿಗಳಿಗೆ ಅಂದೇ ಮುಖ್ಯಮಂತ್ರಿಗಳ ಸಮ್ಮುಖದಲ್ಲೇ ಹಕ್ಕುಪತ್ರಗಳನ್ನು ಹಾಗೂ ಸವಲತ್ತುಗಳನ್ನು ವಿತರಿಸಲು ಕ್ರಮವಹಿಸಬೇಕು. ಈ ಸಂಬಂಧ ಪ್ರತ್ಯೇಕವಾಗಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ಫಲಾನುಭವಿಗಳು ಕುಳಿತುಕೊಳ್ಳುವ ಸ್ಥಳದಲ್ಲಿಯೇ ಹಕ್ಕುಪತ್ರ ಹಾಗೂ ಇತರೆ ಸೌಲಭ್ಯಗಳನ್ನು ವಿತರಿಸಲು ಸಿದ್ಧತೆ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಜಿಲ್ಲೆಯಾದ್ಯಂತ ಎಲ್ಲಾ 10 ತಾಲ್ಲೂಕುಗಳಿಂದ ಸುಮಾರು 2ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಈ ಕಾರ್ಯಕ್ರಮಕ್ಕೆ ಆಗಮಿಸುವ ನಿರೀಕ್ಷೆಯಿದ್ದು, ಈ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರಲು ಸಂಬಂಧಿಸಿದ ತಾಲ್ಲೂಕು ಆಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು. ಫಲಾನುಭವಿಗಳನ್ನು ಆಯಾ ತಾಲ್ಲೂಕುಗಳ ಇತರೆ ಪ್ರದೇಶಗಳಿಂದ ಹೊರಡುವ ಜಾಗದಲ್ಲಿಯೇ ಫಲಾನುಭವಿಗಳಿಗೆ ಬೆಳಗಿನ ಉಪಹಾರ ನಂತರವೇ ಬಸ್ಸುಗಳು ಹೊರಡಬೇಕು. ಈ ಸಂಬಂಧ ಫಲಾನುಭವಿಗಳ ಸುರಕ್ಷತೆ ಹಾಗೂ ಉಪಚಾರದಲ್ಲಿ ಯಾವುದೇ ಕೊರತೆ ಆಗಬಾರದು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮಕ್ಕಾಗಿ ತುಮಕೂರು ನಗರಕ್ಕೆ ಜಿಲ್ಲೆಯ ಇತರೆ ತಾಲ್ಲೂಕುಗಳಿಂದ ಫಲಾನುಭವಿಗಳನ್ನು ಕರೆತರಲು ಸರ್ಕಾರಿ, ಖಾಸಗಿ ಬಸ್ಸುಗಳೂ ಸೇರಿದಂತೆ ಸುಮಾರು 3,000 ಬಸ್ಸುಗಳು ನಗರಕ್ಕೆ ಆಗಮಿಸಲಿದ್ದು, ಫಲಾನುಭವಿಗಳು ದೂರದಿಂದ ಕಾರ್ಯಕ್ರಮದ ಜಾಗಕ್ಕೆ ನಡೆದುಕೊಂಡು ಬರಲು ಅವಕಾಶ ನೀಡದೆ ಕಾರ್ಯಕ್ರಮದ ಜಾಗದಲ್ಲಿಯೇ ಬಸ್ಸುಗಳು ಫಲಾನುಭವಿಗಳನ್ನು ಇಳಿಸಿ, ಕಾರ್ಯಕ್ರಮದ ನಂತರ ಫಲಾನುಭವಿಗಳನ್ನು ಕರೆದೊಯ್ಯಲು ವ್ಯವಸ್ಥೆ ಆಗಬೇಕು. ನಗರ ಭಾಗದಲ್ಲಿ ವಾಹನ ಸಂಚಾರ ಅಥವಾ ವಾಹನಗಳ ನಿಲುಗಡೆಗೆ ಸ್ಥಳಾವಕಾಶದ ಕೊರತೆಯಾಗಬಹುದು. ಅದಕ್ಕಾಗಿ ಜಿಲ್ಲಾ ಪೋಲೀಸ್ ಇಲಾಖೆಯಿಂದ ಸೂಕ್ತ ನಿಲುಗಡೆ ಪ್ರದೇಶ ಗುರುತಿಸಿ ನಿರ್ದಿಷ್ಟ ತಾಲ್ಲೂಕುಗಳ ವಾಹನಗಳು ನಿರ್ದಿಷ್ಟ ನಿಲುಗಡೆಯಲ್ಲಿಯೇ ನಿಲ್ಲುವಂತೆ ವ್ಯವಸ್ಥೆ ಮಾಡಬೇಕೆಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ತುಮುಲ್ ವತಿಯಿಂದ ಮಜ್ಜಿಗೆ, ನೀರಿನ ವ್ಯವಸ್ಥೆ ಆಗಬೇಕು. ಅಲ್ಲದೆ, ಫಲಾನುಭವಿಗಳು ಸುಲಭವಾಗಿ ತಮ್ಮ ಜಾಗಕ್ಕೆ ಹೋಗಿ ಕುಳಿತುಕೊಳ್ಳಲು ಅಥವಾ ನೀರು ಕುಡಿಯಲು ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದರು.

ಅಲ್ಲದೆ, ತುಮಕೂರು ಮಹಾನಗರಪಾಲಿಕೆ ವತಿಯಿಂದ ನಗರದ ಸ್ವಚ್ಛತೆ ಹಾಗೂ ಸುಂದರವಾಗಿ ಕಾಣಿಸಲು ವ್ಯವಸ್ಥೆ ಕೈಗೊಳ್ಳಬೇಕು. ಕಾರ್ಯಕ್ರಮಕ್ಕೆ ಲಕ್ಷಾಂತರ ಮಂದಿ ಫಲಾನುಭವಿಗಳು ಆಗಮಿಸುವುದರಿಂದ ಅವರಿಗೆ ಸೂಕ್ತ ರೀತಿಯ ಸಂಚಾರಿ ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವರು ಸೂಚಿಸಿದರು.

ಕಾರ್ಯಕ್ರಮಕ್ಕಾಗಿ ಸಚಿವ ಸಂಪುಟದ ಎಲ್ಲಾ ಸಚಿವರು, ಹಿರಿಯ ಅಧಿಕಾರಿಗಳು ಆಗಮಿಸುವುದರಿಂದ ಯಾವುದೇ ಕೊರತೆಯಾಗದಂತೆ ಅವರಿಗೆ ಆತಿಥ್ಯದ ವ್ಯವಸ್ಥೆಯಾಗಬೇಕು. ಈಗಾಗಲೇ ತುಮಕೂರು ಮಾದರಿ ಎಂಬ ಪರಿಕಲ್ಪನೆ ರಾಜ್ಯ ಸರ್ಕಾರದ ಮಟ್ಟದಲ್ಲಿ ಜನಜನಿತವಾಗಿದೆ. ಮುಖ್ಯಮಂತ್ರಿಗಳ ಕಾರ್ಯಕ್ರಮ, ರಾಷ್ಟ್ರೀಯ, ಅಂತಾರಾಷ್ಟ್ರೀಯ ಕಾರ್ಯಕ್ರಮಗಳನ್ನು ಸಂಘಟಿಸಿ ಯಶಸ್ವಿಯಾಗಿರುವುದರಿಂದ ರಾಜ್ಯ ಸರ್ಕಾರಕ್ಕೆ ತುಮಕೂರಿನ ಬಗ್ಗೆ ವಿಶೇಷ ಆಸಕ್ತಿ ಹಾಗೂ ವಿಶ್ವಾಸ ಇರುತ್ತದೆ. ಈ ಹಿನ್ನೆಲೆಯಲ್ಲಿ ತುಮಕೂರು ಮಾದರಿ ಎಂಬ ಬಗ್ಗೆ ಯಾವುದೇ ಕೊರತೆಯಿಲ್ಲದಂತೆ ಅತ್ಯಂತ ಶಿಸ್ತುಬದ್ಧವಾಗಿ ಗೊಂದಲಗಳಿಗೆ ಆಸ್ಪದ ನೀಡದಂತೆ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ವಿ. ಅಶ್ವಿಜ, ಜಿಲ್ಲಾ ಪೋಲೀಸ್ ಅಧೀಕ್ಷಕ ಅಶೋಕ್ ಕೆ.ವಿ. ಸೇರಿದಂತೆ ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲೆಯ ಇತರೆ ತಾಲ್ಲೂಕುಗಳ ತಹಶೀಲ್ದಾರ್, ಇನ್ನಿತರೆ ತಾಲ್ಲೂಕು ಮಟ್ಟದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಹಾಜರಾಗಿದ್ದರು.

# ಹಸು ಸಾಗಾಟದ ಬೊಲೆರೊ ಪಲ್ಟಿ: ಬೆಲೆಬಾಳುವ ಹಸುವಿನ ಸ್ಥಿತಿ ಗಂಭೀರ

ದೊಡ್ಡಬಳ್ಳಾಪುರ

ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಹಸುಗಳನ್ನು ಸಾಗಿಸುತ್ತಿದ್ದ ಬೊಲೆರೊ ವಾಹನ ಹೈವೇಯಿಂದ ಸರ್ವಿಸ್ ರಸ್ತೆಗೆ ಪಲ್ಟಿಯಾಗಿರುವ ಘಟನೆ ಮಧುರನಹೊಸಹಳ್ಳಿ ಗೇಟ್ ಸಮೀಪದ ದಾಬಸ್‌ಪೇಟೆ–ಹೊಸಕೋಟೆ ರಾಜ್ಯ ಹೆದ್ದಾರಿಯಲ್ಲಿ ನಡೆದಿದೆ.



ಅಪಘಾತದಲ್ಲಿ ಸುಮಾರು 1.5 ಲಕ್ಷ ಮೌಲ್ಯದ ಒಂದು ಹಸುವಿನ ಸ್ಥಿತಿ ಗಂಭೀರ ವಾಗಿದ್ದು, ಮತ್ತೊಂದು ಹಸು ಪ್ರಾಣಾಪಾಯ ದಿಂದ ಪಾರಾಗಿದೆ ಎಂದು ತಿಳಿದು ಬಂದಿದೆ.

ವಾಹನ ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ.

ಘಟನೆ ಸಂಬಂಧ ದೊಡ್ಡಬೆಳವಂಗಲ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

# ರಾಷ್ಟ್ರಮಟ್ಟದಲ್ಲಿ ಬೇಡಿಕೆಯ ಕಲೆ ಡೊಳ್ಳು: ಸತೀಶ್

ರಾಮನಗರ

ರಾಜ್ಯದ ಕೆಲವಷ್ಟೇ ಪ್ರದೇಶಗಳಲ್ಲಿ ಸೀಮಿತವಾಗಿದ್ದ ಡೊಳ್ಳು ಕಲೆ ಇಂದು ರಾಜ್ಯ ಸೇರಿದಂತೆ ಅಂತರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆಯ ಕಲೆಯಾಗಿದೆ, ಇದಕ್ಕೆ ಖ್ಯಾತಿ ತಂದುಕೊಟ್ಟ ಶ್ರೇಯ ಕಲಾವಿದ ಶ್ರೀನಿವಾಸ್ ಅವರಿಗೆ ಸಲ್ಲುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೆ. ಸತೀಶ್ ಬಣ್ಣಿಸಿದರು.

ಅವರು ಭಾನುವಾರ ರಾಮನಗರದ ಜಾನಪದ ಲೋಕದಲ್ಲಿ ಡಾ. ಎಚ್.ಎಲ್. ನಾಗೇಗೌಡರ ನೆನಪಿನಲ್ಲಿ ಪ್ರತಿ ತಿಂಗಳ ನಡೆಯುವ ತಿಂಗಳ ಅತಿಥಿ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಡೊಳ್ಳು ಕಲಾವಿದರಾದ ಶ್ರೀನಿವಾಸ್ ಅವರ ನಿಸ್ವಾರ್ಥ ಕೊಡುಗೆಯಿಂದ ಇಂದು ಶುಭ ಸಮಾರಂಭಗಳಿಗೆ ಡೊಳ್ಳು ಕಲೆ ವಾಣಿಜ್ಯ ಕಲೆಯಾಗಿ ಬೆಳೆದಿದೆ ಇವರ ಮಗ ಚಂದ್ರು ಐ.ಪಿ.ಎಸ್, ಐ.ಎ.ಎಸ್ ಅಧಿಕಾರಿಗಳಿಗೆ ತರಬೇತಿಯನ್ನು ನೀಡುವ ಅವಕಾಶವನ್ನು ಪಡೆದಿದ್ದಾರೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ನಡೆಯುವ ಅನೇಕ ಕಾರ್ಯಕ್ರಮಗಳಲ್ಲಿ ಈ ರೀತಿಯ ಜನಪದ ಕಲಾವಿದರಿಗೆ ಗೌರವವನ್ನು ನೀಡುತ್ತಾ ಬಂದಿದೆ ಎಂದರು.

ಸಾಹಿತಿಗಳು ಮತ್ತು ಕರ್ನಾಟಕ ಜಾನಪದ ಪರಿಷತ್ತಿನ ಚನ್ನಪಟ್ಟಣ ತಾಲೂಕು ಘಟಕದ ಅಧ್ಯಕ್ಷರಾದ ಡಾ. ವಿಜಯ ರಾಂಪುರ ಮಾತನಾಡಿ ಕರ್ನಾಟಕದ ಗಂಡು ಕಲೆ



ಜನಪ್ರಿಯ ಕಲೆ ಶಕ್ತಿಯುತವಾದ ಕಲೆ ಇತ್ತೀಚಿನ ದಿನಗಳಲ್ಲಿ ಹೆಚ್ಚು ಜನಪ್ರಿಯತೆಯನ್ನು ಗಳಿಸಿದೆ. ಯಾವುದೇ ಕಲೆ ಹುಟ್ಟಬೇಕಾದರೆ ಆರಾಧನೆ ಅಥವಾ ಮನರಂಜನಾ ಕಲೆಯಿಂದ ಹುಟ್ಟಿಕೊಳ್ಳುತ್ತದೆ ಆದರೆ ಡೊಳ್ಳು ಕುಣಿತ ಆರಾಧನೆ ಕಲೆ. ಧಾರ್ಮಿಕ ಮತ್ತು ಸಾಂಸ್ಕೃತಿಕ ಜೊತೆಗೆ ಪೌರಾಣಿಕ ಹಿನ್ನೆಲೆಯಲ್ಲಿ ಇದೆ. ಹಬ್ಬ ಹರಿದಿನ ಜಾತ್ರೆಗಳಲ್ಲಿ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಇತ್ತೀಚಿನ ದಿನಮಾನಗಳಲ್ಲಿ ರಾಜಕೀಯ ಕಾರ್ಯಕ್ರಮಗಳಲ್ಲಿ ಕಲಾವಿದರು ಮಿಂಚುತ್ತಿದ್ದಾರೆ, ಆರ್ಥಿಕವಾಗಿ ಸಬಲೀಕರಣವಾಗಬೇಕು ಎನ್ನುವ ದೃಷ್ಟಿಯಿಂದ ಕಲೆ ಬೆಳೆದು ವಿಜೃಂಭಿಸಲಿ ಎಂದರು.

ಅಂತರಾಷ್ಟ್ರೀಯ ಗಾಯಕರಾದ ಶಿವಕುಮಾರ್ ಬ್ಯಾಡ್ರಳ್ಳಿ ಅವರು ಮಾತನಾಡಿ, ಕಲೆಯನ್ನು ಪ್ರೇಕ್ಷಕರು ಅಂತರಂಗದಿಂದ ಕಾಪಾಡಬೇಕು, ಜಿಲ್ಲೆಯಲ್ಲಿ ಡೊಳ್ಳು ಕಲೆಗೆ ಬುನಾದಿ ಹಾಕಿಕೊಟ್ಟವರು ಶ್ರೀನಿವಾಸರವರು ಇವರ ಮೂಲಭೂತ ಸೌಕರ್ಯದ ಕೊರತೆಯ ನಡುವೆಯೂ ಜಾನಪದ ಲೋಕದಲ್ಲಿ ಈ ಕಲೆಯನ್ನು ಉಳಿಸಿ ಬೆಳೆಸಿ ಸಮೃದ್ಧಿ ಗೊಳಿಸಿದ್ದಾರೆ. ಗಂಡು ಕಲೆ ಇಂದು ಕೇವಲ ಗಂಡು ಕಲೆಯಾಗಿ ಇರದೆ ಹೆಣ್ಣು ಮಕ್ಕಳು ಕಲಿಯುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಡೊಳ್ಳು ಕುಣಿತ ಕಲಾವಿದರಾದ ಶ್ರೀನಿವಾಸ್ ಅವರನ್ನು ಗೌರವಿಸಲಾಯಿತು. ನಂತರ ನಡೆದ ಸಂವಾದದಲ್ಲಿ ಕಲೆ ಮತ್ತು ತಾವು ಕಲಿತ ಆಸಕ್ತಿ ಬಗ್ಗೆ ವಿವರಿಸಿದರು ಹಾಗೂ ಡೊಳ್ಳು ತಂಡದವರು ಕಲಾಪ್ರದರ್ಶನ ನಡೆಸಿಕೊಟ್ಟರು.

ಜಾನಪದ ಲೋಕದ ಕ್ಯೂರೇಟರ್ ಡಾ. ರವಿ ಯು.ಎಂ, ಸಂಚಾಲಕ ಡಾ. ಸಂದೀಪ್ ಕೆ.ಎಸ್, ಡಿಪ್ಲೊಮಾ ವಿದ್ಯಾರ್ಥಿಗಳು, ಲೋಕದ ಸಿಬ್ಬಂದಿ ಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಗಂಗಾದೇವಿ ಜಾತ್ರಾ ಮಹೋತ್ಸವದ ದೀಪೋತ್ಸವಕ್ಕಾಗಿ ಸಿದ್ಧಗೊಂಡ ಹೂವಿನ ಬುಟ್ಟಿಗಳಿಗೆ ಹೆಚ್ಚಾದ ಬೇಡಿಕೆ

ವಿಜಯಪುರ

ಪಟ್ಟಣದಲ್ಲಿ ಮೇ.12 ರಂದು ನಡೆಯಲಿರುವ ಗ್ರಾಮದೇವತೆ ಗಂಗಾತಾಯಿ ಜಾತ್ರಾ ಮಹೋತ್ಸವದ ಅಂಗವಾಗಿ ತಂಬಿಟ್ಟಿನ ದೀಪಗಳಿಗಾಗಿ ತಯಾರಿಸುತ್ತಿರುವ ಹೂವಿನ ಬುಟ್ಟಿಗಳಿಗೆ ಬೇಡಿಕೆ ಹೆಚ್ಚಾಗಿದ್ದು, ಅವುಗಳ ಬೆಲೆಯೂ ಏರಿಕೆಯಾಗಿದೆ.

ದೀಪೋತ್ಸವದ ಮೆರವಣಿಗೆಯಲ್ಲಿ ತೆರಳುವಾಗ ತಮ್ಮ ಮನೆಯ ದೀಪವು ಆಕರ್ಷಣೀಯವಾಗಿರಬೇಕು ಎನ್ನುವ ಕಾರಣದಿಂದ ವಿವಿಧ ಬಗೆಯ ಹೂಗಳಿಂದ ದೀಪಗಳಿಗೆ ಅಲಂಕಾರ ಮಾಡಿಸಿಕೊಳ್ಳಲು ಹೂವಿನ ವ್ಯಾಪಾರಿಗಳ ಬಳಿ ಮುಂಗಡ ಹಣ ನೀಡಿ, ಬುಕ್ಕಿಂಗ್ ಮಾಡಿಕೊಂಡಿದ್ದಾರೆ. ಉಳ್ಳವರು, ಒಂದೊಂದು ದೀಪದ ಬುಟ್ಟಿಗೆ 25 ರಿಂದ 50 ಸಾವಿರ ರೂಪಾಯಿಗಳವರೆಗೂ ಖರ್ಚು ಮಾಡುತ್ತಿದ್ದಾರೆ.

ಬಡವರು, ಮಧ್ಯಮ ವರ್ಗದವರು, ತಮ್ಮ ಶಕ್ತಿಗೆ ಅನುಸಾರವಾಗಿ 5 ಸಾವಿರ ರೂಪಾಯಿವರೆಗೂ ಖರ್ಚುಮಾಡಿ, ಹೂವಿನ ಬುಟ್ಟಿಗಳನ್ನು ಸಿದ್ಧತೆ ಮಾಡಿಸುತ್ತಿದ್ದಾರೆ. ಸುಂಗಧರಾಜ, ಸೇವಂತಿಗೆ, ಗುಲಾಬಿ, ತುಳಸಿ, ಹೂಗಳಿಂದ ಹೆಣೆಯುವ ಬುಟ್ಟಿಗೆ, ವಿವಿಧ ರೀತಿಯಲ್ಲಿ ಅಲಂಕಾರ ಮಾಡಲಾಗುತ್ತದೆ. ಲಕ್ಷ್ಮೀ, ಗಣೇಶ, ವೆಂಕಟೇಶ್ವರ ಸೇರಿದಂತೆ ವಿವಿಧ ದೇವರುಗಳ, ಮುಖವಾಡಗಳನ್ನು ಹೂಗಳೊಂದಿಗೆ ಹೆಣೆದು, ಬಣ್ಣ, ಬಣ್ಣದ ಮಣಿಗಳಿಂದ ಅಲಂಕಾರ ಮಾಡುತ್ತಾರೆ. ಮಲ್ಲಿಗೆ ಹೂಗಳಿಂದ ಬುಟ್ಟಿಯನ್ನು ಹೆಣೆದು ಕೊಟ್ಟರೆ, 5 ಸಾವಿರ ರೂಪಾಯಿಗಳಾಗುತ್ತದೆ.

ಒಂದು ಹೂವಿನ ಬುಟ್ಟಿಯನ್ನು ಹೆಣೆಯಲು 25 ಬಿದಿರಿನ ದಬ್ಬೆಗಳನ್ನು ಉಪಯೋಗ ಮಾಡಲಾಗುತ್ತದೆ. ಒಂದು ದಬ್ಬೆಗೆ(ಕಡ್ಡಿ) ಹೂವನ್ನು ಸುತ್ತಲೂ 30 ರೂಪಾಯಿ ಖರ್ಚು ಬೀಳುತ್ತದೆ. ಹೂ ಖರೀದಿ ಎಲ್ಲಾ ಸೇರಿ ನಮಗೆ 1500 ರೂಪಾಯಿ ಖರ್ಚಾಗುತ್ತದೆ. ಒಂದು ಬುಟ್ಟಿಯನ್ನು ಹೆಣೆಯಲು ಸುಮಾರು 3 ಗಂಟೆಗಳ ಕಾಲಾವಕಾಶ ಬೇಕು. ಬುಟ್ಟಿಗಳನ್ನು ತಯಾರಿಸುವುದು ಕೂಡಾ ಒಂದು ಕಲೆಯಾಗಿದೆ. ಎಂದು ಹೂವಿನ ವ್ಯಾಪಾರಿ ಮಂಜುನಾಥ್ ಹೇಳುತ್ತಾರೆ.

ಹೂವಿನ ವ್ಯಾಪಾರಿಗಳು ಬೆಂಗಳೂರು, ಚಿಕ್ಕಬಳ್ಳಾಪುರದ ಮಾರುಕಟ್ಟೆಗಳಿಂದ ಹೂಗಳು ಖರೀದಿ ಮಾಡಿಕೊಂಡು ಬಂದು, ಬುಟ್ಟಿಗಳನ್ನು ಅಲಂಕರಿಸಿಕೊಡುವ ಕೆಲಸ ಮಾಡುತ್ತಿದ್ದಾರೆ. ಇಡೀ ಕುಟುಂಬದವರು ಬುಟ್ಟಿಗಳನ್ನು ಅಲಂಕರಿಸುವ ಕೆಲಸದಲ್ಲಿ ತೊಡಗಿಸಿಕೊಂಡಿದ್ದು, ಒಂದೊಂದು ಬುಟ್ಟಿಗೆ ಆರಂಭದ ಬೆಲೆ 2500 ರಿಂದ ಆರಂಭವಾಗುತ್ತಿದ್ದು, 25 ಸಾವಿರ ರೂಪಾಯಿಗಳವರೆಗೂ ಬೆಲೆ ಇದೆ ಎಂದು ಹೂವಿನ ವ್ಯಾಪಾರಿ ವೆಂಕಟೇಶ್ ಹೇಳಿದರು.

# ಕಾರ್ಮಿಕ ಸಂಹಿತೆಗಳು ದುಡಿಯುವ ವರ್ಗದ ವಿರುದ್ಧದ ಯುದ್ಧ: ಮೀನಾಕ್ಷಿ ಸುಂದರಂ ಟೀಕೆ



ಬೆಂಗಳೂರು"ನಾಲ್ಕು ಕಾರ್ಮಿಕ ಸಂಹಿತೆಗಳ ನಿಯಮಾವಳಿಗಳ ಅಧಿಸೂಚನೆ ದೇಶದ ದುಡಿಯುವ ವರ್ಗದ ವಿರುದ್ಧ ಬಿಜೆಪಿ ಸರ್ಕಾರ ನಡೆಸಿರುವ ಅಮಾನವೀಯ ಯುದ್ಧಕ್ಕೆ ಸಮಾನವಾಗಿದೆ" ಎಂದು ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ರಾಜ್ಯಾಧ್ಯಕ್ಷ ಮೀನಾಕ್ಷಿ ಸುಂದರಂ ಆರೋಪಿಸಿದರು.

ನಗರದ ಬೆಸೆಂಟ್ ಪಾರ್ಕ್‌ನಲ್ಲಿ ಸಿಐಟಿಯು ಬೆಂಗಳೂರು ಗ್ರಾಮಾಂತರ ಜಿಲ್ಲಾ ಘಟಕದ ವತಿಯಿಂದ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರದ ಎನ್‌ಡಿಎ ಸರ್ಕಾರ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಗಾಳಿಗೆ ತೂರಿ 2025ರ ನವೆಂಬರ್ 21ರಂದು ನಾಲ್ಕು ಕಾರ್ಮಿಕ ಸಂಹಿತೆಗಳ ಅನುಷ್ಠಾನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಿದೆ ಎಂದು ಕಿಡಿಕಾರಿದರು.

ಕಾರ್ಮಿಕ ಸಂಘಟನೆಗಳು ಹಾಗೂ ಸಿಐಟಿಯು ಸಲ್ಲಿಸಿದ್ದ ಆಕ್ಷೇಪಣೆಗಳನ್ನು ಪರಿಗಣಿಸದೇ 2026ರ ಮೇ 8ರಂದು ಅಂತಿಮ ನಿಯಮಾವಳಿಗಳನ್ನು ಪ್ರಕಟಿಸಿ ಸಂಹಿತೆಗಳನ್ನು ಜಾರಿಗೆ ತರಲಾಗಿದೆ. ವಿದೇಶಿ ಹಾಗೂ ಸ್ವದೇಶಿ ಕಾರ್ಪೊರೇಟ್ ಬಂಡವಾಳಶಾಹಿಗಳ ಅನುಕೂಲಕ್ಕಾಗಿ ಕಾರ್ಮಿಕರ ಹಕ್ಕುಗಳನ್ನು ದುರ್ಬಲಗೊಳಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಆರೋಪಿಸಿದರು.

2019ರಲ್ಲಿ ವೇತನ ಸಂಹಿತೆ ಜಾರಿಯಾದ ಬಳಿಕ ದೇಶಾದ್ಯಂತ ಪ್ರತಿಭಟನೆಗಳು ನಡೆದವು. 2020ರ ಸೆಪ್ಟೆಂಬರ್‌ನಲ್ಲಿ ಉಳಿದ ಮೂರು ಸಂಹಿತೆಗಳು ಜಾರಿಯಾದ ನಂತರವೂ ಸಾರ್ವತ್ರಿಕ ಮುಷ್ಕರಗಳು ನಡೆದವು. 2025ರ ಜುಲೈ 6ರಂದು ನಡೆದ ಸಾರ್ವತ್ರಿಕ ಮುಷ್ಕರದಲ್ಲಿ 25 ಕೋಟಿಗೂ ಅಧಿಕ ಕಾರ್ಮಿಕರು ಭಾಗವಹಿಸಿದ್ದರು ಎಂದು ಹೇಳಿದರು.

ಹಲವಾರು ದಶಕಗಳ ಹೋರಾಟದಿಂದ ಗಳಿಸಲಾದ ಕಾರ್ಮಿಕರ ಮೂಲಭೂತ ಹಕ್ಕುಗಳು ಹಾಗೂ ಸವಲತ್ತುಗಳನ್ನು ಈ ಸಂಹಿತೆಗಳು ಕಸಿದುಕೊಳ್ಳಲಿವೆ. ಖಾಯಂ ಉದ್ಯೋಗದ ಅವಕಾಶಗಳನ್ನು ಕಡಿಮೆ ಮಾಡಿ, ಕಾರ್ಮಿಕರನ್ನು ನವಗುಲಾಮಗಿರಿಗೆ ತಳ್ಳುವ ಪ್ರಯತ್ನ ಇದಾಗಿದೆ ಎಂದು ಅವರು ಟೀಕಿಸಿದರು.

ದೇಶದಲ್ಲಿ ನಿರುದ್ಯೋಗ, ಬೆಲೆ ಏರಿಕೆ ಹಾಗೂ ಜೀವನದ ಸಂಕಷ್ಟಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ ಈ ಕಾರ್ಮಿಕ ಸಂಹಿತೆಗಳ ಜಾರಿಯು ಜನರ ಮೇಲಿನ ಪ್ರಜಾವಿರೋಧಿ ಕ್ರಮವಾಗಿದೆ. ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯುವಂತೆ ಒತ್ತಾಯಿಸಿ ರಾಜ್ಯಾದ್ಯಂತ ವ್ಯಾಪಕ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲು ಸಿಐಟಿಯು ರಾಜ್ಯ ಸಮಿತಿ ಕರೆ ನೀಡಿದೆ ಎಂದು ತಿಳಿಸಿದರು.

# ‘ಪ್ರತಿಯೊಬ್ಬರಿಗೂ ಶಿಕ್ಷಣ ಅತ್ಯಗತ್ಯ’



ಬೆಂಗಳೂರು ಸಮಾಜದ ಮುಖ್ಯವಾಹಿನಿಗೆ ಬರಲು ಶಿಕ್ಷಣ ಅತ್ಯಂತ ಅಗತ್ಯವಾಗಿದೆ ಎಂದು ಮಾಜಿ ಸಚಿವ ಕೆ.ಎನ್.ರಾಜಣ್ಣ ಹೇಳಿದರು.

ನಗರದ ಕನ್ನಡಭವನದಲ್ಲಿ ಭಾವಸಾರ ಬ್ರಿಗೇಡ್ ವತಿಯಿಂದ ಆಯೋಜಿಸಿದ್ದ ಮಾತಾ ಹಿಂಗುಲಾಂಬಿಕ ದೇವಿ ಜಯಂತ್ಯೋತ್ಸವ ಹಾಗೂ ಭಾವಸಾರ ಬ್ರಿಗೇಡ್‌ನ 8ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಹಿಂದುಳಿದ ಸಮುದಾಯಗಳು ಸಮಾಜದಲ್ಲಿ ಸ್ವಾಭಿಮಾನದ ಬದುಕನ್ನು ಕಂಡುಕೊಳ್ಳುತ್ತಿವೆ.

ಕೇವಲ ಜನಸಂಖ್ಯೆಯ ಆಧಾರದ ಮೇಲೆ ಸಮಾಜದಲ್ಲಿ ಗೌರವ ಸಿಗುವುದಿಲ್ಲ. ನಮ್ಮ ನಡವಳಿಕೆ, ಸಂಸ್ಕಾರ ಮತ್ತು ಆತ್ಮವಿಶ್ವಾಸವೇ ಗೌರವ ತಂದುಕೊಡುತ್ತದೆ. ನಾವು ಯಾರಿಗೂ ಕಡಿಮೆ ಇಲ್ಲ ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಮೂಡಬೇಕು. ಅದಕ್ಕಾಗಿ ಶಿಕ್ಷಣ ಅತ್ಯಗತ್ಯ ಎಂದು ಹೇಳಿದರು.

ಮಕ್ಕಳ ಭವಿಷ್ಯವೇ ದೇಶದ ಭವಿಷ್ಯ ಎಂದು ಹೇಳಿದ ಅವರು, ದೇವರು ಶ್ರೀಮಂತ–ಬಡವ ಎನ್ನದೆ ಎಲ್ಲ ಮಕ್ಕಳಿಗೂ ಸಮಾನವಾದ ಬುದ್ಧಿಶಕ್ತಿ ನೀಡಿದ್ದಾನೆ. ಅದನ್ನು ಸರಿಯಾಗಿ ಬಳಸಿಕೊಂಡು ಉನ್ನತ ಸ್ಥಾನಕ್ಕೇರಬೇಕು. ಮಕ್ಕಳು ಶಿಕ್ಷಣದಿಂದ ವಂಚಿತರಾದರೆ ಅವರ ಭವಿಷ್ಯ ಅಂಧಕಾರದಲ್ಲಿ ಮುಳುಗುತ್ತದೆ. ಸಾಮಾನ್ಯವಾಗಿ ಬಡತನದಲ್ಲಿ ಹುಟ್ಟಿದ ಮಕ್ಕಳೇ ಹೆಚ್ಚು ಪರಿಶ್ರಮಪಟ್ಟು ವಿದ್ಯಾವಂತರಾಗುತ್ತಾರೆ. ಅವರಿಗೆ ಸರಿಯಾದ ಮಾರ್ಗದರ್ಶನ ನೀಡುವುದು ಸಮಾಜದ ಜವಾಬ್ದಾರಿಯಾಗಿದೆ ಎಂದರು.

ಇತಿಹಾಸ ತಿಳಿದವರು ಮಾತ್ರ ಇತಿಹಾಸ ಸೃಷ್ಟಿಸಲು ಸಾಧ್ಯ. ನಮ್ಮ ಪೂರ್ವಜರ ತತ್ವ, ಸಿದ್ಧಾಂತ ಮತ್ತು ಉಪದೇಶಗಳನ್ನು ಹೊಸ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಸಮಾಜದ ಸೇವೆ ಮಾಡಲು ಹಾಗೂ ಸಂಘಟನೆಯನ್ನು ಬಲಪಡಿಸಲು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮುಂದೆ ಬರಬೇಕು. ಯುವಶಕ್ತಿಯಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ತರಲು ಸಾಧ್ಯ ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಭಾವಸಾರ ಬ್ರಿಗೇಡ್ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಎಐಬಿಕೆ ಮಹಾಸಭಾದ ರಾಜ್ಯ ಹಿರಿಯ ಉಪಾಧ್ಯಕ್ಷ ಗುರುಪ್ರಸಾದ್ ಪಿಸ್ಸೆ, ಸತ್ಯನಾರಾಯಣ ರಾವ್ ಅಂಬರ್‌ಕರ್, ವಲಯ ಅಧ್ಯಕ್ಷ ಸತ್ಯನಾರಾಯಣ ಅಷ್ಟಕರ್, ವಿವಿಧ ತಾಲೂಕು ಘಟಕಗಳ ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷರು, ಮಹಿಳಾ ಮಂಡಳಿ, ಭಜನಾ ಮಂಡಳಿ, ಯುವಕ ಮಂಡಳಿಯ ಪದಾಧಿಕಾರಿಗಳು, ಭಾವಸಾರ ಬ್ರಿಗೇಡ್‌ನ ಪದಾಧಿಕಾರಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಿದ್ದರು.

ನಗರ ಶಾಸಕರಾದ ಜ್ಯೋತಿ ಗಣೇಶ್ ಮಾತನಾಡಿ, ಯಾವುದೇ ಸಮುದಾಯ ಅಥವಾ ಸಂಘಟನೆ ಅಭಿವೃದ್ಧಿ ಹೊಂದಬೇಕಾದರೆ ಎಲ್ಲರ ಪರಿಶ್ರಮ ಅಗತ್ಯವಾಗಿದೆ. ಭಾವಸಾರ ಕ್ಷತ್ರಿಯ ಸಮಾಜದ ಅನೇಕರು ಒಂದಾಗಿ ಸಮಾಜದ ಅಭಿವೃದ್ಧಿಗಾಗಿ ಇಂತಹ ಕಾರ್ಯಕ್ರಮಗಳನ್ನು ನಡೆಸುತ್ತಿರುವುದು ಶ್ಲಾಘನೀಯ. ಸಮಾಜದ ಅಭಿವೃದ್ಧಿಗೆ ನಾನು ಸದಾ ಜೊತೆಯಲ್ಲಿರುತ್ತೇನೆ ಎಂದು ಭರವಸೆ ನೀಡಿದರು.

ಈ ವೇಳೆ ಭಾವಸಾರ ಬ್ರಿಗೇಡ್‌ನ ಸಂಸ್ಥಾಪಕ ಅಧ್ಯಕ್ಷ ನಾಗೇಶ್ ವಿ.ಬಿ. ತೇಲ್ಕರ್ ಅವರು, ಸಮುದಾಯವು ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದು, ಪ್ರತಿ ವರ್ಷ ಸಾವಿರಾರು ಬಡ ಪ್ರತಿಭಾವಂತ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ನಗರದಲ್ಲಿ ಇತರ ಸಮುದಾಯಗಳಿಗೆ ವಿದ್ಯಾರ್ಥಿನಿಲಯಗಳಿದ್ದರೂ ಭಾವಸಾರ ಕ್ಷತ್ರಿಯ ಸಮುದಾಯಕ್ಕೆ ಸ್ವಂತ ವಿದ್ಯಾರ್ಥಿನಿಲಯದ ಸೌಲಭ್ಯವಿಲ್ಲ. ಆದ್ದರಿಂದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನಿವೇಶನ ನೀಡಬೇಕು. ಜೊತೆಗೆ ಸಮುದಾಯದ ಕುಲದೇವತೆಯಾದ ಶ್ರೀಮಾತಾ ಹಿಂಗುಲಾಂಬಿಕಾ ದೇವಿಗೆ ದೇವಸ್ಥಾನ ನಿರ್ಮಿಸಲು ಜಾಗ ಮಂಜೂರು ಮಾಡಬೇಕೆಂದು ಮಾಜಿ ಸಚಿವರಿಗೆ ಮನವಿ

# ಹೂವಿನ ಕರಗ ಮಹೋತ್ಸವ ಯಶಸ್ವಿ

ಬೆಂಗಳೂರುನಗರದ ಹೊರವಲಯದ ಟಮಕ ದಲಿ ರೇಣುಕಾ



ಯಲ್ಲಮ್ಮ ದೇವಿಯ ಹೂವಿನ ಕರಗ ಮಹೋತ್ಸವವು ಭಾನುವಾರ ರಾತ್ರಿ ಅಪಾರ ಜನಸ್ತೋಮದ ಹರ್ಷೋದ್ಗಾರಗಳ ನಡುವೆ ವಿಜೃಂಭಣೆಯಿಂದ ನೆರವೇರಿತು,

ಕರಗಮಹೋತ್ಸವದಲ್ಲಿ ಕರಗದ ಪೂಜಾರಿ ರೇಣುಕಾ ಯಲ್ಲಮ್ಮ ದೇವಾಲಯದ ಮುಂಭಾಗದ ಆವರಣದಲ್ಲಿ ಮಂಗಳ ವಾದ್ಯ, ಹಲಗೆಗಳ ಲಯಬದ್ಧ ತಾಳಕ್ಕೆ ತಕ್ಕಂತೆ ನರ್ತಿಸುವ ಮೂಲಕ ಸೇರಿದ್ದ ಸಾವಿರಾರು ಜನಸ್ತೋಮ ಹರ್ಷದಲ್ಲಿ ತಲ್ಲೀನರಾಗುವಂತೆ ಮಾಡಿದರು

ಹೂವಿನ ಕರಗದೊಂದಿಗೆ ರಕ್ಷಕ ಭಟರಂತೆ ಕತ್ತಿ ಹಿಡಿದು ಸಂಚರಿಸುವ ವೀರಕುಮಾರರು ಕರಗ ನೃತ್ಯದ ವೇದಿಕೆಯ ಮೇಲೆ ಕತ್ತಿ ಝಳುಪಿಸುತ್ತಾ ನೀಡಿದ ಹಲಗು ಸೇವೆ ಜನಮಾನಸದಲ್ಲಿ ಶಾಶ್ವತವಾಗಿ ಉಳಿಯುವಂತಾಯಿತು ಗ್ರಾಮದ ವಿವಿಧ ಬೀದಿಗಳಲ್ಲಿ ಸಂಚರಿಸಿದ ಕರಗಕ್ಕೆ ಜನತೆ ಪೂಜೆ ಸಲ್ಲಿಸಿದರು ದೇವಾಲಯದ ಮುಂಭಾಗ ಅಗ್ನಿಕುಂಡ ಪ್ರವೇಶ ನಡೆಯಿತು ಕರಗ ಮಹೋತ್ಸವದ ಪ್ರಯುಕ್ತವಾಗಿ ಟಮಕ ನಗರದಾದ್ಯಂತ ವಿದ್ಯುತ್ ದೀಪ ಅಲಂಕಾರ ದಿಂದ ಕಂಗೊಳಿಸುತ್ತಿತ್ತು,

ಕರಗ ಮಹೋತ್ಸವದಲ್ಲಿ ಜೆಡಿಎಸ್ ಮುಖಂಡ ಸಿಎಂಆರ್ ಶ್ರೀನಾಥ್, ಡಾಬಾ ಶಂಕರ್, ಪಟೇಲ್ ಶ್ರೀನಿವಾಸ್, ವೆಂಕಟೇಶಪತಿ, ನಾರಾಯಣಸ್ವಾಮಿ, ಶ್ರೀನಿವಾಸ್ (ಸ್ವಾಮೀಜಿ), ಗೋವಿಂದಪ್ಪ, ಅಂಜಿನಪ್ಪ, ಸಂತೋಷ್, ಸತೀಶ್, ವೆಂಕಟರಾಜು, ದೇವರಾಜ್, ಸುಮನ್, ಆನಂದ್, ಅಕ್ಷಯ್, ರವಿ, ಯಲ್ಲಪ್ಪ, ಸಿದ್ದು, ಅಭಿ, ಮನೋಜ್ ಮುಂತಾದವರು ಇದ್ದರು.

# ಡಿ.ಸುಧಾಕರ್‌ರಿಗೆ ಭಾವಪೂರ್ಣ ಶ್ರದ್ಧಾಂಜಲಿ

ಬೆಂಗಳೂರುಭಾನುವಾರ ನಿಧನರಾದ ರಾಜ್ಯ ಸರ್ಕಾರದ ಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರಿಗೆ ಸೋಮವಾರ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸುಧಾಕರ್ ಅವರ ಚಿತ್ರಕ್ಕೆ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ, ನಗರ ನಗರ ಬ್ಲಾಕ್ ಅಧ್ಯಕ್ಷ ಸೈಯದ್ ಅಫ್ಸರ್, ಜಿಲ್ಲಾ ಎಸ್ಸಿ ಘಟಕದ ಅಧ್ಯಕ್ಷ ಎನ್ ಅಂಬರೀಷ್ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಾಂಡಹಳ್ಳಿ ಮುರಳಿ ನಾಲ್ಕು ಬಾರಿ ಶಾಸಕರಾಗಿ, ಎರಡು ಬಾರಿ ಸಚಿವರಾಗಿ ಜನಸೇವೆ ಮಾಡಿದ್ದರು. ಹತ್ತಾರು ಒಳ್ಳೆಯ ಕೆಲಸ ಮಾಡಿದ್ದರು. ಜೊತೆಗೆ 20 ವರ್ಷ ಚಿತ್ರದುರ್ಗ ಜಿಲ್ಲೆಯ ಡಿಸಿಸಿ ಬ್ಯಾಂಕ್ ಅಧ್ಯಕ್ಷರೂ ಆಗಿದ್ದರು.

ಅಂಥ ನಾಯಕರೊಬ್ಬರು ಉಸಿರಾಟದ ತೊಂದರೆಯಿಂದ ಆಸ್ಪತ್ರೆಗೆ ದಾಖಲಾಗಿದ್ದರು. ಅವರ ಅಗಲಿಕೆಯಿಂದ ಕಾಂಗ್ರೆಸ್ ಪಕ್ಷಕ್ಕೆ, ಅವರ ಅಭಿಮಾನಿಗಳಿಗೆ ತುಂಬಲಾರದ ನಷ್ಟವಾಗಿದೆ ದೇವರು ಅವರಿಗೆ ಶಾಂತಿ ಕರುಣಿಸಲಿ ಅವರ ಕುಟುಂಬಕ್ಕೆ ದುಃಖ ಎದುರಿಸುವ ಶಕ್ತಿ ನೀಡಲಿ ಎಂದರು.

ಜಿಲ್ಲಾ ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಎನ್.ಅಂಬರೀಷ್ ಮಾತನಾಡಿ ನೇರವಾದ ವ್ಯಕ್ತಿತ್ವದ ಸ್ವಾಭಿಮಾನದ ರಾಜಕಾರಣಕ್ಕೆ ಹೆಸರು ಗಳಿಸಿದ್ದರು ರಾಜ್ಯದಲ್ಲಿ ಬಿಜೆಪಿ ಪಕ್ಷವು ಉದಯವಾಗಲು ಕಾರಣವಾದರೂ ನಂತರ ದಿನಗಳಲ್ಲಿ ಕಾಂಗ್ರೆಸ್ ಸೇರ್ಪಡೆಯಾಗಿ ಕಾಂಗ್ರೆಸ್ ಪಕ್ಷಕ್ಕೆ ನಿಷ್ಠಾವಂತವಾಗಿದ್ದರು ಕೆಲವರು ಅವರ ಸಾವಿನಲ್ಲಿ ರಾಜಕಾರಣ ಮಾಡಿದ್ದಾರೆ ಅಂತಹವರಿಗೆ ದಿಕ್ಕಾರವಿರಲಿ ಯುವಕರಿಗೆ ದೊಡ್ಡ ಶಕ್ತಿಯಾಗಿ ಎರಡನೇ ಹಂತದ ನಾಯಕರನ್ನು ಗುರುತಿಸಿ ಬೆಳೆಸುವ ಕೆಲಸ ಮಾಡಿದ್ದಾರೆ ಎಂದರು

ಈ ಸಂದರ್ಭದಲ್ಲಿ ರಾಜ್ಯ ಎಸ್ಸಿ ಘಟಕದ ಸಂಚಾಲಕ ಬೆಳಗಾನಹಳ್ಳಿ ಮುನಿವೆಂಕಟಪ್ಪ, ದರಕಾಸ್ತು ಸಮಿತಿ ಸದಸ್ಯ ಖಾದ್ರಿಪುರ ಬಾಬು, ಮುಖಂಡರಾದ ಕಠಾರಿಪಾಳ್ಯ ಗಂಗಣ್ಣ, ಅಮರನಾಥ್, ಹಾರೋಹಳ್ಳಿ ರಾಜೇಶ್, ಕುಡಾ ಸದಸ್ಯರಾದ ಕಿಲಾರಿಪೇಟೆ ಮಣಿ, ಕೋಟೆ ಚಂದ್ರಶೇಖರ್, ಉಮಾಶಂಕರ್, ವೀರೇಂದ್ರ ಪಾಟೀಲ್, ಚಿನ್ನಾಪುರ ನಾರಾಯಣಸ್ವಾಮಿ, ಜಗನ್ ಜಗದೀಶ್, ಷಂಷೀರ್, ನದೀಂ, ಏಜಾಜ್, ನಯ್ಯೂಂ, ಷಫೀ, ರಫಿ, ಮುಂತಾದವರು ಇದ್ದರು,

# ಹತ್ತಿಬೆಳೆ ಹಣ ಬಿಡುಗಡೆಗೆ ಆಗ್ರಹ

ಬೆಂಗಳೂರುಹತ್ತಿ ಬೀಜ ಬೆಳೆದುಕೊಟ್ಟ ಜಿಲ್ಲೆಯ ಮಧುಗಿರಿ, ಶಿರಾ, ಪಾವಗಡ ಮತ್ತು ಕೊರಟಗೆರೆ ತಾಲೂಕುಗಳ ರೈತರಿಗೆ ಬೀಜ ಉತ್ಪಾಧನಾ ಕಂಪನಿಗಳಿಂದ ಸುಮಾರು 500 ಕೋಟಿ ರೂ ಬಾಕಿ ಬರಬೇಕಿದ್ದು, ಜಿಲ್ಲಾಡಳಿತ ಮದ್ಯ ಪ್ರವೇಶಿಸಿ ರೈತರ ಬಾಕಿ ಕೊಡಿಸುವುದರ ಜೊತೆಗೆ,ಬೀಜ ಉತ್ಪಾಧನಾ ಕಾಯ್ದೆ ಅನ್ವಯ ರೈತರೊಂದಿಗೆ ಒಪ್ಪಂದ ಮಾಡಿಕೊಳ್ಳಲು ಸೂಕ್ತ ನಿರ್ದೇಶನ ನೀಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ತುಮಕೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಸಿ.ಶಂಕರಪ್ಪ ಒತ್ತಾಯಿಸಿದ್ದಾರೆ.

ನಗರದ ವಿಜ್ಞಾನ ಕೇಂದ್ರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಅವರು,ಕಳೆದ 10–20 ವರ್ಷಗಳಿಂದ ಜಿಲ್ಲೆಯ ಸುಮಾರು 9000ಕ್ಕೂ ಹೆಚ್ಚು ರೈತರೊಂದಿಗೆ ಯಾವುದೇ ಒಪ್ಪಂದ ಮಾಡಿಕೊಳ್ಳದೆ 19000 ಎಕರೆ ಪ್ರದೇಶದಲ್ಲಿ ಹತ್ತಿ ಬೀಜ ಉತ್ಪಾಧನೆ ಮಾಡಿಸಲಾಗುತ್ತಿದೆ.ರೈತರು ತಮ್ಮ ಭೂಮಿಗಳಲ್ಲಿ ಉತ್ಪಾಧಿಸಿದ 2024ರ ಸಾಲಿನಲ್ಲಿ ಬೀಜ ನೀಡಿದ ಬಾಕಿ 52 ಕೋಟಿಯ ಜೊತೆಗೆ, 2025ರಲ್ಲಿ ಬೀಜ ಬೆಳೆದು ನೀಡಿದ 3 ತಿಂಗಳು ಕಳೆದರೂ ರೈತರಿಗೆ ನೀಡಬೇಕಾದ 500 ಕೋಟಿ ರೂ ಬಾಕಿ ನೀಡಿಲ್ಲ.ಗುಣಮಟ್ಟದ ಬಿತ್ತನೆ ಬೀಜ, ಗೊಬ್ಬರ,ಔಷಧಗಳನ್ನು ನೀಡದೆ ರೈತರನ್ನು ಶೋಷಣೆಗೆ ಒಳಪಡಿಸಲಾಗುತ್ತಿದೆ. ಹಾಗಾಗಿ ಜಿಲ್ಲಾಡಳಿತ ಮಧ್ಯ ಪ್ರವೇಶಿಸಿ ಬೀಜ ಉತ್ಪಾಧನಾ ಕಂಪನಿಗಳಿಂದ ಮೋಸ ಹೋಗಿರುವ ರೈತರಿಗೆ ನ್ಯಾಯ ಕೊಡಿಸಬೇಕು.ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದರು.

ಒಂದು ಎಕರೆಯಲ್ಲಿ ಹತ್ತಿ ಬಿತ್ತನೆ ಬೀಜ ಬೆಳೆಯಲು ಸುಮಾರು 2 ಲಕ್ಷ ರೂ ಖರ್ಚು ಬರುತ್ತದೆ.ನೆರೆ ರಾಜ್ಯಗಳಾದ ಆಂಧ್ರ, ತೆಲಂಗಾಣ, ಮಹಾರಾಷ್ಟ್ರಗಳ 22 ಬೀಜ ಉತ್ಪಾಧನಾ ಕಂಪನಿಗಳಿಗೆ ರೈತರಿಗೆ



ಒಂದಿಷ್ಟು ಮುಂಗಡ ಹಣ ನೀಡಿ,ಹತ್ತಿ ಬೀಜಗಳನ್ನು ಬೆಳೆಸಿಕೊಳ್ಳುತಿದ್ದು,ಸಂಸ್ಕರಣಾ ವೇಸ್ಟ್ ಎಂದು 100 ಕೆ.ಜಿ.ಗೆ ಬದಲಾಗಿ 107 ತೂಕ ಮಾಡುವುದಲ್ಲದೆ,45 ಕೆ.ಜಿ ಬ್ಯಾಗ್ ಮಾಡುವಾಗ 45.5 ಕೆ.ಜಿ. ತೂಗುವ ಮೂಲಕ ರೈತರನ್ನು ಶೋಷಣೆ ಮಾಡಲಾಗುತ್ತಿದೆ.ಅಲ್ಲದೆ ಬೀಜ ಕೊಂಡ ತಕ್ಷಣ ಹಣ ನೀಡುತ್ತಿಲ್ಲ. ಕಂಪನಿ ನೇರವಾಗಿ ವ್ಯವಹರಿಸದೆ ಏಜೆಂಟರ್ ಮೂಲಕ ಕೆಲಸ ನಡೆಸುತ್ತಿದೆ.

ರೈತರಿಗೆ ಗುಣಮಟ್ಟದ ಬೀಜ, ಗೊಬ್ಬರ, ಔಷಧಗಳನ್ನು ನೀಡಿಲ್ಲ. ಬೆಳೆ ನಷ್ಟವಾದರೆ ಪರಿಹಾರವಿಲ್ಲ.ಹಾಗಾಗಿ ಹತ್ತಿ ಬೀಜ ಉತ್ಪಾಧನಾ ಬೆಳೆಯನ್ನು ಫಸಲ್ ಭೀಮ ಯೋಜನೆಯ ಅಡಿಗೆ ಒಳಪಡಿಸಬೇಕು ಎಂದು ಜಿ.ಎಸ್.ಶಂಕರಪ್ಪ ಆಗ್ರಹ ಪಡಿಸಿದರು.

ಬೀಜ ಕಂಪನಿಗಳು ಹಣ ನೀಡುವುದು 2024ರಲ್ಲಿ ತಡವಾದ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಭೆ ನಡೆಸಿ, ಸಮಸ್ಯೆಯನ್ನು ಬಗೆಹರಿಸುವ ಪ್ರಯತ್ನ ನಡೆಸಲಾಗಿತ್ತು.ಈಗ ಅದೇ ರೀತಿಯ ಸಮಸ್ಯೆಗಳು ಮುಂದುವರೆದಿವೆ.ಹಾಗಾಗಿ ಜಿಲ್ಲಾಡಳಿತ ಮದ್ಯ ಪ್ರವೇಶ ಮಾಡಿ ನ್ಯಾಯ ದೊರಕಿಸಬೇಕೆಂಬುದು ನಮ್ಮ ಒತ್ತಾಯವಾಗಿದೆ.

ರೈತರಿಗೆ ಗುಣಮಟ್ಟದ ಬೀಜ ಮತ್ತು ಪೂರಕ ವಸ್ತುಗಳನ್ನು ನೀಡಬೇಕು.ಬಾಕಿ ಇರುವ ಹಣವನ್ನು ತುರ್ತಾಗಿ ರೈತರಿಗೆ ನೀಡಬೇಕು.ಹತ್ತಿ ಬೀಜ ಬೆಳೆಯನ್ನು ಫಸಲ್ ಭೀಮಾ ಯೋಜನೆಗೆ ಒಳಪಡಿಸಬೇಕು.

ಎಲ್ಲಾ ಬೀಜ ಕಂಪನಿಗಳು ಕಚೇರಿ ತೆರೆದು,ರೈತರೊಂದಿಗೆ ಒಪ್ಪಂದ ಮಾಡಿಕೊಂಡು,ಎಜೆಂಟರ ಬದಲಾಗಿ, ನೇರವಾಗಿ ರೈತರೊಂದಿಗೆ ವ್ಯವಹರಿಸಬೇಕು ಎಂದು ಜಿ.ಎಸ್.ಶಂಕರಪ್ಪ ತಿಳಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ತುಮಕೂರು ಜಿಲ್ಲಾಧ್ಯಕ್ಷರಾದ ಎ.ಗೋವಿಂದರಾಜು ಮಾತನಾಡಿ,ಹತ್ತಿ ಬೀಜ ಉತ್ಪಾಧನಾ ಕಂಪನಿಗಳು ಬೀಜೋತ್ಪಾಧನಾ ಕಾಯ್ದೆಯ ನಿಯಮಗಳನ್ನೇ ಗಾಳಿಗೆ ತೂರಿ, ರೈತರೊಂದಿಗೆ ಯಾವುದೇ ಒಡಂಬಡಿಕೆ ಮಾಡಿಕೊಳ್ಳದೆ ಬೀಜವನ್ನು ಕೊಂಡು ಹಣ ನೀಡದೆ ಸತಾಯಿಸುತ್ತಿವೆ. ಇದೊಂದು ರೀತಿ ಹಗಲು ದರೋಡೆಯಂತಿದ್ದು, ಜಿಲ್ಲಾಡಳಿತ ಗಮನಹರಿಸಿ,ಸಮಸ್ಯೆಗೆ ಪರಿಹಾರ ಒದಗಿಸಬೇಕು. ಇಲ್ಲದಿದ್ದರೆ ಹೋರಾಟ ಅನಿವಾರ್ಯ ಎಂದರು.

# ಲ್ಯಾಟರಲ್ ಎಂಟ್ರಿ ಮೂಲಕ ಡಿಪ್ಲೋಮಾ ಕೋರ್ಸ್‌ಗೆ ಅರ್ಜಿಆಹ್ವಾನ

ಬೆಂಗಳೂರುಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ ನೇರವಾಗಿ 2ನೇ ವರ್ಷದ ಡಿಪ್ಲೋಮಾ(ಡಿ.ಹೆಚ್.ಟಿ.ಟಿ.) ಕೋರ್ಸ್ ಪ್ರವೇಶಕ್ಕಾಗಿ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿ ಪ್ರಕಾರ ಪ್ರತಿ ಮಾಹೆ 2500 ರೂ.ಗಳ ಶಿಷ್ಯ ವೇತನ ಹಾಗೂ ಆಯಾ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಗಣಿತ, ಭೌತಶಾಸ್ತ್ರ ಹಾಗೂ ರಾಸಾಯನಶಾಸ್ತ್ರ ವಿಷಯದಲ್ಲಿ 10+2 ಪರೀಕ್ಷೆ/ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆ/ 10ನೇ ತರಗತಿ+2 ವರ್ಷಗಳ ಐಟಿಐ/ 10+2(2ವರ್ಷಗಳ ಐಟಿಐ) ತರಗತಿ ಉತ್ತೀರ್ಣರಾಗಿರಬೇಕು. 2026ರ ಜುಲೈ 1ಕ್ಕೆ ಅನ್ವಯಿಸುವಂತೆ 25 ವರ್ಷ ವಯೋಮಿತಿಯೊಳಗಿನ ಸಾಮಾನ್ಯ ಹಾಗೂ 27 ವರ್ಷ ವಯೋಮಿತಿಯೊಳಗಿನ ಪ.ಜಾತಿ/ಪ.ಪಂಗಡದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಹೆಚ್ಚಿನ ಮಾಹಿತಿಗೆ ಉಪನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ತುಮಕೂರು (ದೂ.ವಾ.ಸಂ. 0816–2275370, ಮೊ.ಸಂ.7022193202ಗೆ ಸಂಪರ್ಕಿಸಿ.

13/05/2026

# ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಆಧ್ಯಾತ್ಮಿಕ ಸೇವಾ ಚಟುವಟಿಕೆಗಳಿಗೆ ರೂಪುರೇಷೆ

ಬೆಂಗಳೂರುಜಾಗತಿಕ ಆಧ್ಯಾತ್ಮಿಕ ಸಂಸ್ಥೆಯಾದ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ವತಿಯಿಂದ ಬೆಂಗಳೂರು ಸಿಟಿ ಉಪವಲಯಕ್ಕೆ ಸಂಬಂಧಿಸಿದ ಸುಮಾರು 60 ಸೇವಾ ಕೇಂದ್ರಗಳ ವಾರ್ಷಿಕ ಮಹಾಸಭೆ ಹಾಗೂ ಮುಂದಿನ ಒಂದು ವರ್ಷದ ಸೇವಾ ಚಟುವಟಿಕೆಗಳ ಯೋಜನಾ ಸಭೆ ಬೆಂಗಳೂರಿನ ಚಿಕ್ಕೂರು ಸೇವಾ ಕೇಂದ್ರದಲ್ಲಿ ನಡೆಯಿತು. ಸಭೆಯು ಕರ್ನಾಟಕ-ಆಂಧ್ರ ಉಪವಲಯದ ಸಹ ಸಂಚಾಲಕರಾದ ರಾಜಯೋಗಿನಿ ಬಿ.ಕೆ. ಗೀತಾ ಬೆಹಂಜಿ ಅವರ ಸಮ್ಮುಖದಲ್ಲಿ ನೆರವೇರಿತು.

ಬೆಂಗಳೂರು ಸಿಟಿ ಉಪವಲಯದ ವಿವಿಧ ಸೇವಾ ಕೇಂದ್ರಗಳು ಕಳೆದ ಒಂದು ವರ್ಷದಲ್ಲಿ ಕೈಗೊಂಡ ಆಧ್ಯಾತ್ಮಿಕ, ಸಾಮಾಜಿಕ ಹಾಗೂ ರಾಜಯೋಗ ಧ್ಯಾನ ಕುರಿತ ಸೇವಾ ಚಟುವಟಿಕೆಗಳ ಸಮಗ್ರ ವರದಿ ಮಂಡಿಸಲಾಯಿತು. ರಾಷ್ಟ್ರೀಯ ಹಬ್ಬಗಳು, ನೈತಿಕ ಮೌಲ್ಯಗಳ ಜಾಗೃತಿ, ರಾಜಯೋಗ ಧ್ಯಾನ ಶಿಬಿರಗಳು ಹಾಗೂ ಜನರಲ್ಲಿ ಆತ್ಮಿಕ ಜ್ಞಾನದ ಪ್ರಸಾರಕ್ಕಾಗಿ ವಿವಿಧ ಕೇಂದ್ರಗಳಲ್ಲಿ ಆಯೋಜಿಸಲಾದ ಕಾರ್ಯಕ್ರಮಗಳ ಕುರಿತು ಚರ್ಚೆ ನಡೆಯಿತು.

ಈ ವೇಳೆ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ಜಕ್ಕೂರು ಸೇವಾ ಕೇಂದ್ರದ ಸಂಚಾಲಕರಾದ ರಾಜಯೋಗಿನಿ ಬಿ.ಕೆ. ಪವಿತ್ರ ಅಕ್ಕ ಅವರು ಮುಂದಿನ ಒಂದು ವರ್ಷದಲ್ಲಿ ಕೈಗೊಳ್ಳಬೇಕಾದ ವಿನೂತನ ಸೇವಾ ಯೋಜನೆಗಳು, ಶಿವ ಕಾರ್ಯಕ್ರಮಗಳು ಹಾಗೂ ಜನಸಾಮಾನ್ಯರಿಗೆ ಆಧ್ಯಾತ್ಮಿಕ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಿಸುವ ಕುರಿತು ಸಮಗ್ರ ಮಾಹಿತಿ ಪಡೆದು ಚರ್ಚೆ ನಡೆಸಿದರು.

ಸಂಸ್ಥೆಯ ಪ್ರಮುಖ ವಾರ್ಷಿಕ ಸಭೆಗಳು ಸಾಮಾನ್ಯವಾಗಿ ರಾಜಸ್ಥಾನದ ಮೌಂಟ್ ಅಬುವಿನ ಪ್ರಧಾನ ಕೇಂದ್ರದಲ್ಲಿ ನಡೆಯುತ್ತವೆ. ಅಲ್ಲಿ ಕೈಗೊಳ್ಳುವ ನಿರ್ಣಯಗಳು ಹಾಗೂ ಸೇವಾ ಕಾರ್ಯಚಟುವಟಿಕೆಗಳ ರೂಪರೇಷೆಗಳನ್ನು ಬೆಂಗಳೂರು ಸಿಟಿ ಉಪವಲಯದಲ್ಲಿಯೂ ಅನುಷ್ಠಾನಗೊಳಿಸುವ ಕುರಿತು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು.

ಜಾಗತಿಕ ಶಾಂತಿ, ರಾಜಯೋಗ ಧ್ಯಾನ, ನೈತಿಕ ಮೌಲ್ಯಗಳ ಬೆಳವಣಿಗೆ ಮತ್ತು ಆತ್ಮಿಕ ಜ್ಞಾನದ ಪ್ರಸಾರಕ್ಕೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳು, ಧ್ಯಾನ ಶಿಬಿರಗಳು ಹಾಗೂ ಜಾಗತಿಕ ಪ್ರತಿನಿಧಿಗಳ ಸಭೆಗಳನ್ನು ಆಯೋಜಿಸುವ ಕುರಿತು ಸಹ ಗಹನ ಚರ್ಚೆ ನಡೆಯಿತು.

ಸಂಸ್ಥೆಯು ಸಮುದಾಯ ಆಧಾರಿತವಲ್ಲದ ಆತ್ಮಿಕ ಬೆಳವಣಿಗೆಗೆ ಒತ್ತು ನೀಡುವ ಪ್ರಮುಖ ಚಳವಳಿಗಳಲ್ಲಿ ಒಂದಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಪರಿಣಾಮಕಾರಿ ಕಾರ್ಯಕ್ರಮಗಳನ್ನು ರೂಪಿಸುವ ಕುರಿತಾಗಿಯೂ ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ದಾಸರಹಳ್ಳಿ ಸೇವಾ ಕೇಂದ್ರದ ರಾಜಯೋಗಿನಿ ಬಿ.ಕೆ. ಸುಮಾ ಅಕ್ಕ, ಚಿಕ್ಕಬಳ್ಳಾಪುರದ ಬಿ.ಕೆ. ಲಲಿತಾ ಅಕ್ಕ, ಮಾಲೂರಿನ ಬಿ.ಕೆ. ಗೀತಾ, ಬಿ.ಕೆ. ಮಂಜಕ್ಕ ಸೇರಿದಂತೆ ವಿವಿಧ ಸೇವಾ ಕೇಂದ್ರಗಳ ಸ್ಥಾನಿಕ ಸಂಚಾಲಕರು ತಮ್ಮ ಕೇಂದ್ರಗಳಲ್ಲಿ ನಡೆದ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು. ಜೊತೆಗೆ ಮುಂದಿನ ವರ್ಷ ಕೈಗೊಳ್ಳಲಿರುವ ಸೇವಾ ಕಾರ್ಯಕ್ರಮಗಳ ಕುರಿತು ಮನನ ನಡೆಸಿದರು.

## ಕಂದುಕೊರತೆಗಳ ಸಭೆ

ಬೆಂಗಳೂರುನಗರದ ಪೊಲೀಸ್ ಠಾಣೆಯಲ್ಲಿ ವೃತ್ತ ನಿರೀಕ್ಷಕರಾದ ರಾಮಪ್ಪ ಗುತ್ತೇರ್ ಅವರ ಅಧ್ಯಕ್ಷತೆಯಲ್ಲಿ ದಲಿತ ಕಂದುಕೊರತೆಗಳ ಸಭೆ ನಡೆಯಿತು.

ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಜಿಲ್ಲಾ ಸಂಘಟನಾ ಸಂಚಾಲಕ ಎಸ್.ಎಂ.ವೆಂಕಟೇಶ್ ಮಾತನಾಡಿ ಮೇಲಿನ ದೌರ್ಜನ್ಯಗಳನ್ನು ತಡೆಯಲು ಮತ್ತು ತಕ್ಷಣದ ಕ್ರಮ ಕೈಗೊಳ್ಳಲು ಪೊಲೀಸ್ ಠಾಣಾ ಮಟ್ಟದಲ್ಲಿ ನಿಯಮಿತವಾಗಿ ಸಭೆ ಪ್ರತಿ ತಿಂಗಳು ನಡೆಸುವಂತೆ ತಿಳಿಸಿದರು. ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅಕ್ರಮವಾಗಿ ಪೆಟ್ಟಿಗೆ ಅಂಗಡಿ ದಿನಸಿ ಅಂಗಡಿಗಳಲ್ಲಿ ಮದ್ಯ ಮತ್ತು ಗಾಂಜಾ ಮಾರಾಟ ಮಾಡುತ್ತಿದ್ದು, ಶಾಲಾ ಕಾಲೇಜುಗಳ ಬಳಿ ಪುಂಡಪೋಕರಿಗಳು ವಿಲಿಂಗ್ ಮಾಡುವುದರಿಂದ ಹೆಣ್ಣು ಮಕ್ಕಳಿಗೆ ಕಿರಿಕಿರಿ ಉಂಟು ಮಾಡುವ ಬಗ್ಗೆ ಕ್ರಮ ಕೈಗೋಳಬೇಕೆಂದರು.

ಇತಿಚಿಗೆ ಜಿಲ್ಲಾ ಆಡಳಿತ ಜಿಲ್ಲಾ ಮಟ್ಟದ ದೌರ್ಜನ್ಯ ಸಮಿತಿ ಸದಸ್ಯರ ನೇಮಕಾತಿ ಮಾಡಿರು ಬಗ್ಗೆ ಅಸಮಾಧಾನ ವ್ಯಕ್ತಿಪಡಿಸಿ ಸರಕಾರ ದಲಿತರ ಸಮಸ್ಯೆ ಬಗ್ಗೆ ದಲಿತರ ಪರವಾಗಿ ದ್ವನಿ ಎತ್ತಲೀ ಎಂದು ಸದಸ್ಯರನ್ನು ನೇಮಕ ಮಾಡಲು ಸಮಿತಿ ಮಾಡಿದ್ದು ಇದರಲ್ಲಿ ರಾಜಕೀಯ ಪಕ್ಷಗಳ ಜನ ಪ್ರತಿನಿಧಿಗಳ ಹಿಂಬಾಲಕರನ್ನು ಮಾಡುವುದರಿಂದ ಅವರುಗಳು ಪಕ್ಷಗಳಿಗೆ ಸೀಮಿತರಾಗಿರುತ್ತಾರೆ. ಜಿಲ್ಲಾಡಳಿತ ಜಿಲ್ಲೆಯ ದಲಿತರ ಸಮಸ್ಯೆಗಳ ಬಗ್ಗೆ ತಿಳಿದಿರುವವರು ಹೋರಾಟಗಳು, ಪ್ರತಿನಿಭಟನೆಗಳನ್ನು ಎದುರಿಸಿ ಸಮಸ್ಯೆಗಳನ್ನು ಆಲಿಸಿರುವಂತಹವರನ್ನು ನೇಮಕ ಮಾಡಬೇಕಾಗಿತ್ತು, ಆದರೆ ಇದುವರೆಗೂ ಯಾವುದೇ ಸಂಘಟನೆಗಳಲ್ಲಿ ಕಾಣಿಸಿಕೊಳ್ಳದೆ ಇದ್ದು, ದಲಿತ ಸಮಸ್ಯೆಗಳು ಅವರಿಗೆ ಹೇಗೆ ಗೊತ್ತಾಗುತ್ತದೆ ಎಂದು, ತಾಲ್ಲೂಕಿನಲ್ಲಿ ಹೋರಾಟಗಳಲ್ಲಿ ದಲಿತ ಸಮಸ್ಯೆಗಳ ಬಗ್ಗೆ ಲಾಠಿ ಏಟು ತಿಂದವರು ಎಷ್ಟೋಜನ ದಲಿತ ಮುಖಮಡರು ಇದ್ದು ಅವರನ್ನು ಗುರ್ತಿಸದೆ ಏಕಾಏಕಿ ಪಕ್ಷಕ್ಕೆ ಸೀಮಿತವಾಗಿರುವ ವ್ಯಕ್ತಿಯನ್ನು ಆಯ್ಕೆ ಮಾಡಿರುವ ಬಗ್ಗೆ ಕಾನೂನು ಮೊರೆ ಹೋಗುವುದಾಗಿ ಇದರ ಬಗ್ಗೆ ರಾಮಪ್ಪ ಗುತ್ತರ್ ಅವರು ಜಿಲ್ಲಾಡಳಿತಕ್ಕೆ ಪತ್ರದ ಮೂಲಕ ತಿಳಿಸುವಂತೆ ಒತ್ತಾಯಿಸಿದರು. ತಾಲ್ಲೂಕಿನಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವವರ ಸಂಖ್ಯೆ ಹೆಚ್ಚಾಗಿದ್ದು, ಕೆಲವು ಭಾಗಗಳಲ್ಲಿ ಬೆಳಗ್ಗೆ 7 ಗಂಟೆಯಿಂದ ಬಾರ್ ತೆಗೆಯುತ್ತಿದ್ದು, ಡಾಬಾಗಳಲ್ಲಿ ಮದ್ಯ ಮಾರಾಟ ಮಾಡುತ್ತಿದ್ದು, ಡಾಬ ಮಾಲೀಕರು ಯಾವುದೇ ಅನುಮತಿಯಿಲ್ಲದೆ ಆಹಾರ ಇಲಾಖೆಯ ವತಿಯಿಂದ ಅನುಮತಿ ಪಡೆಯದೆ, ಕಳಪೆಗುಣಮಟ್ಟದ ಆಹಾರವನ್ನು ಮಾಡಿ ಮಾರಾಟ ಮಾಡುತ್ತಿದ್ದು ಇದರಿಂದ ಜನ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ, ಈ ಬಗ್ಗೆ ಸಂಭಂಧಪಟ್ಟವರು ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಪೊಲೀಸ್ ಠಾಣೆಯ ವೃತ್ತ ನಿರೀಕ್ಷಕರಾದ ರಾಮಪ್ಪ ಗುತ್ತೇರ್ ಅವರು ಮಾತನಾಡಿ, ನಾನು ಮಾಲೂರು ಠಾಣೆಗೆ ಬಂದ 8 ತಿಂಗಳಲ್ಲಿ ಯಾವುದೇ ದಲಿತ ದೌರ್ಜನ್ಯ ಪ್ರಕರಣಗಳು ಕಡಿಮೆ ಮಾಡಿದ್ದು, ತಾಲ್ಲೂಕಿನಲ್ಲಿ ಗಾಂಜಾ, ಜೂಜು ಅಡ್ಡೆ, ವೇಶ್ಯಾವಟಿಕೆ ಬಗ್ಗೆ ಜಾಲಾಡಿ ಹಂತ ಹಂತವಾಗಿ ಗಾಂಜಾ ಮುಕ್ತ ನಗರವನ್ನಾಗಿ ಮಾಡಲು ಮುಂದಾಗಿದ್ದರಿಂದ ದಲಿತ ಕುಂದು ಕೊರತೆಗಳ ತಡವಾಗಿದೆ. ಮುಂದಿನ ದಿನಗಳಲ್ಲಿ ಪ್ರತಿತಿಂಗಳು ಸಭೆ ನಡೆಸಿ ಏನೆ ಸಮಸ್ಯೆಗಳಿದ್ದರು ಮಧ್ಯವರ್ತಿಗಳ ಹಾವಳಿಯಿಲ್ಲದೆ ನೇರವಾಗಿ ತಿಳಿಸಿದರೆ. ಸಮಸ್ಯೆಗಳನ್ನು ಬಗೆ ಹರಿಸುವುದಾಗಿ ತಿಳಿಸಿದರು. ಗ್ರಾಮಗಳಲ್ಲಿ ಮದ್ಯ ಗಾಂಜಾ ಮಾರಾಟದ ಬಗ್ಗೆ ತಿಳಿದುಬಂದಲ್ಲಿ ನೇರವಾಗಿ ಬಂದು ತಿಳಿಸಿದಲ್ಲಿ ಅಂತಹವರ ಹೆಸರು ಗೌಪ್ಯವಾಗಿಟ್ಟು, ಕಾನೂನು ಕ್ರಮಕೈಗೊಳ್ಳುವುದು ಮಾಲೂರು ತಾಲ್ಲೂಕಿನಲ್ಲಿ ಕೈಗಾರಿಕಾ ಪ್ರದೇಶ ಹೆಚ್ಚಾಗಿರುವುದರಿಂದ ಹಿಂದಿ ಮಾತನಾಡುವವರಿಗೆ ಬಾಡಿಗೆ ಮನೆಗಳನ್ನು ನೀಡುವಾಗಿ ಮನೆಯ ಮಾಲೀಕರು ಆಧಾರ ಕಾರ್ಡ್ ಪರಿಶೀಲನೆ ಮಾಡಬೇಕು ಇಂತಹವರಿಂದ ಗಾಂಜಾ ಸರಬರಾಜು ಆಗುತ್ತಿದ್ದು, ನಮ್ಮ

## 15ರಂದು ನೇರ ಸಂದರ್ಶನ

ರಾಮನಗರ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಇದೇ ಮೇ. 15ರ ಶುಕ್ರವಾರ ಹಮ್ಮಿಕೊಳ್ಳಲಾಗಿರುವ ಉಚಿತ ನೇರ ಸಂದರ್ಶನ ಕಾರ್ಯಕ್ರಮದಲ್ಲಿ ಪಿರಮಲ್ ಫೈನಾನ್ಸ್ ಖಾಸಗಿ ಸಂಸ್ಥೆಯವರು ಭಾಗವಹಿಸುತ್ತಿದ್ದಾರೆ. ಅವರು ಉದ್ಯೋಗಾಂಕ್ಷಿಗಳನ್ನು ನೇಮಕ ಮಾಡಿಕೊಳ್ಳಲಿರುವುದರಿಂದ ಖಾಸಗಿ ವಲಯದಲ್ಲಿನ ಉದ್ಯೋಗಕ್ಕೆ ಆಸಕ್ತರಿರುವ ಪಿಯುಸಿ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆ/ರೆಸ್ಯೂಮ್ (ಬಯೋಡೇಟಾ), ಡಿಎಲ್ ಹಾಗೂ ಎಲ್ಎಲ್ಆರ್ ಇತ್ಯಾದಿ ದಾಖಲೆಗಳೊಂದಿಗೆ ಮೇ 15ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಎರಡನೇ ಮಹಡಿ ಮಾತಾಜಿ ಎಲೆಕ್ಟ್ರಿಕ್ ಕಲ್ಲಹಳ್ಳಿ, ಕನಕಪುರ, ಇಲ್ಲಿ ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗೆ ದೂ.ಸಂಖ್ಯೆ 9901805072 ಅಥವಾ 9964784178 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಣಬಿಸಿಲಿನಲ್ಲಿ ವಾನರಗಳಿಗೆ ಆಹಾರ: ಪರಿಸರ ವೇದಿಕೆ ಮಾನವೀಯ ಕಾರ್ಯ

ಬೆಂಗಳೂರುತೀವ್ರ ಬಿಸಿಲಿನ ಬೇಗೆಗೆ ಬಸವಳಿದ ಪ್ರಾಣಿ ಸಂಕುಲಗಳಿಗೆ ನೆರವಾಗುವ ಉದ್ದೇಶದಿಂದ ಗುಡಿಬಂಡೆ ಕಣಿವೆ ಪ್ರದೇಶದಲ್ಲಿ ಪರಿಸರ ವೇದಿಕೆ ಹಾಗೂ ಮಹಿಳಾ ಮಂಡಳಿ ವತಿಯಿಂದ ವಾನರಗಳಿಗೆ ಬನ್ನು ಮತ್ತು ಬಾಳೆಹಣ್ಣುಗಳನ್ನು ನೀಡಿ ಹಸಿವು-ದಾಹ ನೀಗಿಸುವ ಕಾರ್ಯ ನಡೆಯಿತು.

ಬೇಸಿಗೆಯ ಉಷ್ಣತೆಯಿಂದ ಕಣಿವೆ ಪ್ರದೇಶಗಳು ಹಾಗೂ ಬೆಟ್ಟಗುಡ್ಡಗಳಲ್ಲಿನ ಮರಗಳು ಒಣಗಿ ಹೋಗಿದ್ದು, ಅನೇಕ ಕಡೆಗಳಲ್ಲಿ ಪ್ರಾಣಿ ಪಕ್ಷಿಗಳಿಗೆ ನೀರು ಹಾಗೂ ಆಹಾರ ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹ ಸಂದರ್ಭಗಳಲ್ಲಿ ವಿವಿಧ ಸಂಘ-ಸಂಸ್ಥೆಗಳು ಪ್ರಾಣಿ ಪಕ್ಷಿಗಳಿಗೆ ಆಹಾರ ಮತ್ತು ನೀರು ಒದಗಿಸುವ ಮೂಲಕ



ಮಾನವೀಯತೆ ಮೆರೆದಿರುವ ದೃಶ್ಯಗಳು ಕಂಡು ಬರುತ್ತಿವೆ.

ಈ ಸಂದರ್ಭದಲ್ಲಿ ಪರಿಸರ ವೇದಿಕೆಯ ಅಧ್ಯಕ್ಷ ಡಾ. ಗುಂಪುಮರದ ಆನಂದ್ ಮಾತನಾಡಿ, ಜಿಲ್ಲೆಯ ಗುಡಿಬಂಡೆ ಸೇರಿದಂತೆ ಬಹುತೇಕ ಪ್ರದೇಶಗಳಲ್ಲಿ ಬಿಸಿಲಿನ ತಾಪಮಾನ ಹೆಚ್ಚಾಗಿ ಪ್ರಾಣಿ ಪಕ್ಷಿಗಳಿಗೆ ಆಹಾರ ಮತ್ತು ನೀರಿನ ಕೊರತೆ ಉಂಟಾಗಿದೆ. ಈ ಹಿನ್ನೆಲೆ ಮಹಿಳಾ ಮಂಡಳಿ ಹಾಗೂ ಪರಿಸರ ವೇದಿಕೆ ವತಿಯಿಂದ ಮಂಗಗಳಿಗೆ ಬನ್ನು ಹಾಗೂ ಬಾಳೆಹಣ್ಣುಗಳನ್ನು ನೀಡಲಾಗುತ್ತಿದೆ ಎಂದು ಹೇಳಿದರು.

ಬಿಸಿಲಿನ ತಾಪಕ್ಕೆ ತಾಳಲಾರದೆ ಅನೇಕ ಪ್ರಾಣಿ ಪಕ್ಷಿಗಳು ನೀರು ಹಾಗೂ ಆಹಾರವಿಲ್ಲದೆ ವಿಲವಿಲ ಒದ್ದಾಡುತ್ತಿದ್ದು, ಪ್ರತಿಯೊಬ್ಬರೂ ತಮ್ಮ ಮನೆಗಳ ಮಹಡಿಗಳ ಮೇಲೆ ಅಕ್ಕಿ ಮತ್ತು ನೀರನ್ನು ಇಡುವ ಮೂಲಕ ಪ್ರಾಣಿ ಪಕ್ಷಿಗಳನ್ನು ರಕ್ಷಿಸಬೇಕು ಎಂದು ಮನವಿ ಮಾಡಿದರು. ಜೊತೆಗೆ ಗಿಡಮರಗಳನ್ನು ಬೆಳೆಸಿ ಪ್ರಾಣಿ ಪಕ್ಷಿಗಳಿಗೆ ಆಶ್ರಯ ಒದಗಿಸುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದರು.

ಮಹಿಳಾ ಮಂಡಳಿಯ ಅಧ್ಯಕ್ಷೆ ರತ್ನಮ್ಮ ಮಾತನಾಡಿ, ಎಲ್ಲಾ ಸೌಲಭ್ಯಗಳಿರುವ ಮನುಷ್ಯರೇ ಬಿಸಿಲಿಗೆ ತತ್ತರಿಸುತ್ತಿರುವಾಗ ಕಾಡು ಪ್ರದೇಶಗಳಲ್ಲಿನ ಪ್ರಾಣಿ ಸಂಕುಲಗಳ ಸ್ಥಿತಿ ಇನ್ನಷ್ಟು ದುಸ್ತರವಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ಸಾಧ್ಯವಾದಷ್ಟು ಆಹಾರ ಮತ್ತು ನೀರನ್ನು ಒದಗಿಸಿ ದಯೆ ಹಾಗೂ ಕರುಣೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಪರಿಸರ ವೇದಿಕೆಯ ನಿತಿನ್ ಸಿಂಗ್ ಮಾತನಾಡಿ, ಪರಿಸರ ವೇದಿಕೆ ವತಿಯಿಂದ ಪ್ರತಿ ವರ್ಷ ವಿವಿಧ ಪರಿಸರಪರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಮೂಕ ಪ್ರಾಣಿಗಳಿಗೆ ಆಹಾರ ಮತ್ತು ನೀರು ಒದಗಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಮಹಿಳಾ ಮಂಡಳಿಯ ಕಾರ್ಯದರ್ಶಿ ಮಂಜುಳಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜನಮನ ಸೆಳೆದ ಚಿಟ್ನಹಳ್ಳಿಯ ಹೂವಿನ ಕರಗ ಮಹೋತ್ಸವ

ಬೆಂಗಳೂರುತಾಲ್ಲೂಕಿನ ಚಿಟ್ನಹಳ್ಳಿಯ ಶ್ರೀ ಧರ್ಮರಾಯ ಸ್ವಾಮಿ ಹೂವಿನ ಕರಗ ಕಳೆದ ರಾತ್ರಿ ಅಪಾರ ಜನಸ್ತೋಮದ ಹರ್ಷೋದ್ಗಾರಗಳ ನಡುವೆ ವಿಜೃಂಭಣೆಯಿಂದ ನೆರವೇರಿತು. ಕಳೆದ ಐದು ವರ್ಷಗಳಿಂದ ಆರಂಭಿಸಿರುವ ಕರಗಮಹೋತ್ಸವದಲ್ಲಿ ಕರಗದ ಪೂಜಾರಿ ಕಾಕಿನತ್ತ ಬಾಲರಾಜ್ ಐದನೇ ಬಾರಿ ದೇವಾಲಯದ ಮುಂಭಾಗದ ಆವರಣದಲ್ಲಿ ಮಂಗಳ ವಾದ್ಯ, ಹಲಗೆಗಳ ಲಯಬದ್ಧ ತಾಳಕ್ಕೆ ತಕ್ಕಂತೆ ನರ್ತಿಸುವ ಮೂಲಕ ಸೇರಿದ್ದ ಬೃಹತ್ ಜನಸ್ತೋಮ ಹರ್ಷದಲ್ಲಿ ತಲ್ಲೀನರಾಗುವಂತೆ ಮಾಡಿದರು.

ವೀರ ಕುಮಾರರ ಗೋವಿಂದಾ ಗೋವಿಂದಾ ಉದ್ಗಾರಗಳ ನಡುವೆ ಕರಗ ನೃತ್ಯಕ್ಕೆ ಜನರ ಶಿಳ್ಳೆ ಮತ್ತು ಜೈಕಾರಗಳ ಕರತಾಡನ ಮುಗಿಲು ಮುಟ್ಟಿತ್ತು.

ಕರಗದ ಪೂಜಾರಿ ಬಾಲರಾಜು ತಮ್ಮ ಅನುಭವವನ್ನು ಕೃತಿಗಿಳಿಸಿ ನೃತ್ಯಕ್ಕೆ ಹೆಜ್ಜೆ ಹಾಕುತ್ತಿದ್ದಂತೆ ವಿದ್ಯುತ್ ದೀಪಾಲಂಕಾರಗಳಿಂದ ಕಂಗೊಳಿಸಿದ್ದ ಇಡೀ ಕಾರಂಜಿಕಟ್ಟೆ ಬಡಾವಣೆ ಅವಿಸ್ಮರಣೀಯ ಅನುಭವದಲ್ಲಿ ಮುಳುಗಿ ಹೋಯಿತು. ಚಿಟ್ನಹಳ್ಳಿ ಗ್ರಾಮದ ತಿಗಳ ಜನಾಂಗ ಕರಗವನ್ನು ಅತ್ಯಂತ ಸಾಂಪ್ರದಾಯಿಕವಾಗಿ ಭಕ್ತಿಯಿಂದ ನಡೆಸಿಕೊಂಡು ಬಂದಿದ್ದು, ಇವರು ಮಾತ್ರವಲ್ಲದೇ ಸಮಾಜದ ಅನೇಕ ಮಂದಿ ಕರಗಕ್ಕೆ ಪೂಜೆ ಸಲ್ಲಿಸಿ ನಮಿಸಿ ಭಕ್ತಿ ಪ್ರದರ್ಶಿಸಿದರು.

ಹೂವಿನ ಕರಗದೊಂದಿಗೆ ರಕ್ಷಕ ಭಟರಂತೆ



ಕತ್ತಿ ಹಿಡಿದು ಸಂಚರಿಸುವ ವೀರಕುಮಾರರು ಕರಗ ನೃತ್ಯದ ವೇದಿಕೆಯ ಮೇಲೆ ಕತ್ತಿ ಝುಳುಪಿಸುತ್ತಾ ನೀಡಿದ ಹಲಗು ಸೇವೆ ಜನಮಾನಸದಲ್ಲಿ ಶಾಶ್ವತವಾಗಿ ಉಳಿಯುವಂತಾಯಿತು.

ಗ್ರಾಮದ ವಿವಿಧ ಬೀದಿಗಳಲ್ಲಿ ಸಂಚರಿಸಿದ ಕರಗಕ್ಕೆ ಜನತೆ ಪೂಜೆ ಸಲ್ಲಿಸಿದರು. ಇದಾದ ನಂತರ ಶನಿವಾರ ಮಧ್ಯಾಹ್ನ ದೇವಾಲಯದ ಮುಂಭಾಗ ಅಗ್ನಿಕುಂಡ ಪ್ರವೇಶ ನಡೆಯಿತು.

ಇದೇ ಸಂದರ್ಭದಲ್ಲಿ ಗ್ರಾಮದಲ್ಲಿ ಅಷ್ಟಮೂರ್ತಮ್ಮ, ದ್ರೌಪತಮ್ಮ, ಧರ್ಮರಾಯಸ್ವಾಮಿ, ವೇಣುಗೋಪಾಲಸ್ವಾಮಿ, ಆಂಜನೇಯಸ್ವಾಮಿ, ರೇಣುಕಾಯಲ್ಲಮ್ಮ ದೇವರುಗಳ ಪುಷ್ಪಪಲ್ಲಕ್ಕಿ ಉತ್ಸವವೂ ನಡೆಯಿತು. ಭಾರತ ಪಠಣವನ್ನು ಪೂಜಾರಿ ವೇಮಗಲ್ ನಾರಾಯಣಸ್ವಾಮಿ ನಡೆಸಿಕೊಟ್ಟಿದ್ದು, ಕರಗ ಮಹೋತ್ಸವದಲ್ಲಿ ಶಾಸಕ ಜಿ.ಕೆ.ವೆಂಕಟಶಿವಾರೆಡ್ಡಿ, ಮಟ್ನಹಳ್ಳಿ ಎಳ್ಳೇಗೌಡ, ಭೇಟಿ ನೀಡಿದ್ದು, ಗ್ರಾಮದ ಗೌಡ ಸಿ.ಎಂ.ನಾಗರಾಜ್, ಸಿ.ಚಂದ್ರು, ಸಿ.ಎನ್. ಮುನಿಯಪ್ಪ, ಸಿ.ಎನ್.ಸುಬ್ರಮಣಿ, ಚೌಡರೆಡ್ಡಿ, ಸಿ.ಎನ್.ಮುನಿವೆಂಕಟರೆಡ್ಡಿ, ಆಂಜಿನಪ್ಪ, ಸಿ.ಇ.ನಾರಾಯಣಸ್ವಾಮಿ, ಯಜಮಾನ್ ಮುರುಗೇಶ್, ಕೃಷ್ಣಪ್ಪ, ಚಂದ್ರು, ಮಂಜುನಾಥ್, ನಾರಾಯಣಸ್ವಾಮಿ, ಕೋಲ್ಕಾರ್‌ಬಾಬು, ಸಿ.ವಿ.ಸೋಮೇಶ್, ಸುರೇಶ್, ರಾಮಚಂದ್ರ, ರಾಧಾಕೃಷ್ಣ, ಸಿ.ವಿ.ಸೋಮೇಶ್, ಪುರುಷೋತ್ತಮ್ ಮತ್ತಿತರರಿದ್ದರು.

## "ಅಕ್ಕ ಮಾಡಿದ ಅಕ್ಕರೆಯ ತಿನಿಸುಗಳು"ಗೆ ಭಾರಿ ಮೆಚ್ಚುಗೆ

ಬೆಂಗಳೂರುಜಿಲ್ಲೆಯ ಸಂಜೀವಿನಿ-ಡೇ-ಎನ್.ಆರ್.ಎಲ್.ಎಂ ಯೋಜನೆಯಡಿ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ವಿವಿಧ ತರಬೇತಿಗಳನ್ನು ನೀಡಿ ಸ್ವ-ಉದ್ಯಮಗಳಲ್ಲಿ ತೊಡಗಿಸಿಕೊಳ್ಳಲು ಉತ್ತೇಜನ ನೀಡಲಾಗುತ್ತಿದೆ. ಇದರ ಫಲವಾಗಿ ಗ್ರಾಮೀಣ ಮಹಿಳೆಯರು ತಯಾರಿಸಿದ ಸ್ಥಳೀಯ ಉತ್ಪನ್ನಗಳನ್ನು ಒಳಗೊಂಡ "ಅಕ್ಕ ಮಾಡಿದ ಅಕ್ಕರೆಯ ತಿನಿಸುಗಳು" ಎಂಬ ಹೆಸರಿನ ಉಡುಗೊರೆ ಬಾಕ್ಸ್ ಹಾಗೂ ಬುಟ್ಟಿಗಳನ್ನು ಪರಿಚಯಿಸಲಾಗಿದೆ.

ಈ ಉಡುಗೊರೆ ಪ್ಯಾಕ್‌ಗಳಲ್ಲಿ ಅತ್ಯುತ್ತಮ ಗುಣಮಟ್ಟದ ಹಾಗೂ ಶುಚಿಯಾಗಿ ಪ್ಯಾಕ್ ಮಾಡಲಾದ ಮಸಾಲೆ ಗೋಡಂಬಿ, ಚಿಂತಾಮಣಿಯ ಮಸಾಲೆ ಕಡಲೆಬೀಜ, ನುಗ್ಗೆ ಸೊಪ್ಪಿನ ವಿಕ್ಸರ್, ಪೆರೇಸಂದ್ರ ಚಕ್ಕುಲಿ, ಬೆಲ್ಲದ ಕೊಬ್ಬರಿ ಮಿಠಾಯಿ, ರಾಗಿ ಹಾಗೂ ನವಣೆ ಮುರುಕು, ಗುಲ್ಕನ್, ಬೇಲದಹಣ್ಣಿನ ತಿರುಳು, ಮಸಾಲೆ ಮಖಾನಾ, ಚಿಕ್ಕಿ, ರಾಗಿ ಲಡ್ಡು ಸೇರಿದಂತೆ ವಿವಿಧ ಸಿಹಿ ಹಾಗೂ ಖಾರದ ತಿನಿಸುಗಳನ್ನು ಆಕರ್ಷಕವಾಗಿ ಸಿದ್ಧಪಡಿಸಲಾಗಿದೆ.

ಸರ್ಕಾರದ ವಿವಿಧ ಕಾರ್ಯಕ್ರಮಗಳು, ಗಣ್ಯರ ಹುಟ್ಟುಹಬ್ಬದ ಶುಭಾಶಯ, ಅತಿಥಿ ಸತ್ಕಾರ ಹಾಗೂ ಸನ್ಮಾನ ಕಾರ್ಯಕ್ರಮಗಳಿಗೆ ಈ ಉಡುಗೊರೆ ಬಾಕ್ಸ್‌ಗಳನ್ನು ಸಕಾಲದಲ್ಲಿ ತಲುಪಿಸಲು ಮಹಿಳಾ ಸ್ವ-ಸಹಾಯ ಗುಂಪಿನ ಸದಸ್ಯರು ಆಸಕ್ತಿ ತೋರಿದ್ದಾರೆ.

ಜಿಲ್ಲೆಯಲ್ಲೇ ಲಭ್ಯವಿರುವ ಮೂಲ ಸಾಮಗ್ರಿಗಳನ್ನು ಬಳಸಿಕೊಂಡು ಗ್ರಾಮೀಣ ಮಹಿಳೆಯರು ಪ್ರೀತಿಯಿಂದ ಸಿದ್ಧಪಡಿಸಿರುವ ಈ ತಿನಿಸುಗಳಿಗೆ ಹೆಚ್ಚಿನ ಪ್ರಚಾರ ಹಾಗೂ ಮಾರುಕಟ್ಟೆ ಒದಗಿಸುವುದರಿಂದ ಮಹಿಳೆಯರ ಆರ್ಥಿಕ ಚೈತನ್ಯ ಹೆಚ್ಚಲಿದೆ ಎಂದು ತಿಳಿಸಲಾಗಿದೆ.

ಈ ಸಂಬಂಧ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್ ಪ್ರಕಟಣೆ ನೀಡಿ, ವಿವಿಧ ಸರ್ಕಾರಿ ಕಾರ್ಯಕ್ರಮಗಳು, ಅತಿಥಿ ಸತ್ಕಾರ ಹಾಗೂ ಶುಭಾಶಯ ಸಂದರ್ಭಗಳಲ್ಲಿ ಮಹಿಳಾ ಸ್ವ-ಸಹಾಯ ಗುಂಪುಗಳಿಂದ ತಯಾರಿಸಲಾದ "ಅಕ್ಕ ಮಾಡಿದ ಅಕ್ಕರೆಯ ತಿನಿಸುಗಳು" ಉಡುಗೊರೆ ಬಾಕ್ಸ್‌ಗಳನ್ನು ಖರೀದಿಸಿ ಬಳಕೆ ಮಾಡುವ ಮೂಲಕ ಗ್ರಾಮೀಣ ಮಹಿಳೆಯರ ಉತ್ಪಾದನಾ ಚಟುವಟಿಕೆಗಳಿಗೆ ಉತ್ತೇಜನ ನೀಡಬೇಕು ಎಂದು ಮನವಿ ಮಾಡಿದ್ದಾರೆ.

## ತಿಪಟೂರು ಕೊಬ್ಬರಿ ಬೆಲೆ ಮತ್ತೆ ನಾಗಾಲೋಟದಲ್ಲಿ ಹೆಚ್ಚಳ

ಬೆಂಗಳೂರುತೆಂಗು ಕೃಷಿಗೆ ಹೆಸರುವಾಸಿಯಾಗಿರುವ ಕಲ್ಪತರು ನಾಡು ತುಮಕೂರು ಜಿಲ್ಲೆ ವ್ಯಾಪ್ತಿಯ ವಿವಿಧ ಎಪಿಎಂಸಿ ಮಾರುಕಟ್ಟೆಗಳಲ್ಲಿ ಕೊಬ್ಬರಿ ದರ ಏರಿಳಿತ ಮುಂದುವರಿದಿದೆ. ಏಪ್ರಿಲ್ ಮೊದಲ ವಾರದಿಂದ ನಿರಂತರವಾಗಿ ಏರಿಕೆ ಕಂಡಿದ್ದ ತಿಪಟೂರು ಉಂಡೆ ಕೊಬ್ಬರಿ ಬೆಲೆ ಕೆಲವು ದಿನ ಇಳಿಕೆ ಕಂಡಿತ್ತು. ಇದೀಗ ಮತ್ತೆ ಗರಿಷ್ಠ ಬೆಲೆಯಲ್ಲಿ ಮಾರಾಟವಾಗಿದೆ. ಮೇ 7ರಂದು ವಿವಿಧ ಮಾರುಕಟ್ಟೆಗಳಲ್ಲಿ ಎಷ್ಟಿದೆ ದರ, ಇಲ್ಲಿದೆ ಮಾಹಿತಿ

ತಿಪಟೂರು ಎಪಿಎಂಸಿ ಮಾರುಕಟ್ಟೆಗೆ ಸಣ್ಣ ಮತ್ತು ದೊಡ್ಡ ರೈತರು ಕೊಬ್ಬರಿ ಸರಬರಾಜು ಮುಂದುವರಿಸಿದ್ದಾರೆ. ಉತ್ತಮ ಬೆಲೆ ಹಿನ್ನೆಲೆ ಕೊಬ್ಬರಿ ಮಾರಾಟ ಭರಾಟೆ ಜೋರಾಗಿದೆ.ಗುರುವಾರ (ಮೇ 7) ರಂದು ಕೊಬ್ಬರಿ ದರ ನಾಗಾಲೋಟದಲ್ಲಿ ಏರಿದೆ. ಪ್ರತಿ ಕ್ವಿಂಟಾಲ್ ಕೊಬ್ಬರಿಗೆ 38,000 ರೂಪಾಯಿಗೆ ಮಾರಾಟವಾಗಿದೆ. ಕನಿಷ್ಠ 32, 500 ರೂಪಾಯಿ ಆಗಿದ್ದು, ಸರಾಸರಿ ದರ 36,711 ರೂಪಾಯಿ ಎಂದು ಎಪಿಎಂಸಿ ವರ್ತಕರು ತಿಳಿಸಿದ್ದಾರೆ.

ಏಪ್ರಿಲ್ ಮೊದಲ ವಾರದಿಂದ ಏರುಗತಿ ಇಂದಿನ ಕನಿಷ್ಠ ದರವು ಸಹ ರೈತರಿಗೆ ಲಾಭದಾಯಕ ಬೆಲೆಯೇ ಆಗಿದೆ. ಏಪ್ರಿಲ್



ಮೊದಲ ವಾರದಲ್ಲಿ 28,000 ರೂ.ನಿಂದ 30,000 ರಿಂದ 31,860 ರೂಪಾಯಿಗೆ ಏರಿಕೆ ಕಂಡಿದ್ದ ಕೊಬ್ಬರಿ ದರ ಅಲ್ಲಿಂದ ನಿರಂತರವಾಗಿ ಹೆಚ್ಚುತ್ತಲೇ ಬಂತು. ಈ ಮೂಲಕ ಕೊಬ್ಬರಿ ಬೆಳೆಗಾರರಿಗೆ ಬಂಪರ್ ಲಾಭ ಮಾಡಿಕೊಟ್ಟಿತ್ತು.

ಕೆಲವು ದಿನ ಕೊಬ್ಬರಿ ದರ ಕುಸಿತ

ಏಪ್ರಿಲ್ 22ರಂದು ಪ್ರತಿ ಕ್ವಿಂಟಾಲ್ ಕೊಬ್ಬರಿ ಬೆಲೆ 38,000 ರೂಪಾಯಿ ಇತ್ತು. ಅದಾದ ಬಳಿಕ ಕೊಂಚ ದರ ಇಳಿಕೆ ಕಂಡಿತು. ಏಪ್ರಿಲ್ 23 ರಿಂದ ಒಂದೆರಡು ದಿನ 35,000 ಆಸುಪಾಸಿಗೆ ಇಳಿಕೆ ಆಗುವ ಮೂಲಕ ರೈತರಲ್ಲಿ ಆತಂಕ ಮೂಡಿಸಿತ್ತು. ದರ ಇಳಿಕೆಯಲ್ಲಿ ವರ್ತಕರ ಕೈವಾಡ ಇದೆ. ಹೆಚ್ಚಿನ ಲಾಭ ತಾವು ಮಾಡಿಕೊಳ್ಳಲು ಮುಂದಾಗಿದ್ದರಿಂದ ಬೆಲೆ ಇಳಿಕೆ ಆಗಿತ್ತು ಎಂಬ ಆರೋಪ ಸಹ ಇದೆ. ಇದೀಗ ಮೇ ಮೊದಲ ವಾರ ತಿಪಟೂರು ಕೊಬ್ಬರಿಯು ಮತ್ತೆ ಐತಿಹಾಸಿಕ ದಾಖಲೆ ಬೆಲೆಗೆ ಮಾರಾಟವಾಗುತ್ತಿದೆ.

ತಿಪಟೂರು ಕೊಬ್ಬರಿ ರುಚಿ ಹೆಚ್ಚು

ತಿಪಟೂರು ಹಾಗೂ ತುಮಕೂರು ವ್ಯಾಪ್ತಿಯಲ್ಲಿ ಬೆಳೆದ ಕೊಬ್ಬರಿಯು ದಪ್ಪ ಬರುತ್ತದೆ. ಗುಣಮಟ್ಟದ್ದಾಗಿರುತ್ತದೆ. ಎಣ್ಣೆ ಅಂಶ ಹೆಚ್ಚಿರುವ ಕಾರಣ ರುಚಿ ಹೆಚ್ಚಿರುತ್ತದೆ. ಈ ಕಾರಣಕ್ಕೆ ದಕ್ಷಿಣ ಭಾರತ ಪ್ರದೇಶಗಳು ಹಾಗೂ ಉತ್ತರ ಭಾರತದ ರಾಜ್ಯಗಳಲ್ಲಿ ಹೆಚ್ಚಾಗಿ ಬಳಕೆ ಮಾಡಲಾಗುತ್ತದೆ. ಈ ಬಾರಿ ವಿವಿಧ ಕಾರಣಗಳಿಂದಾಗಿ ತೆಂಗು ಉತ್ಪಾದನೆಯಲ್ಲಿ ಕೊಂಚ ಇಳಿಕೆ ಆಗಿದ್ದರಿಂದ ಪೂರೈಕೆ ಕುಸಿಯುತ್ತಿದ್ದಂತೆ ಬೇಡಿಕೆ ಹೆಚ್ಚಾಗಿಯಿತು. ಅದರ ಹಿಂದಯೇ ಬೆಲೆಯು ಏರಿತು. ಇದರಿಂದಾಗಿ ಕೊಬ್ಬರಿಗೆ ಗರಿಷ್ಠ ಬೆಲೆ ಸಿಕ್ಕಿರುವುದು ತೆಂಗು ಬೆಳೆಗಾರರ ಸಂತಸಕ್ಕೆ ಕಾರಣವಾಗಿದೆ.

## ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ




ಬೆಂಗಳೂರು ಕೆಜಿಎಫ್ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಡಾ॥ ಎಂ. ರೂಪಕಲಾ ಶಶಿಧರ್ ಅವರ ಜನ್ಮ ದಿನಾಚರಣೆಯನ್ನು ಕೆಜಿಎಫ್ ರಾಬರ್ಟ್‌ಸನ್‌ಪೇಟೆಯ ನಗರಸಭಾ ಮೈದಾನದಲ್ಲಿ ಅದ್ದೂರಿಯಿಂದ ಆಚರಿಸಲಾಯಿತು.

ಇದೇ ಸಂದರ್ಭದಲ್ಲಿ ಈ ಬಾರಿ ಕೆಜಿಎಫ್ ತಾಲ್ಲೂಕೀನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದಿದ್ದ ಸುಮಾರು 206 ಮಂದಿ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರವನ್ನು ನೀಡಿ, ಗೌರವಿಸಿ, ಶಾಸಕರು ಪ್ರೋತ್ಸಾಹಿಸಿದರು.

ವಾಣಿ ನಿಲಯಂ ಉಚಿತ ವಾಚನಾಲಯ ಮತ್ತು ಗ್ರಂಥಾಲಯ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಡಾ॥ ಆರ್.ಪ್ರಭುರಾಂ ಅವರ ನೇತೃತ್ವದಲ್ಲಿ ಹಿರಿಯ ಕಾಂಗ್ರೆಸ್ ಮುಖಂಡ ಆರ್. ಸುಂದರ್, ಪಿ.ಸುದೀಶ್ ಮತ್ತಿತರರು ಶಾಸಕರಾದ ಡಾ॥ ಎಂ.ರೂಪಕಲಾ ಶಶಿಧರ್ ಅವರಿಗೆ ಜನುಮ ದಿನದ ಪ್ರಯುಕ್ತ ಹೂಗುಚ್ಛ, ನೆನಪಿನ ಕಾಣಿಕೆ, ಶುಭಾಶಯ ಪತ್ರವನ್ನು ನೀಡಿ ಗೌರವಿಸಿದರು.

ಕೆಜಿಎಫ್ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿ, ಉತ್ತಮ ಶಿಕ್ಷಣ, ಆರೋಗ್ಯ ಮತ್ತು ಮಹಿಳಾ ಸಬಲೀಕರಣಕ್ಕಾಗಿ ಶಾಸಕರಾದ ಡಾ॥ ಎಂ.ರೂಪಕಲಾ ಶಶಿಧರ್ ಅವರು ವಹಿಸುತ್ತಿರುವ ಕಾಳಜಿ ಮತ್ತು ಶ್ರಮವನ್ನು ಈ ಸಂದರ್ಭದಲ್ಲಿ ಶ್ಲಾಘಿಸಿದರು.

## ಪ್ರೀಮಿಯರ್ ಲೀಗ್ ಕ್ರಿಕೆಟ್ ಟೂರ್ನಿಮೆಂಟ್‌ಗೆ ಚಾಲನೆ



ಬೆಂಗಳೂರು

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ, ನಗರ್ತ ಯುವಕ ಸಂಘದ 'ಬೆಳ್ಳಿ ಹಬ್ಬ ಹಾಗೂ ವಿನಾಯಕ ಭಕ್ತ ಮಂಡಳಿಯ 91ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ನಗರ್ತ ಪ್ರೀಮಿಯರ್ ಲೀಗ್ (ಎನ್ಪಿಎಲ್) ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಪುರಸಭೆ ಮಾಜಿ ಅಧ್ಯಕ್ಷ ಎಂ.ಸತೀಶ್ ಕುಮಾರ್ ಚಾಲನೆ ನೀಡಿದರು.

ನಗರ್ತ ಯುವಕ ಸಂಘ, ವಿನಾಯಕ ಭಕ್ತ ಮಂಡಳಿ ಹಾಗೂ ಮಹಂತಿನ ಮಠದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ಕ್ರೀಡಾಕೂಟದಲ್ಲಿ ನಗರ್ತ ಸಮುದಾಯದ ಆಟಗಾರರು ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಅವರು, ಯುವಕರು ಸಂಘಟಿತರಾಗಬೇಕು, ಕ್ರೀಡೆಗಳ ಮೂಲಕ ದೈಹಿಕವಾಗಿ ಆರೋಗ್ಯವಂತರಾಗುವುದರ ಜೊತೆಗೆ, ಮಾನಸಿಕವಾಗಿಯೂ ಸದೃಢರಾಗಲು ಸಾಧ್ಯವಾಗುತ್ತದೆ. ಕ್ರೀಡಾಕೂಟದಲ್ಲಿ ಸೋಲು-ಗೆಲುವುಗಳು ಮಾನದಂಡವಾಗಬಾರದು, ಭಾಗವಹಿಸುವಿಕೆ ಮುಖ್ಯವಾಗಬೇಕು. ಇದರಿಂದ ತಾಳ್ಮೆ, ಒತ್ತಡದ ಪರಿಸ್ಥಿತಿಗಳನ್ನು ಹೇಗೆ ನಿಭಾಯಿಸುಬೇಕು ಎನ್ನುವುದು ಕಲಿಯುವುದಕ್ಕೆ ಹೆಚ್ಚು ಸಹಕಾರಿಯಾಗುತ್ತದೆ ಎಂದರು.

ಪುರಸಭೆ ಮಾಜಿ ಸದಸ್ಯ ಎಸ್.ಭಾಸ್ಕರ್ ಮಾತನಾಡಿ, ಯುವಕರು, ಕ್ರಿಕೆಟ್ ನ ಜೊತೆಗೆ ದೇಶೀಯ ಆಟಗಳನ್ನು ಆಡುವ ಕಡೆಗೆ ಹೆಚ್ಚು ಗಮನಹರಿಸಿ, ಇವು ನಿಮ್ಮನ್ನು ದೈಹಿಕವಾಗಿ ಹೆಚ್ಚು ಕ್ರೀಯಾಶೀಲರನ್ನಾಗಿಸಲು ಸಹಕಾರಿಯಾಗುತ್ತವೆ. ಪರಸ್ಪರ ಸ್ನೇಹಭಾವದಿಂದ ಆಟವಾಡಿ, ದುಶ್ಚಟಗಳಿಂದ ದೂರವಾಗಿದ್ದು, ನಿಮ್ಮ ಆರೋಗ್ಯವನ್ನು ಉತ್ತಮ ಪಡಿಸಿಕೊಳ್ಳಿ ಎಂದರು.

ನಗರೇಶ್ವರ ಸ್ವಾಮಿ ಅಭಿವೃದ್ಧಿ ಸಮಿತಿ ಗೌರವಾಧ್ಯಕ್ಷ, ಎನ್.ರುದ್ರಮೂರ್ತಿ, ಪುರಸಭೆ ಸದಸ್ಯೆ ಶಿಲ್ಪಾ ಅಜಿತ್, ವಿನಾಯಕ ಭಕ್ತ ಮಂಡಳಿ ಅಧ್ಯಕ್ಷ ಎಂ.ಶಂಕರ್, ನಗರ್ತ ಯುವಕ ಸಂಘದ ಅಧ್ಯಕ್ಷ ವಿ. ಬಸವರಾಜ್, ಮಹಂತಿನ ಮಠದ ಅಧ್ಯಕ್ಷ ಪುನೀತ್ ಕುಮಾರ್, ಕಾರ್ಯದರ್ಶಿ ವಿಶ್ವನಾಥ್, ಮಾಜಿ ಅಧ್ಯಕ್ಷ ಸಿ. ಭಾಸ್ಕರ್, ಕವಿ ಮಾ. ಸುರೇಶ್ ಬಾಬು, ನಿಖಿಲ್, ಪ್ರವೀಣ್, ಎ. ಮಧು ಮುಂತಾದವರು ಹಾಜರಿದ್ದರು.

## ಲಂಕಾದಿಂದ ಈಜಿಕೊಂಡು ಬಂದ ದಂಪತಿ

ರಾಮೇಶ್ವರಂ

ಶ್ರೀಲಂಕಾದಿಂದ ಭಾರತಕ್ಕೆ ಸುಮಾರು 32 ಕಿಲೋಮೀಟರ್ ಈಜುವ ಮೂಲಕ ಬೆಂಗಳೂರು ಮೂಲದ ಐಟಿ ವೃತ್ತಿಪರ ದಂಪತಿ ಇತಿಹಾಸ ನಿರ್ಮಿಸಿದ್ದಾರೆ.

ಡ್ಯಾನಿಶ್ ಅಬ್ದಿ ಮತ್ತು ವೃಶಾಲಿ ಪ್ರಸಾದೆ, ಐತಿಹಾಸಿಕ ರಾಮ ಸೇತು ಮಾರ್ಗದಲ್ಲಿ ಶ್ರೀಲಂಕಾದಿಂದ ಭಾರತಕ್ಕೆ ಈಜುವಿಕೆಯನ್ನು ಪೂರ್ಣಗೊಳಿಸಿದ ಮೊದಲ ದಂಪತಿಗಳಾಗಿದ್ದಾರೆ.

ಮೇ 7 ರಂದು, ಈ ಜೋಡಿ ಪಾಕ್ ಜಲಸಂಧಿಯಾದ್ಯಂತ ಸುಮಾರು 32 ಕಿಲೋಮೀಟರ್ ಈಜಿದೆ. ಶ್ರೀಲಂಕಾದ ತಲೈಮನ್ನಾರ್‌ನಿಂದ ಬೆಳಿಗ್ಗೆ 4:30 ರ ಸುಮಾರಿಗೆ ಪ್ರಾರಂಭಿಸಿ ಮಧ್ಯಾಹ್ನ 3:15ಕ್ಕೆ ತಮಿಳುನಾಡಿನ ಧನುಷ್ಕೋಟಿಯನ್ನು ತಲುಪಿತು. ಈ ಕಠಿಣ ಪ್ರಯಾಣ 10 ಗಂಟೆ 45 ನಿಮಿಷಗಳನ್ನು ತೆಗೆದುಕೊಂಡಿತು.

ದಂಪತಿ ಒರಟಾದ ಅಲೆಗಳು, ಬದಲಾಗುತ್ತಿರುವ ಗಾಳಿ ಮತ್ತು ಬಲವಾದ ಸಾಗರ ಪ್ರವಾಹಗಳೊಂದಿಗೆ ಹೋರಾಡುತ್ತಿರುವುದನ್ನು ಈ ಸಾಹಸದ ವೀಡಿಯೊ ತೋರಿಸಿದೆ. ಇತರರು ಜೋಡಿಯು ಪ್ರಕ್ಷುಬ್ಧ ಸಮುದ್ರಗಳ ಮೂಲಕ ಗಂಟೆಗಳ ಕಾಲ ಈಜುವುದನ್ನು ಮತ್ತು ಅಂತಿಮವಾಗಿ ಭಾರತದ ತೀರಕ್ಕೆ ಕಾಲಿಡುವುದನ್ನು ದಾಖಲಿಸಿದ್ದಾರೆ.

ಈಜುವಿಕೆಯನ್ನು ಕಟ್ಟುನಿಟ್ಟಾದ ಸುರಕ್ಷತಾ ಮೇಲ್ವಿಚಾರಣೆಯಲ್ಲಿ ನಡೆಸಲಾಗಿದೆ. ಬೆಂಬಲ ದೋಣಿಗಳು, ವೈದ್ಯರು ಮತ್ತು ಭಾರತೀಯ ಕೋಸ್ಟ್ ಗಾರ್ಡ್ ಸಿಬ್ಬಂದಿ ಮಾರ್ಗದುದ್ದಕ್ಕೂ ಈಜುಗಾರರೊಂದಿಗೆ ಇದ್ದರು.

ಈ ಜೋಡಿಯ ಸಾಧನೆ ಆನ್‌ಲೈನ್‌ನಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಗಿದೆ. ಅನೇಕ ಸಾಮಾಜಿಕ ಮಾಧ್ಯಮ ಬಳಕೆದಾರರು ದಂಪತಿಗಳ ಸಹಿಷ್ಣುತೆ, ಶಿಸ್ತು ಮತ್ತು ತಂಡದ ಕೆಲಸವನ್ನು ಶ್ಲಾಘಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy